22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 145 | ನವದೆಹಲಿ | ಬೆಲೆ ₹10 | ನವಂಬರ್ 25, 2024 ಸೋಮವಾರ

ಒಳಪುಟಗಳಲ್ಲಿ

ಪುಸ್ತಕಗಳು ಮನುಷ್ಯನ ಆತ್ಮೀಯ ಸ್ನೇಹಿತ -ಪು.4

ವಕ್ಫ್ ರಾದ್ಧಾಂತ: ಯತ್ನಾಳ್ ನೇತೃತ್ವದಲ್ಲಿ ಜನಜಾಗೃತಿ ಅಭಿಯಾನ - ಪು.5

ಪುಟ್ಟರಾಜ ಗವಾಯಿಗಳ 14ನೇ ಪುಣ್ಯಸ್ಮರಣೆ - ಪು.6

ಸೈಬರ್ ವಂಚನೆಯಿಂದ ವೃದ್ಧರ ರಕ್ಷಣೆ ಯುವಕರಿಗೆ ಪ್ರಧಾನಿ ಮೋದಿ ಕರೆ

ನವದೆಹಲ್ಲಿ, ನ.24: ಡಿಜಿಟಲ್ ಬಂಧನದ ಅಪಾಯದಿಂದ ವೃದ್ಧರನ್ನು ರಕ್ಷಿಸಲು ಯುವಕರು ಮುಂದಾಗಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಭಾನುವಾರ ಕರೆ ನೀಡಿದ್ದಾರೆ. ಇಂತಹ ಅಪರಾಧಗಳಿಗೆ ಹೆಚ್ಚಾಗಿ ಬಲಿಪಶುಗಳು ವೃದ್ಧರು ಮತ್ತು ಸೈಬರ್ ವಂಚನೆಯಿಂದ ಅವರನ್ನು ಸುರಕ್ಷಿತವಾಗಿರಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಪ್ರಧಾನಮಂತ್ರಿ ಒತ್ತಿ ಹೇಳಿದರು. ಸರ್ಕಾರದಲ್ಲಿ ಡಿಜಿಟಲ್ ಬಂಧನಕ್ಕೆ ಅವಕಾಶವಿಲ್ಲ ಎಂದು ನಾವು ಜನರಿಗೆ ಮತ್ತೆ ಮತ್ತೆ ವಿವರಿಸಬೇಕಾಗಿದೆ; ಇದು ಹಸಿ ಸುಳ್ಳು, ಜನರನ್ನು ಬಲೆಗೆ ಬೀಳಿಸುವ ಸಂಚು, ನಮ್ಮ ಯುವ ಸ್ನೇಹಿತರು ಈ ಕಾರ್ಯದಲ್ಲಿ ಪೂರ್ಣ ಸೂಕ್ಷ್ಮತೆಯಿಂದ ಭಾಗವಹಿಸುತ್ತಿರುವುದು ನನಗೆ ಸಂತೋಷ ತಂದಿದೆ. ಇತರರನ್ನೂ ಪ್ರೇರೇಪಿಸುತ್ತಿದ್ದಾರೆ, ಎಂದರು. ಅಂತಹ 1 ಲಕ್ಷ ಯುವಕರನ್ನು, ಹೊಸ ಯುವಕರನ್ನು ರಾಜಕೀಯಕ್ಕೆ ಸಂಪರ್ಕಿಸಲು, ದೇಶದಲ್ಲಿ ಅನೇಕ ವಿಶೇಷ ಅಭಿಯಾನಗಳನ್ನು ನಡೆಸಲಾಗುವುದು. ವಿಕಸಿತ ಭಾರತ ಯುವ ನಾಯಕರ ಸಂವಾದ ಕೂಡ ಅಂತಹ ಒಂದು ಪ್ರಯತ್ನವಾಗಿದೆ" ಎಂದು ಅವರು ಹೇಳಿದರು.

ಬಾಂಗ್ಲಾ: ಅದಾನಿ ಸಮೂಹದ ಇಂಧನ ಯೋಜನೆ ಪರಿಶೀಲನೆ

ಢಾಕಾ, ನ.24: ಭಾರತದ ಉದ್ಯಮಿ ಗೌತಮ್ ಅದಾನಿ ಸಮೂಹ ಸೇರಿದಂತೆ ವಿವಿಧ ವ್ಯಾಪಾರ ಸಂಸ್ಥೆಗಳ ಜತೆಗೆ ಮಾಡಿಕೊಂಡಿರುವ ವಿದ್ಯುತ್ ಸಂಬಂಧಿತ ಒಪ್ಪಂದಗಳ ಪರಿಶೀಲನೆಗೆ ಬಾಂಗ್ಲಾದೇಶ ಸರ್ಕಾರ ರಚಿಸಿರುವ ವರಿಶೀಲನಾ ಸಮಿತಿಯು, ತನಿಖಾ ಏಜೆನ್ಸಿಯ ನೆರವು ಪಡೆಯಲು ಶಿಫಾರಸು ಮಾಡಿದೆ. ಬಾಂಗ್ಲಾದ ಪದಚ್ಯುತ ಪ್ರಧಾನಿ ಶೇಖ್ ಹಸೀನಾ ಅವರ 2009– 2024ರ ಅವಧಿಯಲ್ಲಿ, ವಿದ್ಯುತ್ ಉತ್ಪಾದನೆ ಕುರಿತು ನಡೆದಿರುವ ಒಪ್ಪಂದಗಳನ್ನು ಪರಿಶೀಲಿಸಲು ಕಾನೂನು ಮತ್ತು ತನಿಖಾ ಏಜೆನ್ಸಿಯನ್ನು ನೇಮಿಸುವಂತೆ ವಿದ್ಯುತ್, ಇಂಧನ ಮತ್ತು ಖನಿಜ ಸಂಪನ್ಮೂಲಗಳ ಸಚಿವಾಲಯದ ರಾಷ್ಟ್ರೀಯ ಪರಿಶೀಲನಾ ಸಮಿತಿ ತಿಳಿಸಿದೆ.

ಅದಾನಿ ಪವರ್ ಲಿಮಿಟೆಡ್ ಅಂಗಸಂಸ್ಥೆಯಾದ ಅದಾನಿ (ಗೊಡ್ಡ) ಬಿಐಎಫ್ಟಿಸಿಎಲ್‌ನ 1234.4 ಮೆಗಾವಾಟ್ ಸಾಮರ್ಥ್ಯದ ಕಲ್ಲಿದ್ದಲು ಆಧಾರಿತ ಸ್ಥಾವರ, ಚೀನಾ ಕಂಪನಿಯ 1320 ಮೆಗಾವಾಟ್

ಸಾಮರ್ಥ್ಯದ ಕಲ್ಲಿದ್ದಲು ಆಧಾರಿತ ಸ್ಥಾವರ ಸೇರಿದಂತೆ ಏಳು ಪ್ರಮುಖ ಇಂಧನ ಮತ್ತು ವಿದ್ಯುತ್ ಯೋಜನೆಗಳನ್ನು ಸಮಿತಿಯು ಪರಿಶೀಲಿಸುತ್ತಿದೆ. ಉಳಿದ ಐದು ಯೋಜನೆಗಳು ಬಾಂಗ್ಲಾದೇಶದ ವ್ಯಾಪಾರಿ ಗುಂಪುಗಳಿಗೆ

ಸಂಬಂಧಿಸಿದ್ದಾಗಿವೆ ಎಂದು ಮಧ್ಯಂತರ ಸರ್ಕಾರದ ಮುಖ್ಯ ಸಲಹೆಗಾರ ಮುಹಮ್ಮದ್ ಯೂನಸ್ ಅವರ ಕಚೇರಿಯ ಪ್ರಕಟಣೆ ತಿಳಿಸಿದೆ. ಬಾಂಗ್ಲಾದೇಶ ಸರ್ಕಾರಕ್ಕೆ ಇತ್ತೀಚೆಗೆ ಪತ್ರ ಬರೆದಿದ್ದ ಅದಾನಿ ಗ್ರೂಪ್, ವಿದ್ಯುತ್ ಸರಬರಾಜು ಕುರಿತ 800 ಮಿಲಿಯನ್ ಡಾಲರ್ ಬಿಲ್ ಅನ್ನು ಬಾಂಗ್ಲಾದೇಶ ಬಾಕಿ ಇರಿಸಿಕೊಂಡಿರುವ ಕುರಿತು ಉಲ್ಲೇಖಿಸಿತ್ತು. ಅದಕ್ಕೆ ಪ್ರತಿಕ್ರಿಯಿಸಿದ್ದ ಬಾಂಗ್ಲಾದೇಶ ವಿದ್ಯುತ್ ಉತ್ಪಾದನಾ ಮಂಡಳಿಯು, ಡಾಲರ್ ಬಿಕ್ಕಟ್ಟಿನ ನಡುವೆಯೂ ಈಗಾಗಲೇ 150 ಮಿಲಿಯನ್ ಡಾಲರ್ ಅನ್ನು ಪಾವತಿಸಲಾಗಿದ್ದು, ಉಳಿದ ಮೊತ್ತವನ್ನು ಪಾವತಿಸಲಾಗುವುದು ಎಂದು ತಿಳಿಸಿದೆ.

ಭಾರತದಲ್ಲಿ ಸೌರಶಕ್ತಿಯಿಂದ ವಿದ್ಯುತ್ ಉತ್ಪಾದಿಸುವ ಯೋಜನೆಗಳ ಗುತ್ತಿಗೆಯನ್ನು ಸುಲಭವಾಗಿ ಪಡೆಯಲು ಅದಾನಿ ಅವರು ಅಧಿಕಾರಿಗಳಿಗೆ 25 (2,100) ನೀಡಿದ್ದಾರೆ ಇಲ್ಲವೆ ನೀಡಲು ಮುಂದಾಗಿದ್ದಾರೆ ಎಂದು ಅಮೆರಿಕ ಪ್ರಾಸಿಕ್ಯೂಟರ್‌ಗಳು ಅದಾನಿ ವಿರುದ್ಧ ಆರೋಪಪಟ್ಟಿ ಸಲ್ಲಿಸಿದ್ದಾರೆ. ಅಲ್ಲದೆ ಬಂಧನಕ್ಕೆ ಕೋರ್ಟ್ ವಾರಂಟ್ ಸಹ ಹೊರಡಿಸಿದೆ. ಈ ಬೆಳವಣಿಗೆಗಳ ಬೆನ್ನಲ್ಲೇ ಬಾಂಗ್ಲಾದೇಶ ಅದಾನಿ ಗ್ರೂಪ್ ಜತೆಗಿನ ಒಪ್ಪಂದಗಳ ಪರಿಶೀಲನೆಗೆ ಮುಂದಾಗಿದೆ.

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅಧ್ಯಕ್ಷತೆಯಲ್ಲಿ ಸಂಸತ್ತಿನ ಚಳಿಗಾಲದ ಅಧಿವೇಶನಕ್ಕೂ ಮುನ್ನ ಭಾನುವಾರ ನವದೆಹಲಿಯಲ್ಲಿ ಸರ್ವಪಕ್ಷಗಳ ಸಭೆ ನಡೆಯಿತು. ಕೇಂದ್ರ ಸಂಸದೀಯ ವ್ಯವಹಾರಗಳು ಮತ್ತು ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಭಾಗವಹಿಸಿದ್ದರು..

ಉಪಚುನಾವಣೆಯ ಫಲಿತಾಂಶ ಕ್ಲೀನ್‌ಚಿಟ್ ಅಲ್ಲ, ಸಿಎಂ ವಿರುದ್ಧ ಅಶೋಕ್ ವಾಗ್ದಾಳಿ

ಬಡವರ ಪರವೆನ್ನುವ ಸಿಎಂ ಎಷ್ಟು ಜಲಾಶಯ ನಿರ್ಮಿಸಿದ್ದಾರೆ

ಶ್ರೀರಂಗಪಟ್ಟಣ, ನ.24: ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮುಡಾ ಹಗರಣದ ಪ್ರಕರಣ ಇನ್ನೂ ನ್ಯಾಯಾಲಯದಲ್ಲಿದೆ. ಆದರೆ ಉಪಚುನಾವಣೆಯ ಫಲಿತಾಂಶವನ್ನೇ ಕ್ಲೀನ್ ಚಿಟ್ ಎನ್ನುತ್ತಿದ್ದಾರೆ. ಇದು ಕ್ಲೀನ್ ಚಿಟ್ ಅಲ್ಲ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಹೇಳಿದರು.

ಶ್ರೀರಂಗಪಟ್ಟಣ ತಾಲ್ಲೂಕಿನ ತಗ್ಗಳ್ಳಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಎಲ್ಲಿಯವರೆಗೆ ಬಡವರಿಗೆ ನ್ಯಾಯ ಸಿಗುವುದಿಲ್ಲವೋ, ಅಲ್ಲಿವರೆಗೆ ಪಾಪಿಗಳ ಸರ್ಕಾರ ಎಂದು ಹೇಳುತ್ತೇನೆ. ಉಪಚುನಾವಣೆಯಲ್ಲಿ ಕಾಂಗ್ರೆಸ್ ಕೇವಲ ಮೂರು ಸೀಟು ಗೆದ್ದಿದೆ. ಆದರೆ ಬಿಜೆಪಿ ಅಂದು 18 ಸೀಟು ಗೆದ್ದಿತ್ತು. ಮುಂದಿನ ವರ್ಷಗಳಲ್ಲಿ ಕಾಂಗ್ರೆಸ್ ಕೂಡ ಸೋತು ಮೂರು ನಾಮ ಹಾಕಿಕೊಳ್ಳಲಿದೆ.

ಕಾಂಗ್ರೆಸ್ ಅಧಿಕಾರದಲ್ಲಿರುವುದರಿಂದ ಭಯದಿಂದಾಗಿ ಅನೇಕರು ಸರ್ಕಾರಕ್ಕೆ ಬೆಂಬಲ ನೀಡಿದ್ದಾರೆ. ಇದು ಭವಿಷ್ಯ ಹೇಳುವ ಚುನಾವಣೆಯಲ್ಲ ಎಂದರು. ಚುನಾವಣಾ ಫಲಿತಾಂಶವನ್ನು ಕ್ಲೀನ್‌ಚಿಟ್ ಎನ್ನಲಾಗುವುದಿಲ್ಲ. ಕ್ಲೀನ್‌ಚಿಟ್ ನ್ಯಾಯಾಲಯ ಕೊಡಬೇಕಿದೆ. 14 ಸೈಟುಗಳನ್ನು ಲೂಟಿಮಾಡಿದ ಸಿಎಂ ಸಿದ್ದರಾಮಯ್ಯ ಅದನ್ನು ಬಡವರಿಗೆ ನೀಡಬೇಕಿತ್ತು. ಬಿಜೆಪಿ ಸರ್ಕಾರದ ವಿರುದ್ಧ 40 ಪರ್ಸೆಂಟ್ ಆರೋಪಕ್ಕೆ ಸಾಕ್ಷಿ ಇಲ್ಲದೆ ಪ್ರಕರಣ ಬಿದ್ದುಹೋಗಿದೆ. ಇದನ್ನೇ ಹೇಳಿಕೊಂಡು ಅಧಿಕಾರಕ್ಕೆ ಬಂದ ಕಾಂಗ್ರೆಸ್, ಜನರ ಮೇಲೆ ತೆರಿಗೆ ಹೊರೆ ಹೇರಿದೆ. ಜೊತೆಗೆ 1 ಲಕ್ಷ ಕೋಟಿ ರೂ. ಸಾಲ ಮಾಡಲಾಗಿದೆ ಎಂದು ದೂರಿದರು.

ಇದು ಹಣದ ಗೆಲುವು : ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಉಪಚುನಾವಣೆ ಹಣದ ಗೆಲುವೇ ಹೊರತು ಕಾಂಗ್ರೆಸ್ ಗೆಲುವಲ್ಲ. ಮೂರು ಕ್ಷೇತ್ರಗಳ ಗೆಲುವಿಗೆ ಕಾಂಗ್ರೆಸ್ ಅನವಶ್ಯಕವಾಗಿ ಬೀಗುತ್ತಿದೆ. ಲೋಕಸಭಾ ಚುನಾವಣೆಯಲ್ಲಿ ಡಿ.ಕೆ.ಸುರೇಶ್ ಸೋತಿದ್ದಕ್ಕೆ ಸಿಎಂ ಸಿದ್ದರಾಮಯ್ಯ ಕಾರಣ ಎಂಬುದನ್ನು ಡಿಸಿಎಂ ಡಿ.ಕೆ.ಶಿವಕುಮಾರ್ ಒಪ್ಪುವುದಿಲ್ಲ. ಕಾಂಗ್ರೆಸ್ಗೆ ಅಭ್ಯರ್ಥಿಯ ಗತಿ ಇಲ್ಲ ಎಂಬ ಕಾರಣಕ್ಕೆ ಬಿಜೆಪಿಯಲ್ಲಿದ್ದವರನ್ನು ಕರೆಸಿಕೊಳ್ಳಲಾಗಿದೆ. ಈ ಸೋಲಿನಿಂದ ಬಿಜೆಪಿಗೆ ಯಾವುದೇ ರೀತಿಯ ಹಿನ್ನಡೆಯಾಗುವುದಿಲ್ಲ. ಇದು ಬಿಜೆಪಿಗೆ ಮಾನದಂಡವೂ ಅಲ್ಲ ಎಂದರು. ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರದ ವಿರುದ್ಧ ಬಿಜೆಪಿ ಹೋರಾಟ ಮುಂದುವರಿಸಲಿದೆ. ಈ ಸೋಲನ್ನೇ ಗೆಲುವಾಗಿ ಪರಿವರ್ತಿಸಲಾಗುವುದು ಎಂದರು.

ಬಡವರ ಪರ ಎಂದು ಹೇಳುವ ಸಿಎಂ ಸಿದ್ದರಾಮಯ್ಯ ಎಷ್ಟು ಜಲಾಶಯ ನಿರ್ಮಿಸಿದ್ದಾರೆ, ಮೇಕೆದಾಟು ಎಂದು ಪ್ರತಿಭಟನೆ ಮಾಡಿ, ಅಲ್ಲಿ ಅಣೆಕಟ್ಟು ಕಟ್ಟುವ ಕೆಲಸ ಮಾಡಿಲ್ಲ.

ಒಂದೇ ಒಂದು ಆಸ್ಪತ್ರೆ ಕೂಡ ನಿರ್ಮಿಸಿಲ್ಲ. ಆದರೆ ಆಸ್ಪತ್ರೆಯಲ್ಲಿ ಶುಲ್ಕಗಳನ್ನು ಮಾತ್ರ ಏರಿಸಲಾಗಿದೆ. ಎಲ್ಲವೂ ಉಚಿತ ಎಂದು ಸುಳ್ಳು ಹೇಳಿ ಈಗ ಎಲ್ಲ ದರಗಳನ್ನು ಏರಿಸಲಾಗಿದೆ. ಮಹಿಳೆಯರಿಗೆ 2,000 ರೂ. ನೀಡುತ್ತಿದ್ದೇವೆ ಎಂದು ಹೇಳಿ ಇಡೀ ಕುಟುಂಬದ ಆರ್ಥಿಕತೆಯನ್ನು ಗುಡಿಸಿ ಹಾಕಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಈ ನಡುವೆ ವಕ್ಫ್ ಮಂಡಳಿಯಿಂದ ಹಿಂದೂ ದೇವಸ್ಥಾನಗಳ ಜಾಗ ಕಬಳಿಕೆಯಾಗಿದೆ. ಲಿಂಗಾಯತರ ಮಠದ ಜಾಗ, ಸ್ಮಶಾನ, ರೈತರ ಜಮೀನನ್ನು ತನ್ನದೇ ಎಂದು ವಕ್ಫ್ ಘೋಷಿಸಿಕೊಂಡಿದೆ. ಶ್ರೀರಂಗಪಟ್ಟಣದ ದೇವಸ್ಥಾನದ ಜಾಗವನ್ನು ಕೂಡ ವಕ್ಫ್ ಕಬಳಿಸಿದೆ. ಇಲ್ಲಿನ ಎಲ್ಲ ಭೂಮಿ ಮುಸ್ಲಿಮರದ್ದು ಎಂದು ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಹೇಳಿದ್ದರು. ಈಗ ಹಿಂದೂಗಳು ಎಚ್ಚೆತ್ತುಕೊಳ್ಳದಿದ್ದರೆ ಮುಂದಿನ ಪೀಳಿಗೆಗೆ ಏನೂ ಉಳಿಯುವುದಿಲ್ಲ ಎಂದರು.

ಚನ್ನಪಟ್ಟಣ ಅಭಿವೃದ್ಧಿಯೇ ನಮ್ಮ ಮೂಲ ಗುರಿ: ಡಿಸಿಎಂ ಭರವಸೆ

ರಾಮನಗರ, ನ.24: ಚನ್ನಪಟ್ಟಣ ಜನತೆಯ ಆಶೋತ್ತರಗಳನ್ನು ಈಡೇರಿಸುವ ಕೆಲಸವನ್ನು ಕಾಂಗ್ರೆಸ್ ಸರ್ಕಾರ ಮಾಡಲಿದೆ. ಮನೆ, ನಿವೇಶನ ಹಂಚಿಕೆ, ಬಗರ್ ಹುಕುಂ ಜಮೀನು ಹಕ್ಕು ಪತ್ರ ವಿತರಣೆ ಸೇರಿದಂತೆ ಚುನಾವಣೆಗೆ ಮುಂಚಿತವಾಗಿ ಕೊಟ್ಟಿರುವ ಎಲ್ಲಾ ಭರವಸೆಗಳನ್ನು ಈಡೇರಿಸುತ್ತೇವೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಭರವಸೆ ನೀಡಿದ್ದಾರೆ. ಕನಕಪುರ ನಿವಾಸದ ಬಳಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, "ಕ್ಷೇತ್ರದಲ್ಲಿ ಶಾಸಕ ಸ್ಥಾನ ಖಾಲಿಯಾದ ನಂತರ ಕೆಂಗಲ್ ಆಂಜನೇಯಸ್ವಾಮಿಗೆ ಪೂಜೆ ಸಲ್ಲಿಸಿ, ಜನರ ಸಮಸ್ಯೆಗಳನ್ನು ಆಲಿಸಲಾಯಿತು. ಈಗ ನಮಗೆ ಜನತೆ ಆಶೀರ್ವಾದ ಮಾಡಿದ್ದಾರೆ. ಋಣದ ಸಾಲದ ಹೊರೆ ಹೊರಿಸಿದ್ದಾರೆ. ಅಭಿವೃದ್ಧಿ ಕೆಲಸಗಳ ಮೂಲಕ ಆ ಋಣ ತೀರಿಸಲಾಗುವುದು ಎಂದರು"

ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗಾರೆಡ್ಡಿ ಅವರಿಗೆ ಕಾಲಿನ ಶಸ್ತ್ರ ಚಿಕಿತ್ಸೆಯಾಗಿದೆ. ಅವರು ಗುಣಮುಖರಾದ ನಂತರ ಬೆಳಗಾವಿ ಅಧಿವೇಶನಕ್ಕೆ ತೆರಳುವ ಮೊದಲು ಯೋಗೇಶ್ವರ್ ಅವರ ಜೊತೆಗೆ ಅಧಿಕಾರಿಗಳ ಸಭೆ ಕರೆದು ನಿವೇಶನ, ಮನೆ ಹಂಚಿಕೆ, ರಸ್ತೆ, ಕುಡಿಯುವ ನೀರಿನ ಸೌಲಭ್ಯ ಸೇರಿದಂತೆ ಎಲ್ಲಾ ಕೆಲಸಗಳಿಗೆ ಚಾಲನೆ ನೀಡಲಿದ್ದೇವೆ ಎಂದು ಹೇಳಿದರು.ಕಳೆದ ವಿಧಾನಸಭಾ ಚುನಾವಣೆಯಲ್ಲಿ 16 ಸಾವಿರ ಮತಗಳು ಬಂದಿದ್ದವು. ಲೋಕಸಭೆಯಲ್ಲಿ ಮತಗಳಿಕೆ ಹೆಚ್ಚಾಗಿತ್ತು. ಈ ಉಪ ಚುನಾವಣೆಯಲ್ಲಿ ಬಿಜೆಪಿ, ಜನತಾದಳದ ನಾಯಕರಿಂದ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಬೆಂಬಲ ದೊರೆತ ಕಾರಣಕ್ಕೆ ನಮಗೆ ಇಷ್ಟೊಂದು ಮತಗಳು ಬಂದಿವೆ. ಇದಕ್ಕಾಗಿ ಎಲ್ಲರಿಗೂ ಅಭಿನಂದನೆಗಳು. ಎಲ್ಲರೂ ಒಟ್ಟಿಗೆ ಸೇರಿ ಕ್ಷೇತ್ರದ ಅಭಿವೃದ್ಧಿ ಮಾಡೋಣ ಎಂದು ತಿಳಿಸಿದರು.

ಗೆಲುವಿನ ಶ್ರಮ ಯಾರಿಗೆ ಸೇರಬೇಕು? ಎಂದು ಕೇಳಿದಾಗ, ಇದು ಒಬ್ಬರಿಗೆ ಸೇರುವ ಗೆಲುವಲ್ಲ. ಎಲ್ಲರೂ ಸೇರಿ ಶ್ರಮಪಟ್ಟ ಕಾರಣಕ್ಕೆ ಗೆಲುವು ದೊರೆತಿದೆ. ಅಪೂರ್ವ ಸಹೋದರರಿಗೆ ಗೆಲುವಿನ ಗರಿ ಇಲ್ಲ. ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿ ಇರುವುದರಿಂದ ಯೋಗೇಶ್ವರ್ ಗೆಲ್ಲಿಸಿದರೆ ಕ್ಷೇತ್ರದ ಅಭಿವೃದ್ಧಿ ಸಾಧ್ಯ ಎಂದು ಮತದಾರರು ನಮ್ಮ ಪರ ನಿಂತಿದ್ದಾರೆ. ನಮ್ಮ ಮೇಲೆ ವಿಶ್ವಾಸವಿಟ್ಟು ಬೆಂಬಲಿಸಿ, ಗೆಲ್ಲಿಸಿದ್ದಾರೆ ಎಂದರು. ರಾಮನಗರ ಜಿಲ್ಲೆ ಜೆಡಿಎಸ್ ಮುಕ್ತವಾಯಿತೇ? ಎಂದು ಕೇಳಿದಾಗ, ಜೆಡಿಎಸ್ ಮುಕ್ತ ಮಾಡುವುದು ನಮಗೆ ಮುಖ್ಯವಲ್ಲ. 19 ಇದ್ದ ಆ ಪಕ್ಷದ ಶಾಸಕರ ಸಂಖ್ಯೆ 18ಕ್ಕೆ ಇಳಿದಿದೆ ಎಂದರು. ಉಪಚುನಾವಣೆ ಗೆಲುವಿನ ನಂತರ ಶಿವಕುಮಾರ್ ಅವರು ಸಿಎಂ ಆಗಬೇಕು ಎನ್ನುವ ಕೂಗಿನ ಪ್ರಶ್ನೆಗೆ ಉತ್ತರಿಸಿದ ಡಿಸಿಎಂ, ಅವರು ಇವರು ಮುಖ್ಯಮಂತ್ರಿ ಯಾಗಬೇಕು ಎನ್ನುವುದೆಲ್ಲಾ ಇಲ್ಲಿ ಗೌಣ. ನಮಗೆ ಅಭಿವೃದ್ಧಿ ಮುಖ್ಯ. ಕುಮಾರಸ್ವಾಮಿ ಅವರು ಕೊಟ್ಟ ಮಾತಿನಂತೆ ನಡೆದುಕೊಂಡಿಲ್ಲ, ನಾವು ಕ್ಷೇತ್ರವನ್ನು ಅಭಿವೃದ್ಧಿ ಮಾಡಿ ತೋರಿಸಬೇಕು ಎಂದು ತಿಳಿಸಿದರು.

ಕಾಂಗ್ರೆಸ್ ಗೆಲುವಿಗೆ ರಾಜ್ಯ ಬಿಜೆಪಿ ನಾಯಕರು ಬೆಂಬಲ ನೀಡಿದ್ದಾರೆಯೇ? ಎಂದಾಗ, ಶನಿವಾರದಂದು ಬಿಜೆಪಿ ನಾಯಕ ಅಶ್ವತ್ಥ್ ನಾರಾಯಣ್ ಅವರು "ಯೋಗೇಶ್ವರ್ ಅವರು ಗೆಲ್ಲುತ್ತಾರೆ ಅಂತಾ ನನಗೆ ಮೊದಲೇ ಗೊತ್ತಿತ್ತು" ಎಂದು ಹೇಳಿದ್ದಾರೆ. ಉಪಮುಖ್ಯಮಂತ್ರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದ ಅವರು ಈ ರೀತಿ ಹೇಳಲು ದಡ್ಡರೇ?. ಅವರಿಗೆ ಜನರ ನಾಡಿ ಮಿಡಿತ ಗೊತ್ತಿತ್ತು" ಎಂದು ಡಿಸಿಎಂ ಹೇಳಿದರು.ಕುಮಾರಸ್ವಾಮಿ ಅವರ ಹಣಬಲದ ಪ್ರತಿಕ್ರಿಯೆ ಬಗ್ಗೆ ಉತ್ತರಿಸಿದ ಡಿಸಿಎಂ, ಹಾಗಾದರೆ ಡಿ.ಕೆ ಸುರೇಶ್ ಅವರ ಸೋಲನ್ನು ಏನೆಂದು ಕರೆಯುವುದು? ಇದೇ ಯೋಗೇಶ್ವರ್ ಅವರು ಆಗ ಬಿಜೆಪಿಯಲ್ಲಿದ್ದರು. ಕುಮಾರಸ್ವಾಮಿ ಅವರು ತಮ್ಮ ಜನತಾದಳ ಮನೆತನದ ಬಾಮೈದನನ್ನು ಬಿಜೆಪಿಯಿಂದ ನಿಲ್ಲಿಸಿ ಗೆಲ್ಲಿಸಿದರು. ಇದಕ್ಕೆ ಯಾವ ಪದವನ್ನು ಜೋಡಣೆ ಮಾಡುತ್ತೀರಿ? ಎಂದು ಡಿಕೆಶಿ ಪ್ರಶ್ನಿಸಿದರು.

ನವದೆಹಲಿಯ ಜವಾಹರಲಾಲ್ ನೆಹರು ಕ್ರೀಡಾಂಗಣದಲ್ಲಿ ಭಾನುವಾರ ಒಡಿಶಾ ಪರ್ಬ 7ನೇ ಆವೃತ್ತಿಯ ಸಂದರ್ಭದಲ್ಲಿ ಭಾಗವಹಿಸಿದ್ದ ಪ್ರಧಾನಿ ನರೇಂದ್ರ ಮೋದಿ ಅವರನ್ನು ಸನ್ಮಾನಿಸಲಾಯಿತು. ಸಚಿವ ಧರ್ಮೇಂದ್ರ ಪ್ರದಾನ್ ಜೊತೆಯಲ್ಲಿದ್ದರು

ಒಡಿಶಾ ಪರ್ಬ: ಪ್ರಧಾನಿ ಭಾಗಿ

ಭುವನೇಶ್ವರ, ನ.24: ಭಾನುವಾರ ದೆಹಲಿಯಲ್ಲಿ ನಡೆದ ಒಡಿಶಾ ಪರ್ಬದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಿದ್ದರು.

ಈವೆಂಟ್‌ನಲ್ಲಿ ಪಾಲ್ಗೊಳ್ಳುವ ಮೊದಲು ತಮ್ಮ ಸಾಮಾಜಿಕ ಜಾಲತಾಣದಲ್ಲಿ ವಿಷಯ ಪ್ರಕಟಿಸಿದ ಪ್ರಧಾನಿ, ಒಡಿಶಾದ ಇತಿಹಾಸ ಮತ್ತು ಸಂಸ್ಕೃತಿಯನ್ನು ಆಚರಿಸುವ ಒಡಿಶಾ ಪರ್ಬದಲ್ಲಿ ಭಾಗಿಯಾಗುವ ಸುವರ್ಣ ಕ್ಷಣಗಳಿಗಾಗಿ ಕಾಯುತ್ತಿದ್ದೇನೆ ಎಂದು ತಿಳಿಸಿದ್ದರು. ಭಾರತದ ರೋಮಾಂಚಕ ಮತ್ತು ಸಾಂಸ್ಕೃತಿಕ ವೈವಿಧ್ಯತೆವನ್ನು ಒಡಿಶಾ ಪರ್ಬ ಎತ್ತಿ ತೋರಿಸುತ್ತದೆ.

ರಾಜ್ಯದ ಶ್ರೀಮಂತ ಸಾಂಸ್ಕೃತಿಕ ಪರಂಪರೆ ಮತ್ತು ಇತಿಹಾಸವನ್ನು ಪ್ರದರ್ಶಿಸಲು ಪ್ರತಿ ವರ್ಷ ಒಡಿಶಾ ಪರ್ಬವನ್ನು ಒಡಿಯಾ ಸಮಾಜ್, ಟ್ರಸ್ಟ್, ನವದೆಹಲಿಯಲ್ಲಿ ಆಯೋಜಿಸಿತ್ತು. ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ಹಾಗೂ ಇತರ ಮುಖಂಡರು ಪ್ರಧಾನಿ ಮೋದಿಗೆ ಸಾಥ್ ನೀಡಿದರು

ದ.ಕ.ಅಭಿವೃದ್ಧಿ ಕಾಮಗಾರಿ ಶೀಘ್ರ ಕಾರ್ಯಗತಕ್ಕೆ ಕ್ಯಾ.ಚೌಟ ಮನವಿ

ಬೆಂಗಳೂರು, ನ.24: ದಕ್ಷಿಣ ಕನ್ನಡದ ಸಮಗ್ರ ಅಭಿವೃದ್ಧಿಗೆ ಪೂರಕವಾಗಿರುವ ಪ್ರಸ್ತಾವಿತ ಪ್ರಮುಖ ಯೋಜನೆಗಳನ್ನು ಆದಷ್ಟು ಶೀಘ್ರ ಕಾರ್ಯಗತ ಗೊಳಿಸುವಂತೆ ಸಂಸದ ಕ್ಯಾಪ್ಟನ್

ನಿತ್ಯ ಪಂಚಾಂಗ 25.11.2024 ಸೋಮವಾರ



ಶ್ರೀ ಕ್ರೋಧಿ ನಾಮ ಸಂವತ್ಸರ,
ದಕ್ಷಿಣಾಯನ-ಶರದ್ ಋತು,
ಚಾಂದ್ರಮಾನ,
ಆಶ್ವಯುಜ ಕಾರ್ತಿಕ ಬಹುಳ

ದಶಮಿ, ಉತ್ತರಾ ನಕ್ಷತ್ರ,
ಕಾರ್ತಿಕ ಸೋಮವಾರ, ಕಾನಂಗಿ ಶ್ರೀನಿವಾಸ
ಲಕ್ಷದೀಪೋತ್ಸವ, ಬಸವನಗುಡಿ ಕಡಲೆಕಾಯಿ ಪರಿಷೆ,
ಹೊಂಬುಜ ಲಕ್ಷದೀಪ

ದಿನ	ರಾಹುಕಾಲ	ಯಮಗಂಡ	ಗುಳಿಕಕಾಲ
	ರಾಹುಕಾಲ	ಯಮಗಂಡ	ಗುಳಿಕಕಾಲ
ಭಾನು	4.30 – 6.00	12.00 – 1.30	3.00 – 4.30
ಸೋಮ	7.30 – 9.00	10.30 – 12.00	1.30 – 3.00
ಮಂಗಳ	3.00 – 4.30	9.00 – 10.30	12.00 – 1.30
ಬುಧ	12.00 – 1.30	7.30 – 9.00	10.30 – 12.00
ಗುರು	1.30 – 3.00	6.00 – 7.30	9.00 – 10.30
ಶುಕ್ರ	10.30 – 12.00	3.00 – 4.30	7.30 – 9.00
ಶನಿ	9.00 – 10.30	1.30 – 3.00	6.00 – 7.30

ಗೆದ್ದಿದ್ದೇವೆಂದು ಮತ್ತೆ ವಕ್ಫ್ ವಿವಾದ ಮುನ್ನಲೆಗೆ ತಂದರೆ

ಜನರಿಂದಲೇ ಪಾಠ: ಜೋಶಿ ಎಚ್ಚರಿಕೆ

ಹುಬ್ಬಳ್ಳಿ, ನ.24– ಉಪಚುನಾವಣೆ ಫಲಿತಾಂಶಕ್ಕೂ ವಕ್ಫ್ ಭೂ ವಿವಾದಕ್ಕೂ ಸಂಬಂಧವಿಲ್ಲ, ಈ ವಿವಾದದ ವಿರುದ್ಧ ನಮ್ಮ ಪಕ್ಷದ ಹೋರಾಟ ಮುಂದುವರೆಯಲಿದೆ. ಉಪಚುನಾವಣೆ ಗೆದ್ದೇವೆಂದು ಮತ್ತೆ ವಕ್ಫ್ ವಿವಾದ ಮುನ್ನೆಲೆಗೆ ತಂದರೆ ಇದೇ ಜನರಿಗೆ ತಕ್ಕ ಪಾಠ ಕಲಿಸಬೇಕಾಗುತ್ತದೆ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಸರ್ಕಾರಕ್ಕೆ ಎಚ್ಚರಿಕೆ ನೀಡಿದರು. ಮಾಧ್ಯಮಗಳೊದಿಗೆ ಮಾತನಾಡಿದ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿಯವರು, ವಕ್ಫ್ ಮಂಡಳಿಯ ಅಕ್ರಮ ಭೂ ಒತ್ತುವರಿ ವಿರುದ್ಧದ ಹೋರಾಟಕ್ಕೆ ಭಾರತೀಯ ಜನತಾ ಪಕ್ಷ ಪಕ್ಷ ಬದ್ಧವಾಗಿದೆ. ಮೂರು ಕ್ಷೇತ್ರಗಳ ಉಪಚುನಾವಣೆ ಯಲ್ಲಿ ಗೆದ್ದಿದ್ದೇವೆಂದು ಮತ್ತೆ ವಕ್ಫ್ ವಿಚಾರವನ್ನು ಮುನ್ನೆಲೆಗೆ ತಂದರೆ ಇದೇ ಜನ ತಕ್ಕ ಪಾಠ ಕಲಿಸುತ್ತಾರೆಂದು ಎಚ್ಚರಿಕೆ ನೀಡಿದರು. ವಕ್ಫ್ ಆಸ್ತಿಗಳ ಮೇಲೆ ಹಿಡಿತ ಸಾಧಿಸುವ ಉದ್ದೇಶವನ್ನು ಕಾಂಗ್ರೆಸ್ ಹೊಂದಿದೆ. ಆದರೆ, ಅವರ ಈ ಪ್ರಯತ್ನಕ್ಕೆ ನಾವು ಅವಕಾಶ ನೀಡುವದಿಲ್ಲ. ಈ ಸಮಯ ಶಾಶ್ವತವಾಗಿ ಉಳಿಯು ವುದಿಲ್ಲ. ಹೀಗಾಗಿ, ಕಾಂಗ್ರೆಸ್ ವಕ್ಫ್ ವಿಷಯದಲ್ಲಿನ ತನ್ನ ಹುಚ್ಚುತನವನ್ನು ನಿಲ್ಲಿಸಬೇಕೆಂದು ಹೇಳಿದರು.

ಉಪಚುನಾವಣೆ ಸೋಲು ಕುರಿತು ಮಾತನಾಡಿ, ಉಪ ಚುನಾವಣೆಯಲ್ಲಿ ಜನ ಆಡಳಿತಾರೂಢ ಪಕ್ಷಕ್ಕೆ ಜೈಕಾರ ಹಾಕೋದು ಸಹಜ. ಕ್ಷೇತ್ರದ ಅಭಿವೃದ್ಧಿ, ಹೆಚ್ಚಿನ ಅನುದಾನ ನಿರೀಕ್ಷಿಸಿ ಆಡಳಿತಾರೂಢ ಅಕ್ಷಕ್ಕೆ ಜೈಕಾರ ಹಾಕುತ್ತಾರೆ. ಆದರೆ, ಈ ಚುನಾವಣೆಯಲ್ಲಿ ಆಡಳಿತಾರೂಢರ ಹಣ-ಹೆಂಡ ಕೆಲಸ ಮಾಡಿದೆ. ಒಂದೊಂದು ಗ್ರಾಮ ಪಂಚಾಯತಿ ವ್ಯಾಪ್ತಿಯಯಲ್ಲಿ ಒಬ್ಬಿಬ್ಬರು ಸಚಿವರು, 10-15 ಶಾಸಕರು ಬೀಡು ಬಿಟ್ಟು ಹಣ ಬಲದಿಂದ ಚುನಾವಣೆ ಎದುರಿಸಿದ್ದಾರೆ. ಜೊತೆಗೆ ಸರ್ಕಾರದ ಮಶಿನರಿಗಳ ದುರ್ಬಳಕೆ ಆಗಿರುವುದೂ ಮೇಲ್ನೋಟಕ್ಕೆ ಕಾಣುತ್ತಿದೆ ಎಂದು ಹೇಳಿದರು. ರಾಜ್ಯ ಉಪ ಚುನಾವಣೆ ಸೋತಿದ್ದೇವೆ ನಿಜ. ಆದರೆ, ನಾವು ಕಾಂಗ್ರೆಸ್ ನವರ ಹಾಗೆ ಇವಿಎಂ ದೋಷ ಅಂತ ಹೇಳುತ್ತಿಲ್ಲ. ಬೈ ಎಲೆಕ್ಷನ್ ಅಲ್ಲಿ ಆಡಳಿತಾರೂಢ ಅಲೆ ಸಾಮಾನ್ಯ. ಬಿಜೆಪಿಯೂ ಹಿಂದೆ ಅನೇಕ ಬಾರಿ ಉಪ ಚುನಾವಣೆಗಳಲ್ಲಿ ಗೆದ್ದಿದೆ. 2019ರ ಬಳಿಕ ನಡೆದಂತಹ ಉಪ ಚುನಾವಣೆ ಗಳಲ್ಲಿ ಗೆದ್ದಿದ್ದೇವೆ. ಆದರೆ, ಸಾರ್ವತ್ರಿಕ ಚುನಾವಣೆಯಲ್ಲಿ ಸೋತಿದ್ದಿದೆ. ಈ ಬಾರಿ ಜನ ತೀರ್ಮಾನ ಮಾಡಿದ್ದರೆ ಗೆಲ್ಲಬಹುದಿತ್ತು ಎಂದು ತಿಳಿಸಿದರು. ಚುನಾವಣೆ ಸೋಲಿನ ಬಗ್ಗೆ ಬಿಜೆಪಿ ನಾಯಕರು ಆತ್ಮವಿಮರ್ಶೆ ಮಾಡಿಕೊಳ್ಳುತ್ತೇವೆ. ಸೋಲಾದ ಮಾತ್ರಕ್ಕೆ ಕಾಂಗ್ರೆಸ್ ಪಕ್ಷದವರ ಹಾಗೆ ಇವಿಎಂ ದೋಷ ಎನ್ನುವುದಿಲ್ಲ. ಒಂದೆರೆಡು ರಾಜ್ಯಗಳಲ್ಲಿ ಬಿಟ್ಟರೆ ದೇಶಾದ್ಯಂತ ಕಾಂಗ್ರೆಸ್ ನಶಿಸಿ ಹೋಗುತ್ತಿದೆ. ಸಂಪೂರ್ಣ ನೆಲಕಚ್ಚಿದೆ. ಎಂದು ಜೋಶಿ ಟೀಕಿಸಿದರು.

ಕರ್ನಾಟಕ ಸುವರ್ಣ ಸಂಭ್ರಮ ಕನ್ನಡ ಕಾರ್ಯಕ್ರಮ

ಬೆಂಗಳೂರು, ನ.24–ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಬೆಂಗಳೂರು, ಕರ್ನಾಟಕ ರಕ್ಷಣಾ ವೇದಿಕೆ, ಗೋವಾ ಘಟಕದ ವತಿಯಿಂದ ಗೋವಾದ ವಾಸ್ಕೋದಲ್ಲಿ ರವೀಂದ್ರ ಭವನದಲ್ಲಿ-ಕನ್ನಡ ಸಾಂಸ್ಕೃತಿಕ ಕಾಯಕ್ರಮ ಹಾಗೂ ಕರ್ನಾಟಕ ಸುವರ್ಣ ಸಂಭ್ರಮ ಕನ್ನಡ ಕಾರ್ಯಕ್ರಮಗಳು ಇಂದು ಜರುಗಿದವು.

ಸದಾನಂದ ಸೇಠ ತಾನಾವಾಡೆ, ರಾಜ್ಯ ಸಭಾ ಸದಸ್ಯರು, ಗೋವಾ, ಮಾವಿನೊ ಗುರಿನೋ, ಸಚಿವರು, ಸಾರಿಗೆ ಸಂಸ್ಥೆ ಮತ್ತು ಪಂಚಾಯತ ಇಲಾಖೆ, ಗೋವಾ, ಸಂಕಲ್ಪ ಅಮಣೋಕರ, ಶಾಸಕರು, ಮರ್ಮ ಗೋವಾ ಕ್ಷೇತ್ರ, ಕೃಷ್ಣಾ(ದಾಜಿ) ಸಾಳಕರ, ಶಾಸಕರು, ವಾಸ್ಕೋ ಕ್ಷೇತ್ರ, ಸೋಮಣ್ಣ ಬೇವಿನಮರದ, ಅಧ್ಯಕ್ಷರು, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ, ಗಿರೀಶ ಬೋರಕರ, ನಗರಸಭೆ ಅಧ್ಯಕ್ಷರು, ಎಂ.ಎಂ.ಸಿ ವಾಸ್ಕೋ, ಪ್ರವೀಣ್ ಕುಮಾರ್ ಶೆಟ್ಟಿ, ರಾಷ್ಟ್ರೀಯ ಅಧ್ಯಕ್ಷರು, ಕರ್ನಾಟಕ ರಕ್ಷಣಾ ವೇದಿಕೆ, ಗೋವಾ, ಮಂಜುನಾಥ ನಾಟೇಕರ್, ರಾಜ್ಯಾಧ್ಯಕ್ಷರು, ಕರವೇ ಗೋವಾ, ಪ್ರಕಾಶ್ ಮತ್ತೀಹಳ್ಳಿ, ಕಾರ್ಯದರ್ಶಿ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಹಾಗೂ ಇತರೆ ಕನ್ನಡ ಪರ ಸಂಘ/ಸಂಸ್ಥೆಗಳ ಅಧ್ಯಕ್ಷರು ಭಾಗವಹಿಸಿದ್ದರು.

ಕನ್ನಡ ಸಾಂಸ್ಕೃತಿಕ ಕಾರ್ಯ ಕ್ರಮಗಳು, ಜನಪದ ನೃತ್ಯ, ಕನ್ನಡ ಗೀತೆಗಳ ಕಾರ್ಯಕ್ರಮ ಜರುಗಿದವು. ಇದೇ ಸಂದರ್ಭದಲ್ಲಿ ಗೋವಾದಲ್ಲಿ ಕನ್ನಡ ಭವನ ನಿರ್ಮಾಣದ ಸ್ಥಳ ಪರಿಶೀಲನೆ ಮಾಡಲಾಯಿತು.

ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರು ಮುಂದೆ ಬಂದು ನಾಯಕತ್ವ ಗುಣ ಬೆಳೆಸಿಕೊಳ್ಳಲು ಕರೆ

5 ಗ್ಯಾರಂಟಿ ಯೋಜನೆಗಳು ಮಹಿಳೆಯರಿಗೆ ಪೂರಕ: ಡಿಸಿಎಂ ಡಿ.ಕೆ.ಶಿವಕುಮಾರ್

ಹಾಸನ, ನ.24– ಗ್ಯಾರಂಟಿ ಯೋಜನೆಗಳು ಮಹಿಳೆಯರ ಅಭಿವೃದ್ಧಿಗೆ ಪೂರಕವಾಗಿವೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಕನಕಪುರದಲ್ಲಿ ಮಾತನಾಡಿದ ಅವರು, ಮಹಾರಾಷ್ಟ್ರದಲ್ಲಿ ಗೃಹ ಲಕ್ಷ್ಮೀ ಯೋಜನೆ ನಕಲು ಮಾಡಿದ ಪರಿಣಾಮ ಬಿಜೆಪಿಗೆ ಗೆಲುವುಂಟಾಗಿದೆ ಎಂದು ತಿಳಿಸಿದ್ದಾರೆ.

ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರು ಮುಂದೆ ಬಂದು ನಾಯಕತ್ವ ಗುಣವನ್ನು ಬೆಳೆಸಿಕೊಳ್ಳುವಂತೆ ಕರೆ ನೀಡಿದ್ದಾರೆ. ಇದೇ ವೇಳೆ, 2025ರಲ್ಲಿ ಕನಕಪುರ ಅಭಿವೃದ್ಧಿಗೆ ಹೊಸ ಕಾರ್ಯಕ್ರಮ ಹಮ್ಮಿಕೊಳ್ಳ ಲಾಗುವುದು ಎಂದು ಭರವಸೆ ನೀಡಿದ್ದಾರೆ. ಚನ್ನಪಟ್ಟಣ ಜನರ ಆಶೋತ್ತರಗಳನ್ನು ಈಡೇರಿ ಸುವ ಕೆಲಸವನ್ನು ಸರ್ಕಾರ ಮಾಡ ಲಿದೆ. ಮನೆ ನಿವೇಶನ ಹಂಚಿಕೆ, ಬಗರ್ಹುಕ್ಕುಂ ಹಕ್ಕು ಪತ್ರ ವಿತರಣೆ ಸೇರಿದಂತೆ ಚುನಾವಣೆಗೆ ಮುಂಚಿತವಾಗಿ ನೀಡಿರುವ ಎಲ್ಲಾ ಭರವಸೆಗಳನ್ನು ಈಡೇರಿಸಲಾಗುವುದು ಎಂದು ತಿಳಿಸಿದ್ದಾರೆ. ಅಭಿವೃದ್ಧಿ ಕೆಲಸಗಳ ಮೂಲಕ ಚನ್ನಪಟ್ಟಣ ಜನರ ಋಣ ತೀರಿಸಲಾಗುವುದು ಎಂದೂ ಹೇಳಿದ್ದಾರೆ.

ಜನಾದೇಶವನ್ನೇ ಮುಂದಿಟ್ಟು ಸಿದ್ದರಾಮಯ್ಯ ಪರ ಸಮಾವೇಶಕ್ಕೆ ಸಜ್ಜು

ಹಾಸನ, ನ.24– ರಾಜ್ಯದಲ್ಲಿ ತೀವ್ರ ಕುತೂಹಲ ಮೂಡಿಸಿದ್ದ ಉಪ ಚುನಾವಣೆಯ ಫಲಿತಾಂಶ ಪ್ರಕಟವಾಗಿದೆ. ಅಚ್ಚರಿಯ ರೀತಿಯಲ್ಲಿ ಮೂರಕ್ಕೆ ಮೂರು ಸ್ಥಾನ ಗೆದ್ದು ಬೀಗಿರುವ ಕಾಂಗ್ರೆಸ್ ಪಡೆ ಇದೀಗ ಪ್ರತಿಪಕ್ಷಗಳ ಆರೋಪಗಳಿಗೆ ತಿರುಗೇಟು ನೀಡಲು, ಜನಾದೇಶವನ್ನೇ ಮುಂದಿಟ್ಟುಕೊಂಡು ಸಿಎಂ ಸಿದ್ದರಾಮಯ್ಯ ಪರ ಸಮಾವೇಶ ನಡೆಸಲು ಮುಂದಾಗಿದೆ.

ವಾಲ್ಮೀಕಿ ನಿಗಮ ಹಗರಣ, ಮುಡಾ ಹಗರಣ, ವಕ್ಫ್ ವಿವಾದ, ರೇಷನ್ ಕಾರ್ಡ್ ರದ್ದು ಜಟಾಪಟಿ, ಅಬಕಾರಿ ಲಂಚ, ಹೀಗೆ ಸಾಲು ಸಾಲು ಆರೋಪ, ವಿಪಕ್ಷಗಳ ಹೋರಾಟದಿಂದ ಬೆಂಡಾಗಿದ್ದ ಕಾಂಗ್ರೆಸ್ ಸರ್ಕಾರಕ್ಕೆ ಈಗ ಚುನಾವಣೆ ಫಲಿತಾಂಶ ಹೊಸ ಭರವಸೆ ನೀಡಿದೆ. ಪಕ್ಷಕ್ಕೆ ಹೊಸ ಉತ್ಸಾಹ ದೊರೆತಿರುವ ಈ ಸಂದರ್ಭದಲ್ಲೇ ಸಿದ್ದರಾಮಯ್ಯ ಅಭಿಮಾನಿಗಳ ಹೆಸರಿನಲ್ಲಿ ಅವರ ಬೆಂಬಲಿಗ ಸಚಿವರು ಹಾಸನದಲ್ಲಿ ಬೃಹತ್ ಸಮಾವೇಶ ನಡೆಸಲು ಸಜ್ಜಾಗಿದ್ದಾರೆ. ಡಿಸೆಂಬರ್ 5 ರಂದು ಸರ್ಕಾರ ಹೊರತುಪಡಿಸಿ, ಅಭಿಮಾನಿಗಳಿಂದಲೇ ಸಮಾವೇಶ ನಡೆಸಲು ತೀರ್ಮಾನಿಸಿದ್ದಾರೆ. ಹಾಸನದಲ್ಲಿ ಇಂದು ಸಿದ್ದರಾಮಯ್ಯ ಆಪ್ತ ವಲಯದ ನಾಲ್ವರು ಸಚಿವರು, ಅವರ ಪುತ್ರ ಯತೀಂದ್ರ ಸೇರಿ ಹಲವು ಕಾಂಗ್ರೆಸ್ ನಾಯಕರು ಜಂಟಿಯಾಗಿ ಸಭೆ ನಡೆಸಿದ್ದು, ಸಿದ್ದು ಸ್ವಾಭಿಮಾನಿ ಸಮಾವೇಶ ನಡೆಸುವುದಾಗಿ ಘೋಷಣೆ ಮಾಡಿದ್ದಾರೆ.

25 ವರ್ಷಗಳ ಹಿಂದೆ ಅಹಿಂದಾ ಸಮಾವೇಶ ನಡೆಸಿ ಸಿದ್ದರಾಮಯ್ಯಗೆ ಶಕ್ತಿ ತುಂಬಿದ್ದ ಹಾಸನದ ನೆಲದಲ್ಲಿ ಹಾಸನ, ಮಂಡ್ಯ, ಮೈಸೂರು, ಚಾಮರಾಜನಗರ, ಕೊಡಗು, ಮೈಸೂರು, ಚಿಕ್ಕಮಗಳೂರು ಜಿಲ್ಲೆಯ ಜನರನ್ನು ಸೇರಿಸಿ 'ಸಿದ್ದು ಸ್ವಾಭಿಮಾನಿ ಸಮಾವೇಶ' ನಡೆಸಲು ತೀರ್ಮಾನ ಮಾಡಲಾಗಿದೆ. ಹಾಸನದಲ್ಲಿ ಇಂದು ಸಚಿವರಾದ ಎಚ್ಸಿ ಮಹದೇವಪ್ಪ, ಕೆಎನ್ ರಾಜಣ್ಣ, ಪಿರಿಯಾಪಟ್ಟಣ ವೆಂಕಟೇಶ, ಬೋಸರಾಜು, ಶಾಸಕರಾದ ಶಿವಲಿಂಗೇಗೌಡ, ಸಂಸದ ಶ್ರೇಯಸ್ ಪಟೇಲ್, ಸಿದ್ದು ಪುತ್ರ ಯತೀಂದ್ರ ಸಭೆ ನಡೆಸಿ ಸಮಾವೇಶದ ಬಗ್ಗೆ ಘೋಷಣೆ ಮಾಡಿದ್ದಾರೆ. ಇದು ಸರ್ಕಾರದ ಕಾರ್ಯಕ್ರಮ ಅಲ್ಲ, ಪಕ್ಷದ ಕಾರ್ಯಕ್ರಮವೂ ಅಲ್ಲ ಎಂದು ಸಚಿವ ಮಹದೇವಪ್ಪ ಹೇಳಿದ್ದಾರೆ. ಸಿದ್ದರಾಮಯ್ಯ ಅವರ ಅಭಿಮಾನಿಗಳು ಬಂದು ಕೇಳಿಕೊಂಡರು. ಹಾಗಾಗಿ ನಾವು ಅವರಿಗೆ ಸಹಾಯ ಮಾಡುತ್ತೇವೆ, 40 ವರ್ಷ ಅತ್ಯಂತ ಕ್ಲೀನ್ ಇಮೆಜ್ನಿಂದ ರಾಜಕೀಯ ನಡೆಸಿದ ಸಿದ್ದರಾಮಯ್ಯ ಅವರ ಹೆಸರಿಗೆ ಕುಂದು ತರುವ ಕೆಲಸ ನಡೆದಿದ್ದು, ಇದರ ವಿರುದ್ಧ ಅವರ ಅಭಿಮಾನಿಗಳೇ ಸಮಾವೇಶ ನಡೆಸಲು ಮುಂದಾಗಿ ದ್ದಾರೆ. ಈ ಹಿಂದೆ ಹಾಸನದಲ್ಲಿಯೇ ಅಹಿಂದ ಸಮಾವೇಶ ನಡೆದಿತ್ತು. ಈಗ ಮತ್ತೆ ಸಿದ್ದು ಅಭಿಮಾನಿಗಳು ಸ್ವಾಭಿಮಾನಿ ಸಮಾವೇಶ ನಡೆಸಲಿದ್ದಾರೆ ಎಂದು ಮಹದೇವಪ್ಪ ತಿಳಿಸಿದ್ದಾರೆ.ಹಾಸನದಲ್ಲಿ ಸಮಾವೇಶ ನಡೆಸುವ ಬಗ್ಗೆ ವಾರದ ಹಿಂದೆಯೇ ಬೆಂಗಳೂರಿನಲ್ಲಿ ಘೋಷಣೆ ಮಾಡಿದ್ದ ಸಚಿವ ರಾಜಣ್ಣ, ಇಂದು ಮೂವರು ಸಚಿವರ ಜೊತೆಗೆ ಹಾಸನಕ್ಕೆ ಆಗಮಿಸಿ ಚರ್ಚೆ ನಡೆಸಿದರು.

ಬೃಹತ್ ಸಮಾವೇಶ ನಡೆಸಲು ಬೇಕಾದ ಸ್ಥಳ ಪರಿಶೀಲನೆ ನಡೆಸಿ ಚರ್ಚೆ ನಡೆಸಿದರು.ಸಿದ್ದರಾಮಯ್ಯ ವಿರುದ್ಧ ಸಾಲು ಸಾಲು ಆರೋಪ ಮಾಡಿ ಜೆಡಿಎಸ್, ಬಿಜೆಪಿ ನಡೆಸಿದ ಹೋರಾಟಕ್ಕೆ ತಮ್ಮ ಬೆಂಬಲಿಗರ ಮೂಲಕ ಸೆಡ್ಡು ಹೊಡೆಯಲು ಮುಂದಾಗಿರುವ ಸಿದ್ದರಾಮಯ್ಯ, ಅದಕ್ಕಾಗಿ ಜೆಡಿಎಸ್ ಭದ್ರಕೋಟೆ ಎಂದು ಕರೆಸಿಕೊಳ್ಳುತ್ತಿದ್ದ ಮಾಜಿ ಪ್ರಧಾನಿ ದೇವೇಗೌಡರ ಕರ್ಮಭೂಮಿ, ತವರು ಜಿಲ್ಲೆಯನ್ನೇ ಆಯ್ಕೆ ಮಾಡಿಕೊಂಡಿದ್ದಾರೆ. ಲಕ್ಷ ಲಕ್ಷ ಬೆಂಬಲಿಗರ ಸಮಾವೇಶ ನಡೆಸುವ ಮೂಲಕ ವಿರೋಧಿಗಳಿಗೆ ಸೆಡ್ಡು ಹೊಡೆಯುವುದರ ಜೊತೆಗೆ, ಪಕ್ಷದೊಳಗಿನ ತಮ್ಮ ವಿರೋಧಿಗಳಿಗೂ ಪರೋಕ್ಷವಾಗಿ ಎಚ್ಚರಿಕೆ ನೀಡಲು ಸಿದ್ದರಾಮಯ್ಯ ಮುಂದಾಗಿದ್ದಾರೆ ಎನ್ನಲಾಗಿದೆ.ಒಟ್ಟಿನಲ್ಲಿ, ನಾಲ್ಕು ದಶಕಗಳ ಸುದೀರ್ಘ ರಾಜಕಾರಣದಲ್ಲಿ ತಮ್ಮದೇ ವರ್ಚಸ್ಸು ಹೊಂದಿದ್ದ ಸಿದ್ದರಾಮಯ್ಯ ಈಗ ಮುಡಾ ಹಗರಣದಲ್ಲಿ ಲೋಕಾಯುಕ್ತ ತನಿಖೆ ಎದುರಿಸಿದ್ದು, ಜಾರಿ ನಿರ್ದೇಶನಾಲಯ ದಲ್ಲಿಯೂ ಪ್ರಕರಣ ಎದುರಿಸುತ್ತಿದ್ದಾರೆ. ಹೀಗೆ ಹಲವು ಆರೋಪಗಳನ್ನು ಎದುರಿಸುತ್ತಿರುವಾಗಲೇ ತಮ್ಮ ಬೆಂಬಲಿಗರ ಮೂಲಕ ರಾಜಕೀಯ ವಿರೋಧಿಗಳಿಗೆ ಸೆಡ್ಡು ಹೊಡೆಯಲು ಸಜ್ಜಾಗಿದ್ದಾರೆ.

ನಟ ದರ್ಶನ್ ಜಾಮೀನು ರದ್ದತಿ ಮನವಿಗೆ ಕ್ರಮ: ಪರಮೇಶ್ವರ್

ಬೆಂಗಳೂರು, ನ.25: ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಕೊಲೆ ನಡೆದ ಜಾಗದಲ್ಲಿ ನಟ ದರ್ಶನ್ ಇದ್ದ ಬಗ್ಗೆ ಫೋಟೋ ಸಿಕ್ಕ ಹಿನ್ನೆಲೆ ದರ್ಶನ್ ಜಾಮೀನು ರದ್ದತಿ ಬಗ್ಗೆ ಕ್ರಮ ಜರುಗಿಸುವುದಾಗಿ ಗೃಹ ಸಚಿವ ಪರಮೇಶ್ವರ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಮಾತಾಡಿದ ಅವರು, ದರ್ಶನ್ ಜತೆಗಿದ್ದ ಇತರ ಆರೋಪಿಗಳ ಮೊಬೈಲ್ ಫೋನ್‌ಗಳನ್ನು ಎಫ್‌ಎಸ್‌ಎಲ್ ವರದಿಗಾಗಿ ಹೈದರಾಬಾದ್‌ಗೆ ಕಳುಹಿಸಲಾಗಿತ್ತು.

ಕೊಲೆ ನಡೆದ ಸ್ಥಳದಲ್ಲಿ ದರ್ಶನ್ ಇರುವ ಫೋಟೋಗಳು ಲಭ್ಯವಾಗಿದೆ. ಮೇಲ್ನೋಟಕ್ಕೆ ದರ್ಶನ್ ಪಾತ್ರ ದೊಡ್ಡದಾಗಿ ಕಾಣುತ್ತಿದೆ. ಹೀಗಾಗಿ ದರ್ಶನ್ ಜಾಮೀನು ರದ್ದು ಮಾಡುವಂತೆ ಕೋರ್ಟ್ ಗೆ ಮನವಿ ಸಲ್ಲಿಸುವುದಾಗಿ ಹೇಳಿದ್ದಾರೆ. ಯಾರೋ ಜೊತೆಯಲ್ಲಿದ್ದವನು ವಿಡಿಯೊ ಮಾಡಿಕೊಂಡಿದ್ದ, ಅದನ್ನು ನ್ಯಾಯಾಲಯಕ್ಕೆ ಸಲ್ಲಿಸಿ ಜಾಮೀನು ರದ್ದುಪಡಿಸಬೇಕು, ಮುಂದಿನ ಕ್ರಮದ ಬಗ್ಗೆ ತನಿಖೆ ನಡೆಯುತ್ತಿದೆ ಎಂದರು.ದರ್ಶನ್ ಬೆನ್ನು ಆಪರೇಶನ್ ಮಾಡಿಸಿಲ್ಲ. ಹಾಗೆಯೇ ಕಾಲ ಕಳೆಯುತ್ತಿದ್ದಾರೆ.

ದರ್ಶನ್‌ಗೆ ಆಪರೇಷನ್ ಅಗತ್ಯ ಇಲ್ಲ ಎಂದು ಇದರಿಂದ ಗೊತ್ತಾಗುತ್ತದೆ. ಆಪರೇಷನ್ ಮಾಡದಿದ್ದರೆ ಬೆನ್ನುಮೂಳೆ ಮುರಿದು ಹೋಗುತ್ತದೆ ಎಂದು ಹೇಳುತ್ತಿದ್ದರು. ಇಷ್ಟು ದಿನವಾದರೂ ವೈದ್ಯರು ಆಪರೇಷನ್ ಮಾಡಿಲ್ಲ, ಕೋರ್ಟ್ ಈ ಬಗ್ಗೆ ಗಮನ ಹರಿಸಿ ಸೂಕ್ತ ಆದೇಶ ನೀಡಬೇಕು ಎಂದರು.

ಉಪಚುನಾವಣೆಯಲ್ಲಿ ಬಿಜೆಪಿ ಸೋಲಿಗೆ ರಾಜ್ಯಾಧ್ಯಕ್ಷ ವಿಜಯೇಂದ್ರ ಕಾರಣರಲ್ಲ: ವಿಧಾನ ಪರಿಷತ್ ಸದಸ್ಯ ರವಿಕುಮಾರ್ ಸ್ಪಷ್ಟನೆ

ಬೆಂಗಳೂರು,ನ.24– ರಾಜ್ಯದಲ್ಲಿ ನಡೆದ 3 ವಿಧಾನಸಭಾ ಉಪ ಚುನಾವಣೆಯಲ್ಲಿ ಬಿಜೆಪಿ ಸೋತಿರುವುದಕ್ಕೆ ಕೇವಲ ರಾಜ್ಯಾಧ್ಯಕ್ಷರೊಬ್ಬರೇ ಹೊಣೆಯಲ್ಲ ಎಂದು ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ್ ಅವರು ತಿಳಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಈ ಸೋಲಿಗೆ ಪಕ್ಷವೇ ಜವಾಬ್ದಾರಿ ಹೊರಲಿದೆ. ಪಕ್ಷವು ಇದನ್ನು ಸವಾಲಾಗಿ ತೆಗೆದುಕೊಳ್ಳಲಿದೆ; ಮುಂದಿನ ದಿನಗಳಲ್ಲಿ ಬಿಜೆಪಿಯನ್ನು ಬೂತ್ ಮಟ್ಟದಿಂದ ಸಂಘಟಿಸಿ ಮತ್ತೆ ರಾಜ್ಯದಲ್ಲಿ ಅಧಿಕಾರಕ್ಕೆ ತರಲಿದ್ದೇವೆ ಎಂದು ವಿಶ್ವಾಸದಿಂದ ತಿಳಿಸಿದರು.

ಕಾಂಗ್ರೆಸ್ಸಿಗರು ವಾಮ ಮಾರ್ಗದ ಮೂಲಕ, ವಕ್ರ ಮಾರ್ಗದ ಮೂಲಕ,

ಹಣವನ್ನು ಹರಿಸುವ ಮೂಲಕ, ಜಾತಿ ವಿಷಬೀಜವನ್ನು ಬಿತ್ತಿ, ಅಲ್ಪಸಂಖ್ಯಾತರನ್ನು ಸಂಪೂರ್ಣವಾಗಿ ಒಗ್ಗಟ್ಟು ಮಾಡಿ, ಮುಖ್ಯಮಂತ್ರಿಗಳು ತಾನು ಸಿಎಂ ಆಗಿ 5 ವರ್ಷ ಇರಬೇಕೋ ಬೇಡವೋ ಎಂದು ಮಂತ್ರಿಗಳಿಗೆ, ಶಾಸಕರಿಗೆ ಕೇಳಿ, ಭಯವನ್ನುಂಟು ಮಾಡಿ ಒಗ್ಗಟ್ಟಾಗಿ ಚುನಾವಣೆಯನ್ನು ಎದುರಿಸಿ ಗೆದ್ದಿದ್ದಾರೆ. ಎನ್ಡಿಎ 3 ಸೀಟುಗಳನ್ನು ಸೋತಿದೆ. ಸೋಲಿನ ಅವಲೋಕನ ಮಾಡಿ ಬಿಜೆಪಿಯನ್ನು ಒಂದು ಬಲಿಷ್ಠ ಸಂಘಟ

ಬಿಜೆಪಿಯಲ್ಲಿ ಸಮರ್ಥ ನಾಯಕತ್ವ ಇಲ್ಲ: ಜಿ.ಪರಮೇಶ್ವರ್

ಬೆಂಗಳೂರು, ನ.24 ; ಮತಯಂತ್ರಗಳ ವ್ಯವಸ್ಥೆ ಇರುವವರೆಗೂ ಕಾಂಗ್ರೆಸ್ಸಲ್ಲ ಅಥವಾ ಬೇರೆ ಪಕ್ಷಗಳು ಗೆಲುವು ಸಾಧಿಸಲು ಕಷ್ಟ ಎಂದು ಬಹುತೇಕರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಯವರು ಬಹಳ ಬುದ್ಧಿವಂತಿಕೆಯಿಂದ ಇವಿಎಂಗಳನ್ನು ಹ್ಯಾಕ್ ಮಾಡುತ್ತಿದ್ದಾರೆ. ಅವರಿಗೆ ಎಲ್ಲಿ ಬೇಕೋ ಅಲ್ಲಿ ಇವಿಎಂಗಳನ್ನು ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ. ಇದನ್ನು ಅವರು ಕರಗತ ಮಾಡಿಕೊಂಡಿದ್ದಾರೆ ಎಂದರು.

ಕರ್ನಾಟಕದಲ್ಲಿ ಇವಿಎಂ ಹ್ಯಾಕ್ ಆಗದೇ ಇರುವುದಕ್ಕೆ ಸಕಾರಣವಿದೆ. ಇಲ್ಲಿ ಯಡಿಯೂರಪ್ಪ ಅವರ ನಂತರ ಬಿಜೆಪಿಯಲ್ಲಿ ಸಮರ್ಥ ನಾಯಕತ್ವ ಇರಲಿಲ್ಲ. ಹೀಗಾಗಿ ಕರ್ನಾಟಕವನ್ನು ಬಿಟ್ಟುಬಿಟ್ಟಿದ್ದಾರೆ. ಇವಿಎಂ ಹ್ಯಾಕಿಂಗ್ ಇಲ್ಲ ಎಂಬ ನಂಬಿಕೆ ಸೃಷ್ಟಿಸಲು ಒಂದು ರಾಜ್ಯವನ್ನು ಬಿಟ್ಟುಬಿಡುತ್ತಾರೆ ಎಂದು ಹೇಳಿದರು. ಇವಿಎಂ ಹ್ಯಾಕ್ ಮಾಡಲು ತಾಂತ್ರಿಕವಾಗಿ ಅವಕಾಶವಿದೆ ಎಂಬುದು ವೈಜ್ಞಾನಿಕವಾಗಿ ಸಾಬೀತಾಗಿದೆ. ಹೀಗಾಗಿಯೇ

ನಮಗೆ ಅಪನಂಬಿಕೆ ಹೆಚ್ಚಾಗುತ್ತಿದೆ ಎಂದರು. ಕಾಂಗ್ರೆಸ್ ಪಕ್ಷ ಇವಿಎಂ ಹ್ಯಾಕ್ ಮಾಡಲು ಅವಕಾಶವಿಲ್ಲ.

ಅಧಿಕಾರ ಅವರ ಕೈಲಿದೆ. ಅವಕಾಶಗಳೂ ಅವರಿಗೇ ಇದೆ. ಮುಂದಿನ ದಿನಗಳಲ್ಲಿ ಬಿಜೆಪಿ ಶಾಶ್ವತವಾಗಿ ಅಧಿಕಾರದಲ್ಲಿರುವಂತ ವಾತಾವರಣ ಇವಿಎಂ ಹ್ಯಾಕ್ನಿಂದಾಗಿ ಕಂಡುಬರುತ್ತಿದೆ. ಇದು ನನ್ನ ವೈಯಕ್ತಿಕ ಹೇಳಿಕೆ ಅಲ್ಲ. ನಮ ನಾಯಕರುಗಳು ವ್ಯಕ್ತಪಡಿಸಿದ ಅಭಿಪ್ರಾಯಗಳು ಎಂದು ಹೇಳೀದರು. ಒಂದು ದೇಶ, ಒಂದು ಪಕ್ಷ ಎಂಬ ದಿಕ್ಕಿನಲ್ಲೇ ರಾಜಕಾರಣವನ್ನು ಸಜ್ಜುಗೊಳಿಸಲಾಗುತ್ತಿದೆ.

ಜಾರ್ಖಂಡ್ನಲ್ಲಿ ಜೆಎಂಎಂ ಗೆದ್ದಿದೆ. ಕಾಂಗ್ರೆಸ್ ಬಲವಾಗಿಲ್ಲ. ಜೆಎಂಎಂನಿಂದ ನಮಗೆ ಅಪಾಯವಿಲ್ಲ. ಹಾಗಾಗಿ ಅಂತಹ ಪಕ್ಷ ಇರಲಿ ಎಂದು ಬಿಟ್ಟುಕೊಡುವಂತಿದೆ ಎಂದರು. ಕಳೆದ 15 ವರ್ಷಗಳಿಂದಲೂ ಇವಿಎಂ ಬೇಡ, ಮತಯಂತ್ರಗಳೇ ಬೇಕು ಎಂದು ನಾವು ಹೋರಾಟ ಮಾಡುತ್ತಿದ್ದೇವೆ. ಅಮೆರಿಕ, ಯುರೋಪ್ ಸೇರಿದಂತೆ ಹಲವು ದೇಶಗಳಲ್ಲಿ ಮತಪತ್ರಗಳನ್ನು ಬಳಕೆ ಮಾಡುತ್ತಿವೆ. ಎಐಸಿಸಿ ಸಮಿತಿ ರಚನೆ ಮಾಡಿ ಚಿದಂಬರಂ, ಕಪಿಲ್ ಸಿಬಾಲ್, ರಮೇಶ್ಜಯರಾಂ ಮತ್ತು ನಾನು ಸದಸ್ಯರಾಗಿದ್ದೆವು. ನಾವು ಚುನಾವಣಾ ಆಯೋಗದ ಮುಂದೆ ಹೋಗಿ ಇವಿಎಂ ಅನ್ನು ಯಾವ ರೀತಿ ಹ್ಯಾಕ್ ಮಾಡಬಹುದು ಎಂದು ತಾಂತ್ರಿಕವಾಗಿ ಪ್ರಾತ್ಯಕ್ಷಿಕೆ ಮಾಡಿ ವಿವರಿಸಿದ್ದೆವು. ಇಡೀ ದಿನ ಆಯೋಗದವರು ಪ್ರಾತ್ಯಕ್ಷಿಕೆ ಯನ್ನು ಗಮನಿಸಿದರು. ನಂತರ ನಾವು ರೂಲಿಂಗ್ ನೀಡುತ್ತೇವೆ ಎಂದು ಭರವಸೆ ನೀಡಿದರು. ಮಾರನೇ ದಿನ ಇವಿಎಂ ತೆಗೆಯಲಾಗುವುದಿಲ್ಲ ಎಂದು ಆಯೋಗ ಪ್ರಕಟಿಸಿತ್ತು ಎಂದರು.

1952 ರಿಂದ ಇತ್ತೀಚಿನವರೆಗೂ ಬ್ಯಾಲೆಟ್ ಪೇಪರ್ನಲ್ಲೇ ಯಶಸ್ವಿಯಾಗಿ ಚುನಾವಣಾ ವ್ಯವಸ್ಥೆಯನ್ನು ನಡೆಸಿರಲಿಲ್ಲವೇ, ಅದರಲ್ಲೂ ಒಂದೊಂದೇ ರಾಜ್ಯಗಳ ಚುನಾವಣೆ ನಡೆದಿತ್ತು. ಯಾವುದೇ ತೊಂದರೆ ಇರಲಿಲ್ಲ. ಈಗಲೂ ಮತಯಂತ್ರ ತೆಗೆದು ಮತಪತ್ರಗಳಿಗೆ ಮರಳುವುದು ಸೂಕ್ತ ಎಂದು ಹೇಳಿದರು. ಸುಪ್ರೀಂಕೋರ್ಟ್ನಲ್ಲೂ ಈ ಬಗ್ಗೆ ಮೇಲನವಿ ಸಲ್ಲಿಸಲಾಗಿತ್ತು. ಅವರೂ ಕೂಡ ಒಪ್ಪಿಲ್ಲ. ಚುನಾವಣಾ ಆಯೋಗಕ್ಕೆ ಮನವರಿಕೆಯಾದ ಮೇಲೆ ವ್ಯವಸ್ಥೆ ಬದಲಾವಣೆ ಬೇಡ ಎಂದಿದ್ದಾರೆ. ಮತ್ತೆ ಎಲ್ಲಿ ಹೋಗಿ ನಾವು ಕೇಳಬೇಕು, ಜನರಂತೂ ಮತಯಂತ್ರಗಳಿಗೆ ವಿರುದ್ಧವಾಗಿದ್ದಾರೆ ಎಂದರು. ತಾಂತ್ರಿಕವಾಗಿ ಇವಿಎಂ ಹ್ಯಾಕ್ ಮಾಡಲು ಅವಕಾಶವಿದೆ ಎಂದು ಆಯೋಗದ ಮುಂದೆ ನೇರವಾಗಿ ಸಾಬೀತುಪಡಿಸಿದ್ದೇವೆ. ಜರ್ಮನ್ ಸಂಸದರ ನಿಯೋಗ ಒಮೆ ಭಾರತಕ್ಕೆ ಬಂದಾಗ ಇವಿಎಂ ಮಿಷಿನ್ನಲ್ಲಿ ಏನಾಗಲಿದೆ ಎಂಬುದನ್ನು ನೋಡಲು ಸಾಧ್ಯವಿಲ್ಲ. ಹೀಗಾಗಿ ಆ ಯಂತ್ರದ ಮೇಲೆ ಏಕೆ ನಂಬಿಕೆ ಇಡಬೇಕು ಎಂದು ಪ್ರಶ್ನೆ ಮಾಡಿದರು. ತಂತ್ರಜ್ಞಾನದಲ್ಲಿ ಮುಂದೆ ಇರುವ ಜರ್ಮನ್ನರು ಈ ರೀತಿ ಹೇಳುತ್ತಿದ್ದಾರೆ ಎಂದರು.

ನಿನ್ನೆ ಮಹಾರಾಷ್ಟ್ರ ಚುನಾವಣೆಯಲ್ಲಿ ಕೆಸಿಸಿ ಅಧ್ಯಕ್ಷ ನಾನಾಪಟೋಲೆ 136 ಮತಗಳಲ್ಲಿ ಸೋಲು ಕಂಡಿದ್ದರು. ಮರು ಎಣಿಕೆಯಾದಾಗ ಅವರು ಗೆದ್ದರು. ಮತಯಂತ್ರಗಳಲ್ಲಿ ಕರಾರುವಾಕ್ಕಾಗಿದ್ದರೆ ಫಲಿತಾಂಶ ಖಚಿತವಾಗಿರ ಬೇಕಿತ್ತು. ಬದಲಾವಣೆ ಆಗಿದ್ದೇಗೆ ಎಂದು ಪ್ರಶ್ನಿಸಿದರು. ಬಿಜೆಪಿಯವರು ಬೇಕಾದ ಕಡೆಯಲ್ಲಿ ಇವಿಎಂ ಹ್ಯಾಕ್ ಮಾಡುತ್ತಾರೆ. ಮಹಾರಾಷ್ಟ್ರದಂತಹ ದೊಡ್ಡರಾಜ್ಯ ನಮ ಕೈಯಲ್ಲಿರಬೇಕು. ಜಾರ್ಖಂಡ್ನಂತಹ ಸಣ್ಣ ರಾಜ್ಯ ಹೋದರೆ ಹೋಗಲಿ ಎಂಬಂತೆ ನಡೆದುಕೊಂಡಿದ್ದಾರೆ. ರಾಜ್ಯದಲ್ಲಿ ಇವಿಎಂ ಹ್ಯಾಕ್ ಮಾಡಿದರೆ ಮೂರೂ ಕ್ಷೇತ್ರದ ಉಪಚುನಾವಣೆಯಲ್ಲಿ ಅವರೇ ಗೆಲ್ಲುತ್ತಿದ್ದರು. ಆದರೆ ಇಲ್ಲಿ ಅದಾಗಿಲ್ಲ. ಇವಿಎಂ ಹ್ಯಾಕಿಂಗ್ ಉನ್ನತ ಮಟ್ಟದ ರಹಸ್ಯ. ಕುಮಾರಸ್ವಾಮಿ, ಬಸವರಾಜ ಬೊಮಾಯಿ ಅವರಂತಹವರ ಹಂತದಲ್ಲಿ ಇಲ್ಲ ಎಂದರು.

ಮಹಾರಾಷ್ಟ್ರದಲ್ಲಿ ಟಿಕೆಟ್ ನೀಡುವಲ್ಲಿ ಕಾಂಗ್ರೆಸ್ನಲ್ಲಿ ಸಾಕಷ್ಟು ವಿಳಂಬವಾಗಿತ್ತು. ನಾಮಪತ್ರ ಸಲ್ಲಿಸಲು ಕೊನೆಯ ದಿನದವರೆಗೂ ಅಭ್ಯರ್ಥಿಗಳ ಆಯ್ಕೆ ನಡೆದಿತ್ತು. ಪಕ್ಷದಲ್ಲೂ ಸಾಕಷ್ಟು ಗೊಂದಲಗಳಿದ್ದವು. ನಾಯಕತ್ವಕ್ಕಾಗಿ 2–3 ಮಂದಿ ಪ್ರಯತ್ನಿಸುತ್ತಿದ್ದರು. ಮಹಾವಿಕಾಸ ಅಘಾಡಿ ಪಾಲುದಾರ ಪಕ್ಷವಾಗಿರುವ ಎನ್ಸಿಪಿಯಲ್ಲಿ ಶರದ್ ಪವಾರ್ ಅವರ ಗುಂಪು, ಶಿವಸೇನೆಯ ಉದ್ಧವ್ ಠಾಕ್ರೆ ಗುಂಪುಗಳ ನಡುವೆ ಕೂಡ ಗೊಂದಲವಿತ್ತು. ಅದರ ಪರಿಣಾಮ ಕೂಡ ನಮ ಪಕ್ಷದ ಮೇಲಾಗಿದೆ ಎಂದು ಹೇಳಿದರು. ಕಾಂಗ್ರೆಸ್ 103 ಕ್ಷೇತ್ರಗಳಲ್ಲಿ ಸ್ಪರ್ಧಿಸಿದ್ದು, 16 ರಲ್ಲಿ ಮಾತ್ರ ಗೆದ್ದಿದ್ದೇವೆ. ಬಹಳಷ್ಟು ಕಡೆ ಮೈತ್ರಿ ಇದ್ದರೂ ಕೂಡ ನಮ ಪಕ್ಷದ ಕಾರ್ಯಕರ್ತರಿಗೆ ಅವರ ಪಕ್ಷದವರು ನಮಗೆ ಕೆಲಸ ಮಾಡಲಿಲ್ಲ. ವಿಧರ್ಭದಲ್ಲಿ 50 ಕ್ಷೇತ್ರಗಳ ಪೈಕಿ ಕೇವಲ 8 ಕ್ಷೇತ್ರಗಳು ಮಾತ್ರ ಗೆಲುವು ಸಾಧಿಸಿದ್ದೇವೆ ಎಂದರು.

ಬಿಜೆಪಿಗೆ ಧರ್ಮ ರಾಜಕಾರಣದಿಂದ ಯಾವುದೇ ಪ್ರಯೋಜನವಾಗಿಲ್ಲ

ಬೆಳಗಾವಿ, ನ.24 : ಅಹಿಂದ ಮತಗಳ ಯಶಸ್ವಿ ಕ್ರೋಡೀಕರಣವು ಶಿಗ್ಗಾಂವಿ ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವಿಗೆ ಕಾರಣವಾಗಿದೆ ಎಂದು ಸಚಿವ ಸತೀಶ್ ಜಾರಕಿಹೊಳಿಯವರು ಹೇಳಿದ್ದಾರೆ. ಬೆಳಗಾವಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಯ ಹಿಂದೂ–ಮುಸ್ಲಿಂ ರಾಜಕಾರಣವನ್ನು ಹತ್ತಿಕ್ಕಲು ಕಾಂಗ್ರೆಸ್ ಯತ್ನ ನಡೆಸಿದ್ದು, ಮತದಾರರನ್ನು ಸೆಳೆಯುವಲ್ಲಿ ಯಶಸ್ವಿಯಾಗಿದೆ ಎಂದು ಹೇಳಿದರು.

ಪಕ್ಷದ ಅಭ್ಯರ್ಥಿ ಯಾಸೀರ್ ಪಠಾಣ್ ಅವರ ಗೆಲುವು ಕಾಂಗ್ರೆಸ್ ಪಕ್ಷದ ಮೇಲಿನ ಮುಸ್ಲಿಮರ

ವಿಶ್ವಾಸವನ್ನು ಹೆಚ್ಚಿಸಿದೆ. ಶಿಗ್ಗಾಂವಿಯಲ್ಲಿ ಎಲ್ಲಾ ಹಿಂದುಳಿದ ವರ್ಗಗಳು ಮತ್ತು ಒಬಿಸಿಗಳನ್ನು ಒಗ್ಗೂಡಿಸಿ ಬಿಜೆಪಿಯನ್ನು ಸೋಲಿಸಲು ಪರಿಣಾಮಕಾರಿ ಕಾರ್ಯತಂತ್ರವನ್ನು ರೂಪಿಸಲಾಗಿತ್ತು. ಕ್ಷೇತ್ರದಾದ್ಯಂತ ಪಕ್ಷದ ಪ್ರಚಾರಕ್ಕಾಗಿ ಕಾಂಗ್ರೆಸ್ ಮುಖಂಡರು ಮತ್ತು ಕಾರ್ಯಕರ್ತರು ಶ್ರಮಿಸಿದ್ದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಾಯಕತ್ವ ಮತ್ತು ಸರ್ಕಾರದ ಎಲ್ಲ ಗ್ಯಾರಂಟಿ ಯೋಜನೆಗಳ ಯಶಸ್ವಿ ಅನುಷ್ಠಾನವೂ ಪಠಾಣ್ ಅವರ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದೆ ಎಂದು ತಿಳಿಸಿದರು. ಶಿಗ್ಗಾಂವಿಯಲ್ಲಿ ನಾಯಕತ್ವದ ಬಿಕ್ಕಟ್ಟಿನಿಂದಾಗಿ ಅಲ್ಲಿನ ಐದೂ ವಿಧಾನಸಭಾ ಚುನಾವಣೆಯಲ್ಲಿ ಪಕ್ಷ ಸೋಲು ಕಂಡಿತ್ತು.

ಹೀಗಾಗಿ ಬಹುತೇಕ ಸಮೀಕ್ಷೆಗಳು ಶಿಗ್ಗಾಂವಿಯಲ್ಲಿ ಕಾಂಗ್ರೆಸ್ ಸೋಲು ಕಾಣುವ ಭವಿಷ್ಯ ನುಡಿದಿತ್ತು. ಆದರೆ, ಪಕ್ಷದ ಪ್ರಬಲ ಪ್ರಚಾರ ಕೊನೆಗೂ ಫಲ ನೀಡಿದೆ ಎಂದರು. ಧರ್ಮದ ವಿಚಾರ ಮುಂದಿಟ್ಟುಕೊಂಡು ಬಿಜೆಪಿ ಹಲವು ಚುನಾವಣೆಯನ್ನು ಗೆದ್ದಿದೆ. ಆದರೆ, ಈ ಬಾರಿ ಬಿಜೆಪಿಗೆ ಧರ್ಮ ರಾಜಕಾರಣದಿಂದ ಯಾವುದೇ ಪ್ರಯೋಜನವಾಗಿಲ್ಲ, ಕಳೆದ ಲೋಕಸಭಾ ಚುನಾವಣೆಯಲ್ಲಿ ಚಿಕ್ಕೋಡಿ ಲೋಕಸಭಾ ಕ್ಷೇತ್ರದಲ್ಲಿ ಪ್ರಿಯಾಂಕಾ ಜಾರಕಿಹೊಳಿ ಅವರು ಬಿಜೆಪಿ ಅಭ್ಯರ್ಥಿಯನ್ನು ಸೋಲಿಸಲು ಇದೇ ರೀತಿಯ ಕಾರ್ಯತಂತ್ರವನ್ನು ರೂಪಿಸಿದ್ದೆವು. ಶಿಗ್ಗಾಂವಿಯಲ್ಲೂ ಈ ತಂತ್ರ ಸಹಾಯ ಮಾಡಿದೆ. ಶಿಗ್ಗಾಂವಿ ಗೆಲುವು ಪಕ್ಷಕ್ಕೆ ದೊಡ್ಡ ಉತ್ತೇಜನ ನೀಡಿದೆ ಎಂದು ತಿಳಿಸಿದರು.

ನಾವೇನೂ ಖಾವಿ ತೊಟ್ಟ ಸನ್ಯಾಸಿಗಳಲ್ಲ: ಹರಿಪ್ರಸಾದ್

ಮಂಗಳೂರು, ನ.24 : ಮಹಾರಾಷ್ಟ್ರ ವಿಧಾನಸಭೆ ಚುನಾವಣೆಯಲ್ಲಿ ಮಹಾ ವಿಕಾಸ ಅಘಾಡಿ ಸೋಲಾಗಿದೆ. ಬಿಜೆಪಿಯಿಂದ ಮಹಾರಾಷ್ಟ್ರಕ್ಕೆ ಕಂಟೈನರ್ನಲ್ಲಿ ಹಣ ಬಂದಿದೆ. ಹಣ ಎಣಿಸುವ ಮಷಿನ್ ಬಿಟ್ಟು ತೂಕದ ಲೆಕ್ಕದಲ್ಲಿ ಖರ್ಚು ಮಾಡಿದ್ದಾರೆ ಎಂದು ಕಾಂಗ್ರೆಸ್ ಎಂಎಲ್ಸಿ ಹರಿಪ್ರಸಾದ್ ಆರೋಪ ಮಾಡಿದ್ದಾರೆ. ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಹಾರಾಷ್ಟ್ರದಲ್ಲಿ ತೂಕದ ಲೆಕ್ಕದಲ್ಲಿ ಹಣ ಖರ್ಚು ಮಾಡಿದ್ದಾರೆ ಎಂದು ಬಿಜೆಪಿ ವಿರುದ್ಧ ಆರೋಪಿಸಿದ್ದಾರೆ. ರಾಜ್ಯದ ಉಪಚುನಾವಣೆಯಲ್ಲಿ ಗೆಲುವು

ಸಾಧಿಸಿ ಇತಿಹಾಸ ಸೃಷ್ಟಿಸಿದೆ. ಕರ್ನಾಟಕದಲ್ಲಿ ಎಲ್ಲೂ ಸಹ ಕೋಮು ಸೌಹಾರ್ದ ಕದಡಲು ಅವಕಾಶ ನೀಡಿಲ್ಲ. ರಾಜ್ಯದಲ್ಲಿ ಬೇರೆ ಪಕ್ಷಗಳು ಭಾರಿ ಹಣದ ಹೊಳೆ ಹರಿಸಿತ್ತು. ನಾವು ಕೂಡ ಅವರಿಗಿಂತ ಹೆಚ್ಚು ಪೈಪೋಟಿ ನೀಡಿದ್ದೇವೆ.

ನಾವೇನು ಖಾವಿ ತೊಟ್ಟ ಸನ್ಯಾಸಿಗಳಲ್ಲ ಎಂದಿದ್ದಾರೆ. ಅವರ ಹಣ, ಹೆಂಡಕ್ಕೆ ನಾವು ತಕ್ಕ ಉತ್ತರ ಕೊಟ್ಟಿದ್ದೇವೆ. ಆ ಮೂಲಕ ಕರ್ನಾಟಕದಲ್ಲಿ ಹಣ, ಹೆಂಡ ನೀಡಿದ್ದಾಗಿ ಒಪ್ಪಿಕೊಂಡರು. ನಮ್ಮ ಕೆಲಸದ ಮೂಲಕ ಕೂಡ ಉತ್ತರ ಕೊಟ್ಟಿದ್ದೇವೆ. ಬಿಜೆಪಿ ಚುನಾವಣೆಗೂ ಮೊದಲು ಸುಳ್ಳು ವದಂತಿ ಹಬ್ಬಿಸಿದ್ದರು. ಗ್ಯಾರಂಟಿ, ವಕ್ಫ್ ವಿಚಾರ ಪ್ರಸ್ತಾಪಿಸಿ ಅಪಪ್ರಚಾರ ಮಾಡಿದರು.

ಬಿಜೆಪಿಯಲ್ಲಿ ಕಾಂಗ್ರೆಸ್ಗಿಂತ ಡಬಲ್ ಕುಟುಂಬ ರಾಜಕಾರಣ ಇದೆ. ಒಂದೊಂದು ಕುಟುಂಬದಲ್ಲಿ 10 ಜನರು ರಾಜಕಾರಣದಲ್ಲಿ ಇದ್ದಾರೆ.

ನಾವು ಕೊಟ್ಟಿರುವ ಕಾರ್ಯಕ್ರಮಗಳಿಂದ ಶಿಗ್ಗಾಂವಿಯಲ್ಲಿ ಗೆದ್ದಿದ್ದೇವೆ. ನಾವು ಕಾಂಗ್ರೆಸ್ ಪಕ್ಷದವರು ಗೂಬೆ ಅಲ್ಲ ಅಂತ ಬಿಜೆಪಿಗೆ ಗೊತ್ತಿಲ್ಲ. ಇಡಿ, ಐಟಿ ಬಳಸಿ ಸರ್ಕಾರ ಬೀಳಿಸಲು ಬಿಜೆಪಿ ಪ್ರಯತ್ನ ಮಾಡಿದೆ ಎಂದು ಕಿಡಿಕಾರಿದ್ದಾರೆ. ಸಿಎಂ ಬದಲಾಗುತ್ತಾರೆ ಅಂತಾ ಕೆಲವರು ತಿರುಕನ ಕನಸು ಕಾಣುತ್ತಿದ್ದರು. ಅಪ್ಪನ ತೆಕ್ಕೆಯಲ್ಲಿ ಬೆಳೆದವರು ಹೇಳಿದ ಹಾಗೆ ಆಗಲ್ಲ. ಸಿಎಂ ಬದಲಾವಣೆ ಯಡಿಯೂರಪ್ಪನವರ ಸಹಿ ಮಾಡಿದ ಹಾಗೇ ಅಲ್ಲ. ಚುನಾವಣಾ ಆಯೋಗ ಬಿಜೆಪಿಯ ಅಂಗವಾಗಿ ಬಿಟ್ಟಿದೆ ಎಂದು ವಾಗ್ದಾಳಿ ಮಾಡಿದ್ದಾರೆ.

ಈ ಚಳಿಗಾಲದಲ್ಲೂ ದೆಹಲಿಯಲ್ಲಿ ವಿಷವಾದ ಗಾಳಿ: ಆತಂಕದ ಪರಿಸ್ಥಿತಿ

ವಾಯುಮಾಲಿನ್ಯವು ಅಪಾಯಕಾರಿ ಮಟ್ಟವನ್ನು ತಲುಪುತ್ತಿದೆ, ಜನರ ಸ್ಥಿತಿಯಂತೂ ಹೊಸದಿಲ್ಲಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಾಯುಮಾಲಿನ್ಯದ ಪ್ರಮಾಣ ಗಣನೀಯವಾಗಿ ಹೆಚ್ಚಾಗಿದ್ದು ತೀರಾ ಆತಂಕದ ಪರಿಸ್ಥಿತಿ ನಿರ್ಮಾಣವಾಗಿದೆ. ರಾಷ್ಟ್ರ ರಾಜಧಾನಿ ವ್ಯಾಪ್ತಿಯಲ್ಲಿ ವಾಯು ಗುಣಮಟ್ಟವು ತೀರಾ ಕಳಪೆಯಾಗಿ ಉಸಿರಾಟಕ್ಕೂ ತೊಂದರೆಯಾಗಿದೆ. ಪ್ರಸ್ತುತ ರಾಷ್ಟ್ರ ರಾಜಧಾನಿ ಈ ಪರಿಸ್ಥಿತಿ ವಾರ್ಷಿಕ ಸಮಸ್ಯೆಯಾಗಿ ಮಾರ್ಪಟ್ಟಿದ್ದು ದೆಹಲಿ ಸರಕಾರ ಮತ್ತು ಕೇಂದ್ರ ಸರಕಾರ ಈ ಸಮಸ್ಯೆಗೆ ಶಾಶ್ವತ ಪರಿಹಾರ

ಇದೇ ಸಂಸ್ಥೆಯು ಪ್ರಕಟಿಸಿರುವ ಪಟ್ಟಿಯಲ್ಲಿ ಭಾರತದಲ್ಲಿ ಅತ್ಯಂತ ಮಾಲಿನ್ಯ ನಗರಗಳಲ್ಲಿ ದೆಹಲಿ, ಉತ್ತರ ಪ್ರದೇಶ ಹಾಗೂ ಹರಿಯಾಣದ ನಗರಗಳೇ ಅಗ್ರ ಪಟ್ಟಿಯಲ್ಲಿವೆ.

1. ನವದೆಹಲಿ
2. ಕಲ್ಯಾಣ್ ನಗರ (ಮಹಾರಾಷ್ಟ್ರ)
3. ರೋಹ್ಟಕ್ (ಹರಿಯಾಣ)
4. ಸೋನಿಪತ್ (ಹರಿಯಾಣ)
5. ಚಂಡೀಗಢ
6. ಫರಿದಾಬಾದ್(ದೆಹಲಿ)
7. ಗಾಜಿಯಾಬಾದ್ (ಉತ್ತರ ಪ್ರದೇಶ)
8. ಗುರುಗ್ರಾಮ
9. ಜಲಂಧರ್ (ಪಂಜಾಬ್)
10. ಹಿಸಾರ್(ಹರಿಯಾಣ)

ಕಂಡುಕೊಳ್ಳುವಲ್ಲಿ ವಿಫಲವಾಗಿದೆ. ಚಳಿಗಾಲ ಋತು ಆರಂಭಗೊಳ್ಳುತ್ತಿರುವಂತೆಯೇ ದಿಲ್ಲಿ ಮತ್ತು ಸುತ್ತ ಮುತ್ತಲಿನ ಪ್ರದೇಶದಲ್ಲಿ ವಾಯುಮಾಲಿನ್ಯದ ಪ್ರಮಾಣ ಮಿತಿ ಮೀರುವುದು ಕಳೆದೊಂದು ದಶಕದಿಂದ ಸಾಮಾನ್ಯ ಎಂಬಂತಾಗಿದೆ. ನೆರೆ ರಾಜ್ಯಗಳಾದ ಹರಿ ಯಾಣ ಮತ್ತು ಪಂಜಾಬ್ನಲ್ಲಿ ಈ ಅವಧಿಯಲ್ಲಿ ಬೆಳೆ ಕಳೆಗಳನ್ನು ರಾಶಿ ಹಾಕಿ ಸುಡುವುದರಿಂದ ಇದರ ಹೊಗೆ ವಾತಾವರಣವನ್ನು ಸೇರಿ ರಾಷ್ಟ್ರ ರಾಜಧಾನಿಯ ವಾಯುಮಾಲಿನ್ಯವನ್ನು ಮತ್ತಷ್ಟು ಹೆಚ್ಚಿಸುತ್ತದೆ. ಭಾರೀ ಪ್ರಮಾಣದಲ್ಲಿ ಇಂಗಾಲ ವನ್ನು ಹೊರಸೂಸುವ ಸರಕು ಸಾಗಣೆಯ ವಾಹನಗಳು, ನಗರದ ಹೊರವಲಯದಲ್ಲಿನ ಕೈಗಾರಿಕ ಪ್ರದೇಶಗಳಲ್ಲಿನ ಕೈಗಾರಿಕ ಕಂಪೆನಿಗಳು ಹೊರಸೂಸುವ ಹೊಗೆ, ಕಟ್ಟಡ ನಿರ್ಮಾಣ ಮತ್ತು ಹಳೆಯ ಕಟ್ಟಡಗಳನ್ನು ಕೆಡುವುದು, ಹೆಚ್ಚುತ್ತಿರುವ ಖಾಸಗಿ ವಾಹನಗಳು, ವಿವಿಧ ಅಭಿವೃದ್ಧಿ ಕಾಮಗಾರಿಗಳು, ಹೀಗೆ ಹತ್ತು ಹಲವು ಕಾರಣಗಳಿಂದಾಗಿ ಮನುಷ್ಯ ವಾಸಮಾಡಲು ಯೋಗ್ಯವಲ್ಲದ ನಗರವಾಗಿ ದೆಹಲಿ ತಲುಪಿದೆ. ದೆಹಲಿಯ ವಾಯು ಗುಣಮಟ್ಟದ ಸೂಚ್ಯಂಕವು (ಎಕ್ಯೂಐ) 450 ಅಂಶದಷ್ಟಿತ್ತು ಎಂದು ಸರ್ಕಾರಿ ಸೌಮ್ಯದ ಸಮೀರ್ ಆಯಪ್ ತಿಳಿಸಿದೆ.

ದಟ್ಟವಾದ ಹೊಗೆ ಕಾಣಿಸಿಕೊಳ್ಳಲಿದ್ದು, ಜೊತೆಗೆ 30 ಡಿಗ್ರಿ ಗರಿಷ್ಠ ಉಷ್ಣಾಂಶವಾದರೆ,ಕನಿಷ್ಠ ತಾಪಮಾನ 15.9 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ. ಇದು ಈ ಋತುವಿನ ಸರಾಸರಿಗಿಂತ 1.8 ಡಿಗ್ರಿಯಷ್ಟು ಹೆಚ್ಚಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ಇತ್ತೀಚೆಗೆ ವಿಶ್ವದ ಅತ್ಯಂತ ಮಾಲಿನ್ಯ ನಗರ ಪಟ್ಟಿಯನ್ನು ಎಕ್ಯೂಐ ಬಿಡುಗಡೆ ಮಾಡಿದ್ದು, ಪಾಕಿಸ್ತಾನದ ಪೇಶಾವರ 2 ಹಾಗೂ ಭಾರತದ ದೆಹಲಿ ಕ್ರಮವಾಗಿ 3ನೇ ಸ್ಥಾನದಲ್ಲಿವೆ. ಆಸ್ಟ್ರೇಲಿಯಾದ ಮೌಂಟ್ ಇಸಾ ವಿಶ್ವದ ಅತ್ಯಂತ ಮಾಲಿನ್ಯ ನಗರ ಎಂಬ ಕುಖ್ಯಾತಿಗೆ ಪಾತ್ರವಾಗಿದೆ.

ಜನರು ಮನೆಯಿಂದ ಹೊರಗೆ ಬರುವುದೇ ಕಷ್ಟಕರವಾಗಿದೆ. ಎಲ್ಲಾ ಶಾಲೆಗಳು ಮುಚ್ಚಲ್ಪಡುತ್ತಿವೆ ಮುಂಜಾನೆಯಾಗಲಿ, ಸಂಜೆಯಾಗಲಿ, ದೆಹಲಿಯ ಹವಾಮಾನ ಒಂದೇ ಆಗಿರುತ್ತದೆ. ವಾಯು ಮಾಲಿನ್ಯ ಅಪಾಯಕಾರಿ ಮಟ್ಟ ತಲುಪಿದೆ ದೆಹಲಿಯಲ್ಲಿ ಶಾಲೆಗಳನ್ನು ಮುಚ್ಚಲಾಗಿದೆ. ಖಾಸಗಿ ಸಂಸ್ಥೆಗಳು ಪಾಳಿ ಬದಲಾವಣೆಯ ಅವಧಿಯನ್ನು ಬೆಳಗಿನ 10.30ರಿಂದ 11ರವರೆಗೆ ಮರುನಿಗದಿ ಮಾಡಿದೆ. ಇದೇ ಕ್ರಮವನ್ನು ದೆಹಲಿ ಸರ್ಕಾರ ತನ್ನ ಸಿಬ್ಬಂದಿಗೆ ಜಾರಿಗಳಿಸಿದೆ, ಸಾರ್ವಜನಿಕ ಸೇವೆಗೆ ಧಕ್ಕೆ ಆಗದಂತೆ ಆರೋಗ್ಯ, ಒಳಚರ

ಪುಸ್ತಕಗಳು ಮನುಷ್ಯನ ಆತ್ಮೀಯ ಸ್ನೇಹಿತ

ನವದೆಹಲಿ, ನ.24 : ಎನ್‌ಸಿಸಿ ವಿದ್ಯಾರ್ಥಿಗಳಲ್ಲಿ ಶಿಸ್ತು, ನಾಯಕತ್ವ, ಸೇವಾ ಮನೋಭಾವವನ್ನು ಹುಟ್ಟುಹಾಕುತ್ತದೆ ಹಾಗಾಗಿ ಪ್ರತಿಯೊಬ್ಬ ವಿದ್ಯಾರ್ಥಿಯೂ ಎನ್‌ಸಿಸಿ ಸೇರಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದರು. 116ನೇ ಮನ್ಕಿ ಬಾತ್‌ನಲ್ಲಿ ಮಾತನಾಡಿದ ಅವರು, ಇಂದು ಎನ್ಸಿಸಿ ದಿನ, ಎನ್‌ಸಿಸಿ ನಮಗೆ ನಮ್ಮ ಶಾಲಾ ಕಾಲೇಜು ದಿನಗಳನ್ನು ನೆನಪಿಸುತ್ತದೆ, ನಾನು ಕೂಡ ಎನ್‌ಸಿಸಿ ಕೆಡೆಟ್ ಆಗಿದ್ದೆ, ಅದರಿಂದ ಪಡೆದ ಅನುಭವ ಅಮೂಲ್ಯವಾದುದು. ಎನ್‌ಸಿಸಿಯು ಮಕ್ಕಳಲ್ಲಿ ಶಿಸ್ತು, ಸೇವಾ ಮನೋಭಾವ ಹುಟ್ಟುಹಾಕುತ್ತದೆ, ವಿಪತ್ತು, ಪ್ರವಾಹ, ಭೂಕಂಪಗಳು, ಅಪಘಾತಗಳು ಸಂಭವಿಸಿದಾಗ ಎನ್ಸಿಸಿ ಕೆಡೆಟ್ಗಳು ಯಾವಾಗಲೂ ಸಹಾಯಕ್ಕಿರುತ್ತಾರೆ. ಎನ್ಸಿಸಿಯನ್ನು ಬಲಪಡಿಸಲು ನಿರಂತರ ಪ್ರಯತ್ನಗಳನ್ನು ಮಾಡಲಾಗುತ್ತಿದೆ. 2014 ರಲ್ಲಿ ಸುಮಾರು 14 ಲಕ್ಷ ವಿದ್ಯಾರ್ಥಿಗಳು ಎನ್‌ಸಿಸಿಗೆ ಸೇರಿದ್ದಾರೆ. ಈಗ 2024 ರಲ್ಲಿ ಎರಡು ಲಕ್ಷಕ್ಕೂ ಹೆಚ್ಚು ಯುವಕರು ಎನ್‌ಸಿಸಿಗೆ ಸೇರಿದ್ದಾರೆ.

ಹಿಂದಿನದಕ್ಕೆ ಹೋಲಿಸಿದರೆ, 5,000 ಕ್ಕೂ ಹೆಚ್ಚು ಶಾಲೆಗಳು ಮತ್ತು ಕಾಲೇಜುಗಳು ಈಗ ಎನ್‌ಸಿಸಿಯ ಭಾಗವಾಗಿವೆ. ಮತ್ತು ಮುಖ್ಯವಾಗಿ, ಮೊದಲು, ಎನ್ಸಿಸಿಯಲ್ಲಿ ಸುಮಾರು 25 ಪ್ರತಿಶತದಷ್ಟು ಗರ್ಲ್ ಕೆಡೆಟ್‌ಗಳು ಇದ್ದಾರೆ, ಈಗ ಸುಮಾರು 40 ಪ್ರತಿಶತದಷ್ಟು ಬಾಲಕಿಯರಿದ್ದಾರೆ, ಎಂದು ಪ್ರಧಾನಿ ಮೋದಿ ಎಂದರು.ಗಡಿ ಪ್ರದೇಶಗಳಲ್ಲಿ ವಾಸಿಸುವ ಯುವಕರನ್ನು ಎನ್ಸಿಸಿಯೊಂದಿಗೆ ಸಂಯೋಜಿಸುವ ಅಭಿಯಾನವೂ ನಡೆಯುತ್ತಿದೆ. ಯುವಕರು ರಾಜಕೀಯಕ್ಕೆ ಸೇರುವಂತೆ ತಮ್ಮ ಹಿಂದಿನ ಕರೆಯನ್ನು ಪ್ರಧಾನಿ ಮೋದಿ ಪುನರುಚ್ಚರಿಸಿದರು. ಇಡೀ ಕುಟುಂಬಕ್ಕೆ ಯಾವುದೇ ರಾಜಕೀಯ ಹಿನ್ನೆಲೆ ಇಲ್ಲ, ಅಂತಹ ಯುವಕರು ರಾಜಕೀಯಕ್ಕೆ ಸೇರುವಂತೆ ಮನವಿ ಮಾಡುತ್ತೇನೆ ಎಂದರು. ಪುಸ್ತಕಗಳೊಂದಿಗೆ ಸ್ನೇಹವನ್ನು ಹೆಚ್ಚಿಸಿಕೊಳ್ಳಿ ಇತ್ತೀಚಿನ ದಿನಗಳಲ್ಲಿ ಮಕ್ಕಳ ಶಿಕ್ಷಣಕ್ಕೆ ಸಂಬಂಧಿಸಿದಂತೆ ಹಲವು ಪ್ರಯೋಗಗಳನ್ನು ಮಾಡಲಾಗುತ್ತಿದೆ ಎಂದು ಪ್ರಧಾನಿ ಮೋದಿ ಹೇಳಿದರು. ಪುಸ್ತಕಗಳು ಮನುಷ್ಯನ ಆತ್ಮೀಯ ಸ್ನೇಹಿತ ಎಂದೂ ಹೇಳಲಾಗುತ್ತದೆ. ಈಗ ಈ ಸ್ನೇಹವನ್ನು ಬಲಪಡಿಸಲು ಗ್ರಂಥಾಲಯಕ್ಕಿಂತ ಉತ್ತಮವಾದ ಸ್ಥಳ ಯಾವುದು. ಇದೀಗ ಸೃಜನಶೀಲತೆಯ ಕೇಂದ್ರವಾಗಿ ಮಾರ್ಪಟ್ಟಿರುವ ಚೆನ್ನೈನಲ್ಲಿ ಮಕ್ಕಳಿಗಾಗಿ ಇಂತಹ ಗ್ರಂಥಾಲಯವನ್ನು ಸಿದ್ಧಪಡಿಸಲಾಗಿದೆ. ಇದು 3000 ಕ್ಕೂ ಹೆಚ್ಚು ಪುಸ್ತಕಗಳನ್ನು ಒಳಗೊಂಡಿದೆ.ಇದಲ್ಲದೇ ಹಲವು ರೀತಿಯ ಚಟುವಟಿಕೆಗಳೂ ಮಕ್ಕಳನ್ನು ಆಕರ್ಷಿಸುತ್ತವೆ. ಎಲ್ಲರಿಗೂ ಖಂಡಿತವಾಗಿಯೂ ಏನಾದರೂ ಇರುತ್ತದೆ. ಬಿಹಾರದ ಹಲವು ನಗರಗಳಲ್ಲಿ ಗೋಪಾಲ್ಗಂಜ್ನ ಪ್ರಯೋಗ್ ಲೈಬ್ರರಿ ಕುರಿತು ಚರ್ಚಿಸಲಾಗುತ್ತಿದೆ. ಇದರೊಂದಿಗೆ ಸುಮಾರು 12 ಗ್ರಾಮಗಳ ಯುವಕರು ಪುಸ್ತಕ ಓದುವ ಸೌಲಭ್ಯ ಪಡೆಯಲಾರಂಭಿಸಿದ್ದಾರೆ.

ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ನಡೆಸಲು ವಿದ್ಯಾರ್ಥಿಗಳಿಗೆ ಉಪಯುಕ್ತವಾದ ಕೆಲವು ಗ್ರಂಥಾಲಯಗಳಿವೆ. ಪ್ರಪಂಚದಾದ್ಯಂತ ಹತ್ತಾರು ದೇಶಗಳಲ್ಲಿ ಭಾರತೀಯ ಮೂಲದ ಜನರು ಗಯಾನಾದಲ್ಲಿ ಪುಟ್ಟ ಭಾರತ ನೆಲೆಸಿದೆ, ಸುಮಾರು 180 ವರ್ಷಗಳ ಹಿಂದೆ, ಭಾರತದಿಂದ ಜನರನ್ನು ದುಡಿಮೆಗಾಗಿ ಗಯಾನಾಕ್ಕೆ ಕರೆತರಲಾಯಿತು. ಇಂದು ಭಾರತೀಯ ಮೂಲದ ಜನರು ಎಲ್ಲಾ ಕ್ಷೇತ್ರಗಳಲ್ಲಿ ಗಯಾನಾವನ್ನು ಮುನ್ನಡೆಸುತ್ತಿದ್ದಾರೆ. ಅಲ್ಲಿನ ಅಧ್ಯಕ್ಷರೂ ಭಾರತೀಯ ಮೂಲದವರು.ನಾನು ಗಯಾನಾದಲ್ಲಿದ್ದಾಗ ನನ್ನ ಮನಸ್ಸಿಗೆ ಒಂದು ಕಲ್ಪನೆ ಬಂದಿತು. ಗಯಾನಾದಂತೆ, ಭಾರತೀಯ ಮೂಲದ ಲಕ್ಷಾಂತರ ಜನರು ಪ್ರಪಂಚದ ಹತ್ತಾರು ದೇಶಗಳಲ್ಲಿ ವಾಸಿಸುತ್ತಿದ್ದಾರೆ. ಇತರ ದೇಶಗಳಲ್ಲಿ ಭಾರತೀಯ ಮೂಲದ ಜನರು ತಮ್ಮ ಪರಂಪರೆಯನ್ನು ಜೀವಂತವಾಗಿರಿಸುವ ಕಥೆಗಳನ್ನು ನೀವು ಕಂಡುಕೊಳ್ಳಬಹುದೇ ನೀವು ಈ ಕಥೆಗಳನ್ನು ಅನ್ವೇಷಿಸಿ ಮತ್ತು ಅವುಗಳನ್ನು ನನ್ನೊಂದಿಗೆ ಹಂಚಿಕೊಳ್ಳಿ ಎಂದರು. ಇತಿಹಾಸವನ್ನು ಉಳಿಸಲು ಯೋಜನೆ ಒಮಾನ್ನಲ್ಲಿ ನಡೆಯುತ್ತಿರುವ ಎಕ್ಸ್ಟ್ರಾ ಆರ್ಡಿನರಿ ಪ್ರಾಜೆಕ್ಟ್ ಕೂಡ ನಿಮಗೆ ಆಸಕ್ತಿದಾಯಕವಾಗಿದೆ ಎಂದು ಪ್ರಧಾನಿ ಮೋದಿ ಹೇಳಿದರು.

ಅನೇಕ ಭಾರತೀಯ ವಲಸಿಗ ಕುಟುಂಬಗಳು ಒಮಾನ್ನಲ್ಲಿ ವಾಸಿಸುತ್ತಿದ್ದಾರೆ. ಅವರಲ್ಲಿ ಅನೇಕರು ಒಮಾನಿ ಪೌರತ್ವವನ್ನು ಹೊಂದಿದ್ದಾರೆ, ಆದರೆ ಅವರ ರಕ್ತನಾಳಗಳಲ್ಲಿ ಭಾರತೀಯತೆ ನೆಲೆಸಿದೆ. ಇವುಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಸಂಗ್ರಹಿಸಲಾಗಿದೆ. ಮೌಖಿಕ ಇತಿಹಾಸ ಯೋಜನೆಯೂ ಇದರ ಆಧಾರವಾಗಿದೆ. ತನ್ನ ಇತಿಹಾಸವನ್ನು ಪಾಲಿಸುವ ದೇಶಕ್ಕೆ ಉತ್ತಮ ಭವಿಷ್ಯವಿದೆ. ಇದೇ ರೀತಿಯ ಹಲವು ಯೋಜನೆಗಳು ದೇಶದಲ್ಲಿ ನಡೆಯುತ್ತಿವೆ. ಇದಕ್ಕೆ ನೀವೂ ಸಹಕರಿಸಬಹುದು. ಐದು ತಿಂಗಳಲ್ಲಿ 100 ಕೋಟಿಗೂ ಹೆಚ್ಚು ಗಿಡಗಳನ್ನು ನೆಡಲಾಗಿದೆ ಕೆಲವು ತಿಂಗಳ ಹಿಂದೆ ನಾವು ವೃಕ್ಷ ತಾಯಿಯ ಹೆಸರಿನಲ್ಲಿ ಅಭಿಯಾನ ಆರಂಭಿಸಿದ್ದೆವು ಎಂದು ಪ್ರಧಾನಿ ಮೋದಿ ಹೇಳಿದರು.

ಈ ಅಭಿಯಾನವು ಕೇವಲ ಐದು ತಿಂಗಳಲ್ಲಿ 100 ಕೋಟಿ ಗಿಡಗಳನ್ನು ನೆಡುವ ಮೈಲಿಗಲ್ಲನ್ನು ದಾಟಿದೆ. ಈ ಅಭಿಯಾನವು ಈಗ ಪ್ರಪಂಚದ ಇತರ ದೇಶಗಳಲ್ಲಿಯೂ ಹರಡುತ್ತಿದೆ ಎಂಬುದಕ್ಕೆ ಸಂಬಂಧಿಸಿದ ಇನ್ನೊಂದು ವಿಷಯವನ್ನು ತಿಳಿದರೆ ನೀವು ಹೆಮ್ಮೆಪಡುತ್ತೀರಿ. ಗಯಾನಾದಲ್ಲಿಯೂ, ಗಯಾನಾ ಅಧ್ಯಕ್ಷರು ತಮ್ಮ ಕುಟುಂಬದೊಂದಿಗೆ ವೃಕ್ಷಮಾತೆಯ ಹೆಸರಿನಲ್ಲಿ ನನ್ನೊಂದಿಗೆ ಅಭಿಯಾನದಲ್ಲಿ ಪಾಲ್ಗೊಂಡರು. ಈ ಅಭಿಯಾನವನ್ನು ದೇಶದ ವಿವಿಧ ಭಾಗಗಳಲ್ಲಿ ನಡೆಸಲಾಗುತ್ತಿದೆ. ಇಂದೋರ್‌ನಲ್ಲಿ 24 ಗಂಟೆಗಳಲ್ಲಿ 12 ಲಕ್ಷ ಮರಗಳನ್ನು ನೆಡಲಾಗಿದೆ.

ಜೈಸಲ್ಮೇರುನಲ್ಲಿ ವಿಶಿಷ್ಟ ದಾಖಲೆ ನಿರ್ಮಿಸಲಾಗಿದೆ. ಇಲ್ಲಿ ಮಹಿಳೆಯರ ತಂಡ 1 ಗಂಟೆಯಲ್ಲಿ 25 ಸಾವಿರ ಗಿಡಗಳನ್ನು ನೆಟ್ಟರು. ಜೀವವೈವಿಧ್ಯದಲ್ಲಿ ಗುಬ್ಬಚ್ಚಿಯ ಪ್ರಮುಖ ಕೊಡುಗೆ ನೀವೆಲ್ಲರೂ ನಿಮ್ಮ ಬಾಲ್ಯದಲ್ಲಿ ಗುಬ್ಬಚ್ಚಿಯನ್ನು ನೋಡಿರಬೇಕು ಎಂದು ಪ್ರಧಾನಿ ಮೋದಿ ಹೇಳಿದರು. ನಮ್ಮ ಸುತ್ತಲಿನ ಜೀವವೈವಿಧ್ಯವನ್ನು ಕಾಪಾಡುವಲ್ಲಿ ಗುಬ್ಬಚ್ಚಿಗಳು ಪ್ರಮುಖ ಪಾತ್ರವಹಿಸುತ್ತವೆ. ಹೆಚ್ಚುತ್ತಿರುವ ನಗರೀಕರಣದಿಂದಾಗಿ ಗುಬ್ಬಚ್ಚಿ ನಮ್ಮಿಂದ ದೂರವಾಗಿದೆ. ಇಂದಿನ ಪೀಳಿಗೆಯ ಮಕ್ಕಳು ಈ ಪಕ್ಷಿಯನ್ನು ಚಿತ್ರಗಳಲ್ಲಿ ಮಾತ್ರ ನೋಡಿದ್ದಾರೆ. ಈಗ ಈ ಹಕ್ಕಿಯ ವಾಪಸಾತಿಗೆ ಹಲವು ಪ್ರಯತ್ನಗಳು ನಡೆಯುತ್ತಿವೆ. ನೀವೂ ಸಹ ನಿಮ್ಮ ಸುತ್ತ ಪ್ರಯತ್ನ ಮಾಡಿದರೆ, ಗುಬ್ಬಚ್ಚಿಗಳು ನಮ್ಮ ಜೀವನದ ಭಾಗವಾಗುತ್ತವೆ.

ಮಹಾರಾಷ್ಟ್ರದಲ್ಲಿ ಇಂದು ನೂತನ ಸಿಎಂ ಪ್ರಮಾಣ ವಚನ ಸಾಧ್ಯತೆ

ಮಹಾರಾಷ್ಟ್ರ, ನ.24 : ಮಹಾರಾಷ್ಟ್ರದಲ್ಲಿ ಮುಂದಿನ ಸರ್ಕಾರ ರಚಿಸುವ ಉದ್ದೇಶದಿಂದ ಶಿವಸೇನೆಯಿಂದ ಆಯ್ಕೆಯಾದ ಶಾಸಕರು ಮಹಾಯುತಿ ಮಿತ್ರಪಕ್ಷಗಳೊಂದಿಗೆ ಮಾತುಕತೆ ನಡೆಸಲು ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆ ಅವರಿಗೆ ಅಧಿಕಾರ ನೀಡಿದ್ದಾರೆ. ಮೈತ್ರಿ ನಾಯಕರು ಮತ್ತು ಬಿಜೆಪಿ ನಾಯಕತ್ವ ಜಂಟಿಯಾಗಿ ಮುಂದಿನ ಮುಖ್ಯಮಂತ್ರಿಯನ್ನು ನಿರ್ಧರಿಸುತ್ತವೆ ಎಂದು ಮಹಾರಾಷ್ಟ್ರ ಬಿಜೆಪಿ ಮುಖ್ಯಸ್ಥ ಚಂದ್ರಶೇಖರ್ ಬವಾನ್ಕುಲೆ ಭಾನುವಾರ ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚುನಾವಣಾ ಫಲಿತಾಂಶಗಳು ಹೊರಬರಲು ಪ್ರಾರಂಭಿಸುತ್ತಿದ್ದಂತೆ ಶಿಂಧೆ ಶನಿವಾರ ಇದೇ ಮಾತನ್ನು ಹೇಳಿದ್ದರು, ಮುಖ್ಯಮಂತ್ರಿಯ ಆಯ್ಕೆ ನಿರ್ಧಾರವನ್ನು ಮಹಾಯುತಿ ನಾಯಕರು ಮತ್ತು ಬಿಜೆಪಿಯ ಸಂಸದೀಯ ಮಂಡಳಿ ತೆಗೆದುಕೊಳ್ಳುತ್ತದೆ ಎಂದು ಬವಾನ್ಕುಲೆ ಹೇಳಿದರು. ಆಯ್ಕೆ ಪ್ರಕ್ರಿಯೆಯು ಆಡಳಿತಕ್ಕಾಗಿ ಚುನಾವೂರ್ವ ಮೈತ್ರಿಯ ಯೋಜನೆಗಳಿಗೆ ಅನುಗುಣವಾಗಿರುತ್ತದೆ ಎಂದು ಅವರು ಹೇಳಿದರು.

ಸೋಮವಾರ ಪ್ರಮಾಣ ವಚನ ಸ್ವೀಕಾರ ಸಾಧ್ಯತೆ: ಮುಖ್ಯಮಂತ್ರಿ ಹುದ್ದೆಯ ವಿಷಯದಲ್ಲಿ ಯಾವುದೇ ವಿವಾದವಿಲ್ಲ ಎಂದು ಶಿವಸೇನೆ ಮುಖಂಡ ದೀಪಕ್ ಕೇಸರ್ ಹೇಳಿದ್ದಾರೆ. ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಿರ್ಗಮನ ವಿಧಾನಸಭೆಯ ಅವಧಿ ನವೆಂಬರ್ 26 ರಂದು ಕೊನೆಗೊಳ್ಳುವುದರಿಂದ ನವೆಂಬರ್ 25 ರೊಳಗೆ ಹೊಸ ಸರ್ಕಾರ ಪ್ರಮಾಣವಚನ ಸ್ವೀಕರಿಸಬೇಕಾಗಿದೆ ಎಂದು ಹೇಳಿದರು. ಮುಂಬೈನ ವಾಂಖೆಡೆ ಸ್ಟೇಡಿಯಂನಲ್ಲಿ ಪ್ರಮಾಣ ವಚನ ಸ್ವೀಕಾರ ಸಮಾರಂಭ ನಡೆಯಬಹುದು ಎಂದು ತೋರುತ್ತಿದೆ. ಅಜಿತ್ ಪವಾರ್ ಮತ್ತು ಏಕನಾಥ್ ಶಿಂಧೆ ಆಯಾ ಪಕ್ಷಗಳ ರಾಷ್ಟ್ರೀಯ ಅಧ್ಯಕ್ಷರು. ಅವರು ತಮ್ಮದೇ ಆದ ಗುಂಪಿನ ನಾಯಕನನ್ನು ಆಯ್ಕೆ ಮಾಡುತ್ತಾರೆ, ಆದರೆ ಮುಖ್ಯಮಂತ್ರಿಯ ನಿರ್ಧಾರವನ್ನು ದೆಹಲಿಯಲ್ಲಿ ತೆಗೆದುಕೊಳ್ಳಲಾಗುತ್ತದೆ ಎಂದು ಅವರು ಹೇಳಿದರು. ಈ ವಿಷಯದ ಬಗ್ಗೆ ಯಾವುದೇ ವಿವಾದವಿಲ್ಲ ಎಂದು ಹೇಳಿದರು.

ಮಹಾರಾಷ್ಟ್ರ ಚುನಾವಣಾ ಫಲಿತಾಂಶ ವಿವರ ಶಿಂಧೆ ಅವರ ಶಿವಸೇನೆ ಮತ್ತು ಉಪಮುಖ್ಯಮಂತ್ರಿ ಅಜಿತ್ ಪವಾರ್ ಅವರ ಎನ್ಸಿಪಿಯನ್ನು ಒಳಗೊಂಡ ಬಿಜೆಪಿ ನೇತೃತ್ವದ ಮಹಾಯುತಿ 288 ವಿಧಾನಸಭಾ ಸ್ಥಾನಗಳಲ್ಲಿ 230 ಸ್ಥಾನಗಳನ್ನು ಗೆಲ್ಲುವ ಮೂಲಕ ರಾಜ್ಯದಲ್ಲಿ ಅಧಿಕಾರವನ್ನು ಉಳಿಸಿಕೊಂಡಿದೆ. ಬಿಜೆಪಿ 132, ಶಿವಸೇನೆ 57, ಎನ್‌ಸಿಪಿ 41 ಸ್ಥಾನಗಳನ್ನು ಗೆದ್ದಿದೆ.

ಜಾಮಾ ಮಸೀದಿ ಸಮೀಕ್ಷೆಗೆ ಅಡ್ಡಿ ಹಿಂಸಾಚಾರಕ್ಕೆ ಮೂವರ ಬಲಿ

ಲಖನೌ, ನ.24 : ಉತ್ತರಪ್ರದೇಶದ ಸಂಭಾಲ್‌ನಲ್ಲಿರುವ ಶಾಹಿ ಜಾಮಾ ಮಸೀದಿಯ ಸಮೀಕ್ಷೆ ವಿರೋಧಿಸಿ ಪ್ರತಿಭಟನಾಕಾರರು ಪೊಲೀಸರು ಹಾಗೂ ಸಮಿಕ್ಷಾ ತಂಡದ ಮೇಲೆ ಕಲ್ಲು ತೂರಾಟ ನಡೆಸಿದ ಘಟನೆ ನಡೆದಿದೆ ಸಮೀಕ್ಷಾ ತಂಡ ಸ್ಥಳಕ್ಕೆ ಆಗಮಿಸುತ್ತಿದ್ದಂತೆ ನೂರಾರು ಸಂಖ್ಯೆಯಲ್ಲಿ ಸೇರಿದ್ದ ಪ್ರತಿಭಟನಾಕಾರರು ಸಮೀಕ್ಷೆಗೆ ವಿರೋಧ ವ್ಯಕ್ತಪಡಿಸಿದ್ದಾರೆ. ಬಳಿಕ ಅಧಿಕಾರಿಗಳ ಮೇಲೆ ಗುಂಪು ಕಲ್ಲು ತೂರಾಟ ನಡೆಸಿದೆ. ಪ್ರತಿಭಟನೆ ಹಿಂಸಾಚಾರಕ್ಕೆ ತಿರುಗಿದ್ದು, ಪೊಲೀಸರು ಪರಿಸ್ಥಿತಿ ನಿಯಂತ್ರಣಕ್ಕೆ ತರಲು ಅಶ್ರುವಾಯು ಸಿಡಿಸಿದ್ದಾರೆ. ಹಿಂಸಾಚಾರದಲ್ಲಿ ಮೂವರು ಬಲಿಯಾಗಿದ್ದು, 30ಕ್ಕೂ ಹೆಚ್ಚು ಪೊಲೀಸರು ಕಲ್ಲು ತೂರಾಟದಲ್ಲಿ ಗಾಯಗೊಂಡಿದ್ದಾರೆ.

ಈ ವೇಳೆ ಹಿರಿಯ ಪೊಲೀಸ್ ಅಧಿಕಾರಿಗಳು ಹಾಗೂ ಮಸೀದಿಯ ಮುಖ್ಯಸ್ಥರು ಗುಂಪನ್ನು ಸಮಾಧಾನಪಡಿಸಲು ಪ್ರಯತ್ನಿಸಿದ್ದು, ಅವರ ಪ್ರಯತ್ನಗಳು ವಿಫಲವಾದವು. ಈ ಬಗ್ಗೆ ಪ್ರತಿಕ್ರಿಯಿಸಿರುವ ಉನ್ನತ ಪೊಲೀಸ್ ಅಧಿಕಾರಿ ಪ್ರಶಾಂತ್ ಕುಮಾರ್, ನ್ಯಾಯಾಲಯದ ಆದೇಶದ ಮೇರೆಗೆ ಸಂಭಾಲ್‌ನಲ್ಲಿ ಸರ್ವೆ ನಡೆಸಲಾಗುತ್ತಿದೆ. ಕೆಲ ಸಮಾಜ ವಿರೋಧಿಗಳು ಕಲ್ಲು ತೂರಾಟ ನಡೆಸಿದ್ದಾರೆ. ಪೊಲೀಸರು ಹಾಗೂ ಹಿರಿಯ ಅಧಿಕಾರಿಗಳು ಸ್ಥಳದಲ್ಲೇ ಇದ್ದಾರೆ. ಪರಿಸ್ಥಿತಿ ನಿಯಂತ್ರಣದಲ್ಲಿದ್ದು, ಕಿಡಿಗೇಡಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಇದೇ ರೀತಿಯ ಸಮೀಕ್ಷೆಯನ್ನು ನ19 ರುದು ಪೊಲೀಸ್ ಬಂದೋಬಸ್ತ್‌ನಲ್ಲಿ ನಡೆಸಲಾಗಿತ್ತು. ಆದರೆ ಕಳೆ ಕೆಲವು ದಿನಗಳಿಂದ ಈ ಪ್ರದೇಶದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದ್ದು, ನಿಷೇಧಾಜ್ಞೆ ವಿಧಿಸಲಾಗಿದೆ ಶಾಹಿ ಜಾಮಾ ಮಸೀದಿ ಮೂಲತಃ ಹರಿಹರ ಮಂದಿರ ಎಂದು ವಕೀಲ ವಿಷ್ಣು ಶಂಕರ್ ಜೈನ್ ಎಂಬವರು ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಅರ್ಜಿಯಲ್ಲಿ ಮೊಘಲರ ದೊರೆ ಬಾಬರ್ ಮಸೀದಿ ನಿರ್ಮಿಸಲು ದೇವಾಲಯವನ್ನು ಕೆಡವಿದ್ದ ಎಂದು ಉಲ್ಲೇಖಿಸಲಾಗಿದೆ.

ಪ್ರಧಾನಿ ನರೇಂದ್ರ ಮೋದಿ ಅವರು ಭಾನುವಾರ ನವದೆಹಲಿಯ ಜವಾಹರಲಾಲ್ ನೆಹರು ಕ್ರೀಡಾಂಗಣದಲ್ಲಿ ಒಡಿಶಾ ಪರ್ಬ 2024 ರ 7 ನೇ ಆವೃತ್ತಿಯನ್ನು ಉದ್ದೇಶಿಸಿ ಮಾತನಾಡಿದರು.

ಕನ್ನಡ ಕಲಾ ಕೇಂದ್ರ ಸಂಸ್ಥೆಗೆ ಗಡಿನಾಡ ಕನ್ನಡ ರಾಜ್ಯೋತ್ಸವ ಪ್ರಶಸ್ತಿ

ಮುಂಬಯಿ, ನ.24 : ಗಡಿನಾಡ ಸಾಹಿತ್ಯ ಸಾಂಸ್ಕೃತಿಕ ಅಕಾಡೆಮಿ (ರಿ) ಕಾಸರಗೋಡು ಇವರು ಗಡಿನಾಡು ಹಾಗೂ ಹೊರ ರಾಜ್ಯಗಳಲ್ಲಿ ಭಾಷೆ, ಕಲೆ, ಸಾಹಿತ್ಯ, ಸಂಸ್ಕೃತಿ, ಕಲಾವಿದರಿಗಾಗಿ ಮಿಡಿಯುವ ಸಂಸ್ಥೆ. ಈಗಾಗಲೇ ರಾಷ್ಟ್ರ ಹಾಗೂ ದುಬೈ, ಮಸ್ಕತ್ ಗಳಲ್ಲಿ ಹದಿನೈದು ಕನ್ನಡ ಸಂಸ್ಕೃತಿ ಉತ್ಸವಗಳನ್ನು ಆಯೋಜಿಸಿದೆ. ಈಗ ಈ ವರ್ಷ ಅನಕತಪುರಿ ಗಡಿನಾಡ ಸಂಸ್ಕೃತಿ ಉತ್ಸವ–2024ವು ಕೇರಳದ ತಿರುವನಂತಪುರದ ತೈಕಾಡ್ ನಲ್ಲಿರುವ ಭಾರತ್ ಭವನದಲ್ಲಿ ಇದೆ ನವೆಂಬರ್ 27ರಂದು ಬುಧವಾರ ದಿನಪೂರ್ತಿ ಜರುಗಲಿದೆ.

ಈ ಉತ್ಸವದಲ್ಲಿ ಸಾಧನೆ ಮಾಡಿರುವ ಗಣ್ಯರನ್ನು ಹಾಗೂ ಸಂಘ ಸಂಸ್ಥೆಗಳನ್ನು ಗುರುತಿಸಿ ಗಡಿನಾಡ ಕನ್ನಡ ರಾಜ್ಯೋತ್ಸವ ಪ್ರಶಸ್ತಿಯನ್ನು ಪ್ರಧಾನಿಸಲಾಗುವುದು. ಈ ಪ್ರಶಸ್ತಿಗೆ ಎಪ್ಪತ್ತು ವರ್ಷಗಳ ಸುದೀರ್ಘ ಇತಿಹಾಸ ಹೊಂದಿರುವ ಮುಂಬಯಿಯ ಪ್ರತಿಷ್ಠಿತ ಕಲಾ ಸಂಸ್ಥೆ ಕನ್ನಡ ಕಲಾ ಕೇಂದ್ರ ಆಯ್ಕೆಯಾಗಿದೆ.

ಗೌತಮ್ ಅದಾನಿ, ಸಾಗರಗೆ ಎಸ್‌ಇಸಿ ಸಮನ್ಸ್

21 ದಿನಗಳಲ್ಲಿ ಉತ್ತರಿಸುವಂತೆ ಸೂಚನೆ

ನವದೆಹಲಿ, ನ.24 : ಅದಾನಿ ಸಮೂಹದ ಸಂಸ್ಥಾಪಕ, ಅಧ್ಯಕ್ಷ ಗೌತಮ್ ಅದಾನಿ ಮತ್ತು ಅವರ ಸೋದರಳಿಯ ಸಾಗರ್ ಅವರಿಗೆ ಯುನೈಟೆಡ್ ಸ್ಟೇಟ್ಸ್ ಸೆಕ್ಯುರಿಟೀಸ್ ಮತ್ತು ಎಕ್ಸ್ಚೇಂಜ್ ಕಮಿಷನ್ ಲಾಭದಾಯಕ ಸೌರ ವಿದ್ಯುತ್ ಒಪ್ಪಂದಗಳನ್ನು ಪಡೆಯಲು $265 ಮಿಲಿಯನ್ (?2,200 ಕೋಟಿ) ಲಂಚವನ್ನು ಪಾವತಿಸಿದ್ದಾರೆ ಎಂಬ ಆರೋಪದ ಬಗ್ಗೆ ತಮ್ಮ ನಿಲುವನ್ನು ವಿವರಿಸುವಂತೆ ಸೂಚಿಸಿ ಸಮನ್ಸ್ ನೀಡಲಾಗಿದೆ. ಅಹಮದಾಬಾದ್ನಲ್ಲಿರುವ ಅದಾನಿ ಅವರ ಶಾಂತಿವನ್ ಫಾರ್ಮ್ ನಿವಾಸಕ್ಕೆ ಮತ್ತು ಅದೇ ನಗರದಲ್ಲಿನ ಅವರ ಸೋದರಳಿಯ ಸಾಗರ್ ಅವರ ಬೋಡಕ್ದೇವ್ ನಿವಾಸಕ್ಕೆ 21 ದಿನಗಳಲ್ಲಿ ಎಸ್‌ಇಸಿಗೆ ಉತ್ತರಕ್ಕಾಗಿ ಸಮನ್ಸ್ ಕಳುಹಿಸಲಾಗಿದೆ.

ಈ ಸಮನ್ಸ್ ಸೇವೆಯ ನಂತರ 21 ದಿನಗಳಲ್ಲಿ ನಿಮ್ಮ ಮೇಲೆ ನೀವು ಅದನ್ನು ಸ್ವೀಕರಿಸಿದ ದಿನವನ್ನು ಲೆಕ್ಕಿಸದೆ ನೀವು ಫಿರ್ಯಾದಿಗೆ ಲಗತ್ತಿಸಲಾದ ದೂರಿಗೆ ಉತ್ತರವನ್ನು ನೀಡಬೇಕು. ಫೆಡರಲ್ ನಿಯಮಗಳ ಫೆಡರಲ್ ನಿಯಮಗಳ ಅಡಿಯಲ್ಲಿ ಚಲನೆಯನ್ನು ನೀಡಬೇಕು ಎಂದು ನ್ಯೂಯಾರ್ಕ್ ಪೂರ್ವ ಜಿಲ್ಲಾ ನ್ಯಾಯಾಲಯದ ಮೂಲಕ ನವೆಂಬರ್ 21 ರ ನೋಟಿಸ್ ಕಳುಹಿಸಲಾಗಿದೆ.

ಗೌತಮ್ ಅದಾನಿ ಯುಎಸ್ನಲ್ಲಿ ಲಂಚ, ಭದ್ರತಾ ವಂಚನೆಗಾಗಿ ಅವರು ಕ್ರಿಮಿನಲ್ ದೋಷಾರೋಪಣೆಯನ್ನು ಎದುರಿಸುತ್ತಿದ್ದಾರೆ, ನೀವು ಪ್ರತಿಕ್ರಿಯಿಸಲು ವಿಫಲವಾದರೆ, ದೂರಿನಲ್ಲಿ ಬೇಡಿಕೆಯಿರುವ ಪರಿಹಾರಕ್ಕಾಗಿ ನಿಮ್ಮ ವಿರುದ್ಧ ಪೂರ್ವನಿಯೋಜಿತವಾಗಿ ತೀರ್ಪು ನಮೂದಿಸಲಾಗುವುದು. ನೀವು ನ್ಯಾಯಾಲಯಕ್ಕೆ ನಿಮ್ಮ ಉತ್ತರ ಅಥವಾ ಚಲನೆಯನ್ನು ಸಲ್ಲಿಸಬೇಕು ಎಂದ

ಯಾವುದೇ ಅಂಗ, ಜಾತಿ, ಧರ್ಮ ಭೇದವಿಲ್ಲದೆ ಎಲ್ಲರಿಗೂ ದೇವರನ್ನು ಪೂಜಿಸುವ ಅವಕಾಶ: ಡಿ.ಸಿ.ಎಂ

ಬೆಂಗಳೂರು, ನ.24: ಶ್ರೀವೈಷ್ಣವರನ್ನು ಕರ್ನಾಟಕದ ಜಾತಿ ಪಟ್ಟಿಗೆ ಸೇರಿಸಿ, ಗೆಜೆಟ್ ಆದೇಶ ಹೊರಡಿಸಬೇಕು ಎಂದು ಸಮುದಾಯದ ಮುಖಂಡರು ಮನವಿ ಮಾಡಿದ್ದಾರೆ. ಸರ್ಕಾರದ ಮಟ್ಟದಲ್ಲಿ ಇದರ ಬಗ್ಗೆ ಚರ್ಚೆ ಮಾಡಿ ನಿಮಗೆ ಸಹಾಯ ಮಾಡಲಾಗುವುದು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು. ಅಖಿಲ ಕರ್ನಾಟಕ ಶ್ರೀವೈಷ್ಣವ ಮಹಾಸಭಾದಿಂದ ನಗರದ ಅರಮನೆ ಮೈದಾನದಲ್ಲಿ ಭಾನುವಾರ ಏರ್ಪಡಿಸಿದ್ದ ಶ್ರೀ ರಾಮಾನುಜ ವಿಶ್ವವಿಜಯ ಮಹೋತ್ಸವದ ಉದ್ಘಾಟನೆ ಸಮಾರಂಭದಲ್ಲಿ ಮಾತನಾಡಿದರು. ಯಾವುದೇ ಲಿಂಗ, ಜಾತಿ, ಧರ್ಮ ಭೇದವಿಲ್ಲದೆ ಎಲ್ಲರಿಗೂ ದೇವರನ್ನು ಪೂಜಿಸುವ ಅವಕಾಶ ದೊರೆಯಬೇಕು ಎಂದು ಸಾವಿರಾರು ವರ್ಷಗಳ ಹಿಂದೆಯೇ ಹೋರಾಟ ಮಾಡಿದ ಮಹಾನ್ ಚೇತನ ರಾಮಾನುಜಾಚಾರ್ಯರು ಎಂದು ಅಭಿಪ್ರಾಯ ಪಟ್ಟರು.

ಧರ್ಮಕ್ಕೆ ತಲೆಬಾಗ ಬೇಕೆ ಹೊರತು ದುಷ್ಟರಿಗಲ್ಲ. ಮಾನವೀಯತೆಗೆ ತಲೆಬಾಗಬೇಕೆ ಹೊರತು ಅವಿವೇಕಿಗಳಿಗಲ್ಲ ಎನ್ನುವ ತತ್ವ ಸಾರಿದವರು ರಾಮಾನುಜಾಚಾರ್ಯರು. ಭಕ್ತಿಯನ್ನು ಯಾರಿಂದಲೂ ನಾಶ ಮಾಡಲು ಸಾಧ್ಯವಿಲ್ಲ ಎಂದು ಪ್ರತಿಪಾದಿಸಿದವರು. ಸುಮಾರು 32 ವರ್ಷಗಳಿಗೂ ಹೆಚ್ಚು ಕಾಲ ಕನ್ನಡ ನಾಡಿನಾದ್ಯಂತ ಸಂಚರಿಸಿ ತಮ್ಮ

ಸಿದ್ಧಾಂತವನ್ನು ಪ್ರಚಾರ ಮಾಡಿದವರು ಎಂದರು. ಆಚಾರ್ಯರು ತಮ್ಮ ಧಾರ್ಮಿಕ ದೃಷ್ಟಿಕೋನಗಳನ್ನು ಜನಸಾಮಾನ್ಯರಿಗೆ ತಲುಪುವಂತೆ ಮಾಡಿದ ಕಾರಣಕ್ಕೆ ನಾವೆಲ್ಲರೂ ಇನ್ನೂ ಮನುಷ್ಯರಾಗಿ ಉಳಿದುಕೊಂಡಿದ್ದೇವೆ. ಹಿರಿಯರು ಮನೆ ಹುಷಾರು ಮಠ ಹುಷಾರು ಎಂದು ಕಿವಿಮಾತು ಹೇಳಿದ್ದಾರೆ. ನೀವು ನಿಮ್ಮ ಮಠ, ಆಚಾರ ವಿಚಾರಗಳನ್ನು ಉಳಿಸಿಕೊಳ್ಳಬೇಕು ಎಂದು ಹೇಳಿದರು. ಒಳ್ಳೆಯ ಕೆಲಸಗಳನ್ನು ಮಾಡಲು ದೇವರು ಕೈ ಕೊಟ್ಟಿದ್ದಾನೆ. ಒಳ್ಳೆಯದನ್ನು ನೋಡಲು ಕಣ್ಣುಗಳಿವೆ, ಒಳ್ಳೆಯದನ್ನು ಕೇಳಲು ಕಿವಿಗಳಿವೆ. ಅದೇ ರೀತಿ ನೀವು ಧಾರ್ಮಿಕ ಪ್ರವಚನಕಾರರ ಮಾತುಗಳನ್ನು ಕೇಳಿ ಉತ್ತಮವಾದದನ್ನು ಜೀವನದಲ್ಲಿ ರೂಡಿಸಿಕೊಳ್ಳಬೇಕು ಎಂದು ಹೇಳಿದರು. ಈ ದೇಶದಲ್ಲಿ ಸಾಧುಸಂತರು ಇರುವ ಕಾರಣಕ್ಕೆ ನೆಮ್ಮದಿ ಇದೆ. ನೆಮ್ಮದಿಯನ್ನು ಕಾಣಲು ನಾವು ದೇವಸ್ಥಾನ ಹಾಗೂ ದೇವರ ಮೊರೆ ಹೋಗುತ್ತೇವೆ. ಮನುಷ್ಯನ ಪ್ರಯತ್ನ ವಿಫಲವಾಗಬಹುದು ಆದರೆ ದೇವರ ಪ್ರಾರ್ಥನೆ ಎಂದಿಗೂ ವಿಫಲವಾಗುವುದಿಲ್ಲ ಎಂದು ತಿಳಿಸಿದರು. ನನ್ನನ್ನು ಬಂಡೆ ಎಂದು ಕರೆಯುತ್ತಾರೆ. ಅದಕ್ಕೆ ನಾನು ಉತ್ತರವಾಗಿ ಕಲ್ಲು ಪ್ರಕೃತಿ, ಕಡೆದರೆ ಆಕೃತಿ, ಪೂಜಿಸಿದರೆ ಸಂಸ್ಕೃತಿ. ಒಂದು ಕಲ್ಲನ್ನು ಮೆಟ್ಟಿಲನ್ನಾಗಿಗಿ ಮಾಡಿಕೊಳ್ಳಬಹುದು. ಚಪ್ಪಡಿಯಾಗಿ, ಗರುಡಗಂಬವಾಗಿ, ನೆಲಹಾಸಾಗಿ ಬಳಸಿಕೊಳ್ಳಬಹುದು ಎಂದರು.

ನಿಮ್ಮ ಅಖಿಲ ಕರ್ನಾಟಕ ವೈಷ್ಣವ ಮಹಾಸಭಾದ ಎಲ್ಲಾ ಕಾರ್ಯಕ್ರಮಗಳಿಗೆ ನಿಮ್ಮ ಮನೆ ಮಗನಾಗಿ ನನ್ನ ಬೆಂಬಲ ಇದ್ದೇ ಇರುತ್ತದೆ. ಅರ್ಚಕಸ್ಯ ಪ್ರಭಾಯನ ಶಿಲಾಭೂತಿ ಶಂಕರಃ ಅಂದರೆ ಅರ್ಚಕನ ಪ್ರಭಾವದಿಂದ ಶಿಲೆಯಲ್ಲಿ ಕೂಡ ಶಂಕರನನ್ನು ಕಾಣಬಹುದು. ಅರ್ಚಕರ ಮೂಲಕ ಬದುಕಿನಲ್ಲಿ ನೆಮ್ಮದಿ ಸಿಗಲಿ ನಮ್ಮ ಮಕ್ಕಳಿಗೆ ಒಳ್ಳೆಯದಾಗಲಿ ಎಂದು ದೇವರಲ್ಲಿ ಬೇಡಿಕೊಳ್ಳುತ್ತೇವೆ ಎಂದರು. ಅಲೆಕ್ಸಾಂಡರ್ ಪ್ರಪಂಚವನ್ನು ವಶಪಡಿಸಿಕೊಳ್ಳಲು ಮುಂದಾಗಿ ಭಾರತದತ್ತ ಬರುವಾಗ ಅವರ ಗುರು ಒಂದು ಮಾತು ಹೇಳಿದರಂತೆ. ಭಾರತದಿಂದ ಬರುವಾಗ ಐದು ವಸ್ತುಗಳನ್ನು ತೆಗೆದುಕೊಂಡು ಬಾ. ಮಹಾಭಾರತ, ರಾಮಾಯಣ ಗ್ರಂಥ, ಕೃಷ್ಣನ ಕೊಳಲು, ಗಂಗಾಜಲ ಹಾಗೂ ರಾಮಾನುಜಾಚಾರ್ಯರಂತಹ ತತ್ವಜ್ಞಾನಿಗಳನ್ನು ಕರೆದುಕೊಂಡು ಬಾ. ಈ ಐದು ವಸ್ತುಗಳನ್ನು ಗೆದ್ದರೆ ಭಾರತವನ್ನು ಗೆದ್ದಂತೆ ಎಂದು ಹೇಳಿದರಂತೆ ಎಂದರು.

ಧರ್ಮ ಯಾವುದಾದರೂ ತತ್ವ ಒಂದೇ. ನಾಮ ನೂರಾದರೂ ದೈವ ಒಂದೇ. ಪೂಜೆ ಯಾವುದಾದರೂ ಭಕ್ತಿ ಒಂದೆ. ಕರ್ಮ ಯಾವುದಾದರೂ ನಿಷ್ಠೆ ಒಂದೆ. ದೇವನೊಬ್ಬ ನಾಮ ಹಲವು ಎಂದು ಹೇಳಿದರು. ಇದು ಭಾಗ್ಯ ಇದು ಭಾಗ್ಯ ಇದು ಭಾಗ್ಯವಯ್ಯ, ಪದುಮನಾಭನ ಪಾದ ಭಜನೆ ಪರಮ ಸುಖವಯ್ಯ ಎನ್ನುವ ಪುರಂದರದಾಸರ ಮಾತಿನಂತೆ, ನ್ಯಾಯ ನೀತಿ ಧರ್ಮಕ್ಕಾಗಿ ಶ್ರಮ ಪಡುತ್ತಿರುವ ಹಿರಿಯರ ಮಾತುಗಳನ್ನು ಕೇಳುವ ಭಾಗ್ಯ ಈ ಕಾರ್ಯಕ್ರಮದಿಂದ ನನಗೆ ಒದಗಿ ಬಂದಿದೆ. ಕಾರ್ಯಕ್ರಮದಲ್ಲಿ ನಾವೆಲ್ಲರೂ ಭಾಗವಹಿಸಿರುವುದೇ ನಮ್ಮ ಭಾಗ್ಯ ಎಂದು ಹೇಳಿದರು.

ಧಾರ್ಮಿಕ ಕಾರ್ಯದಲ್ಲಿ ರಾಜಕಾರಣಿಗಳಿಗೆ ಯಾವುದೇ ಕೆಲಸವಿರುವುದಿಲ್ಲ. ಆದರೂ ನನ್ನ ಮೇಲೆ ಪ್ರೀತಿ ಇಟ್ಟು ಈ ಧರ್ಮ ಸಂಸತ್ ಸಭೆಗೆ ಕರೆದ ಎಲ್ಲರಿಗೂ ಧನ್ಯವಾದಗಳು. ಇದರಿಂದ ನನಗೂ ಒಂದಷ್ಟು ಉತ್ತಮ ಮಾತುಗಳನ್ನು ಕೇಳಿಸಿಕೊಳ್ಳುವ ಅವಕಾಶ ದೊರೆಯುತ್ತದೆ ಎಂದರು.

ಅನ್ಯಲಿಂಗಿ ಸಮುದಾಯದ ಸದಸ್ಯರು ಭಾನುವಾರ ಬೆಂಗಳೂರಿನ ಕಂಠೀರವ ಸ್ಟೇಡಿಯಂನಿಂದ ಸಂಸ ಬಯಲು ರಂಗ ಮಂದಿರದವರೆಗೆ ಬೆಂಗಳೂರು ನಮ್ಮ ಪ್ರೈಡ್ ವಾಕ್ ಅನ್ನು ನಡೆಸಿದರು, ನ್ಯಾಯ, ಸೇರ್ಪಡೆ ಮತ್ತು ಸಮಾನತೆಗೆ ಒತ್ತಾಯಿಸುವ ಚಳವಳಿಗೆ ಒತ್ತಾಯಿಸಿದರು.

ಚನ್ನಪಟ್ಟಣದಲ್ಲಿ ಜೆಡಿಎಸ್ ಲೆಕ್ಕಾಚಾರ ಸಂಪೂರ್ಣ ಉಲ್ಟಾಪಲ್ಟಾ

ಬೆಂಗಳೂರು, ನ.24 : ಚನ್ನಪಟ್ಟಣ ಉಪಚುನಾವಣೆಯಲ್ಲಿ ನಿಖಿಲ್ ಕುಮಾರಸ್ವಾಮಿ ಗೆಲುವಿನ ನಿರೀಕ್ಷೆಯಲ್ಲಿದ್ದ ಜೆಡಿಎಸ್‌ಗೆ ದೊಡ್ಡ ಆಘಾತವೇ ಎದುರಾಗಿದೆ. ಚನ್ನಪಟ್ಟಣದಲ್ಲಿ ಜೆಡಿಎಸ್ ಲೆಕ್ಕಾಚಾರ ಸಂಪೂರ್ಣ ಉಲ್ಟಾಪಲ್ಟಾ ಆಗಿದೆ. ಇದರಿಂದಾಗಿ ದಳಪತಿಗಳಿಗೆ ಆತಂಕವೂ ಹೆಚ್ಚಾಗಿದೆ. ನಿಖಿಲ್ ಸೋಲಿನಿಂದಾಗಿ ಚನ್ನಪಟ್ಟಣದಲ್ಲಿ ಜೆಡಿಎಸ್‌ಗೆ ಹೊಸ ಟೆನ್ಷನ್ ಕೂಡ ಆರಂಭವಾಗಿದೆ.



ಸದ್ಯ ಉಪಚುನಾವಣೆ ಗೆಲುವಿನ ಮೂಲಕ ಜೆಡಿಎಸ್ ಭದ್ರಕೋಟೆಯಲ್ಲಿ ಡಿ.ಕೆ. ಸಹೋದರರು ಲಗ್ಗೆ ಇಟ್ಟಿದ್ದಾರೆ. ಡಿ.ಕೆ. ಶಿವಕುಮಾರ್ ಮತ್ತು ಡಿ.ಕೆ. ಸುರೇಶ್ ಸಹೋದರರ ಪ್ರವೇಶದಿಂದಾಗಿ ಒಕ್ಕಲಿಗ ಜೆಡಿಎಸ್ ನಾಯಕರನ್ನು ಕಾಂಗ್ರೆಸ್ಗೆ ಸೆಳೆಯುವ ಆತಂಕ ದಳಪತಿಗಳಿಗೆ ಎದುರಾಗಿದೆ. ಜೆಡಿಎಸ್ ಹಿರಿಯ ನಾಯಕ, ಶಾಸಕ ಜಿಟಿ ದೇವೇಗೌಡ ಈಗಾಗಲೇ ಪಕ್ಷದಿಂದ ಸಾಕಷ್ಟು ಅಂತರ ಕಾಯ್ದುಕೊಂಡಿದ್ದಾರೆ. ಅವರು ಕಾಂಗ್ರೆಸ್‌ಗೆ ಸೇರುವ ಸಾಧ್ಯತೆಗಳಿವೆ ಎಂಬ ಊಹಾಪೋಹಗಳೂ ಹರಿದಾಡಲು ಆರಂಭವಾಗಿದೆ. ಇಂಥ ಸಂದರ್ಭದಲ್ಲಿ ಮುಂದಿನ ದಿನಗಳಲ್ಲಿ ಜೆಡಿಎಸ್ ಮುಖಂಡರನ್ನು ಹಿಡಿದಿಟ್ಟುಕೊಳ್ಳುವ ಸವಾಲು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಮೇಲಿದೆ.

ಮತ್ತೊಂದೆಡೆ, ಉಪಚುನಾವಣೆ ಗೆಲುವಿನಿಂದ ಸಿ.ಪಿ. ಯೋಗೇಶ್ವರ್ ಹಾಗೂ ಡಿ.ಕೆ. ಸಹೋದರರ ನಡುವಣ ಸ್ನೇಹ ಮತ್ತಷ್ಟು ಗಟ್ಟಿಯಾಗಿದೆ. ಇದರೊಂದಿಗೆ, ಜೆಡಿಎಸ್ ಭದ್ರಕೋಟೆ ಹಳೆ ಮೈಸೂರು ಭಾಗದಲ್ಲಿ ಸಂಪೂರ್ಣ ಹಿಡಿತ ಸಾಧಿಸಲು ಡಿ.ಕೆ. ಸಹೋದರರು ಯೋಜನೆ ರೂಪಿಸಿದ್ದಾರೆ. ಹೀಗಾಗಿ ಕಾರ್ಯಕರ್ತರು ಹಾಗೂ ಮುಖಂಡರು ಪಕ್ಷಾಂತರ ಮಾಡುವ ಆತಂಕ ಜೆಡಿಎಸ್‌ಗೆ ಎದುರಾಗಿದೆ. ನಿಖಿಲ್ ಸೋಲಿನಿಂದ ಕುಮಾರಸ್ವಾಮಿ ರಾಮನಗರ ಜಿಲ್ಲೆಯಲ್ಲಿ ಅಧಿಕಾರದಿಂದ ದೂರ ಉಳಿದಂತಾಗಿದೆ. ಇದರಿಂದಾಗಿ ಮುಂದಿನ ದಿನಗಳಲ್ಲಿ ಹಳೆ ಮೈಸೂರು ಭಾಗದಲ್ಲಿ ಜೆಡಿಎಸ್ ಅಸ್ತಿತ್ವ ಉಳಿಸಿಕೊಳ್ಳುವ ದೊಡ್ಡ ಜವಾಬ್ದಾರಿ, ಸವಾಲು ಕುಮಾರಸ್ವಾಮಿಗೆ ಎದುರಾಗಲಿದೆ.

ಬೆಳಗಾವಿ ಅಧಿವೇಶನ : ವಿರೋಧಪಕ್ಷಗಳ ಆರೋಪಗಳಿಗೆ ತಿರುಗೇಟು ನೀಡುವ ಆತಸ್ಥೈರ್ಯವನ್ನು ಹೆಚ್ಚಿಸಿದೆ

ಬೆಂಗಳೂರು, ನ.24 : ಉಪಚುನಾವಣೆಯ ಫಲಿತಾಂಶ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಕಾಂಗ್ರೆಸ್ ಪಕ್ಷಕ್ಕೆ ಆನೆಬಲ ತಂದುಕೊಟ್ಟಿದ್ದು, ಬೆಳಗಾವಿ ವಿಧಾನಮಂಡಲದ ಅಧಿವೇಶನದಲ್ಲಿ ವಿರೋಧಪಕ್ಷಗಳ ಆರೋಪಗಳಿಗೆ ತಿರುಗೇಟು ನೀಡುವ ಆತಸ್ಥೈರ್ಯವನ್ನು ಹೆಚ್ಚಿಸಿದೆ. ಇತ್ತೀಚೆಗೆ ವಿಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ ಸರ್ಕಾರದ ವಿರುದ್ಧ ಒಂದಲ್ಲಾ ಒಂದು ಆರೋಪಗಳನ್ನಿಟ್ಟುಕೊಂಡು ಮುಗಿ ಬೀಳುತ್ತಲೇ ಇವೆ.

ಆರಂಭದಲ್ಲಿ ಕಾಮಗಾರಿಯಲ್ಲಿ ಕಮಿಷನ್ ಪಡೆದ ಆರೋಪವನ್ನು ಉಯ್ಲೆಬ್ಬಿಸಿದ್ದವು. ಅನಂತರ ಕೆಲ ಅಧಿಕಾರಿಗಳ ಆತಹತ್ಯೆ ಪ್ರಕರಣಗಳು ಸರ್ಕಾರವನ್ನು ಮುಜುಗರ ಉಂಟುಮಾಡಿತ್ತು. ಇತ್ತೀಚಿನ ದಿನಗಳಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ನಿವೇಶನ ಹಂಚಿಕೆ, ವಕ್ಫ್ ಬೋರ್ಡಿನಿಂದ ಭೂಮಿ ಕಬಳಿಕೆಯ ಪ್ರಯತ್ನ ಎಂಬ ಆರೋಪಗಳು ಭಾರಿ ಸದ್ದು ಮಾಡಿದ್ದವು. ಇದನ್ನು ಮುಂದಿಟ್ಟುಕೊಂಡು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ತೇಜೋವಧೆ ಮಾಡಲು ಶತಪ್ರಯತ್ನಗಳು ನಡೆದಿದ್ದವು. ರಾಜ್ಯ ರಾಜಕೀಯದಲ್ಲಿ ಮಹತ್ವದ ಅಂಶವೆಂದರೆ ಜನಪ್ರಿಯ ನಾಯಕರಾಗಿರುವ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ, ಮುಖ್ಯಮಂತ್ರಿ ಸಿದ್ದರಾಮಯ್ಯ, ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರನ್ನು ತೇಜೋವಧೆ ಮಾಡಲು ಯತ್ನಿಸಿದ ವ್ಯಕ್ತಿಗಳು ಮತ್ತು ಪಕ್ಷಗಳು ಧೂಳೀಪಟವಾಗಿರುವ ಹಲವು ಪ್ರಸಂಗಗಳಿವೆ.

ಇತ್ತೀಚಿನ ದಿನಗಳಲ್ಲಿ ಮುಡಾ ಪ್ರಕರಣವನ್ನು ಮುಂದಿಟ್ಟುಕೊಂಡು ಸಿದ್ದರಾಮಯ್ಯ ಮತ್ತು ಅವರ ಕುಟುಂಬದ ವೈಯಕ್ತಿಕ ತೇಜೋವಧೆಗೆ ಸತತ ಪ್ರಯತ್ನ ನಡೆದಿತ್ತು. ಇದಕ್ಕೆ ತಕ್ಕ ಪ್ರತ್ಯುತ್ತರ ಎಂಬಂತೆ ಉಪಚುನಾವಣೆಯ ಮೂರೂ ಕ್ಷೇತ್ರಗಳಲ್ಲೂ ಮತದಾರರು ಕಾಂಗ್ರೆಸ್ ಪಕ್ಷವನ್ನು ಗೆಲ್ಲಿಸುವ ಮೂಲಕ ವಿರೋಧಪಕ್ಷಗಳ ಜಂಗಾಬಲವನ್ನೇ ಹುದುಗುವಂತೆ ಮಾಡಿದೆ.

ಬಹುತೇಕ ಶಿಗ್ಗಾಂವಿ ಬಿಜೆಪಿಯ ಪಾಲು ಎನ್ನುವ ಸನ್ನಿವೇಶವಿತ್ತು. ಅಲ್ಲೂ ಕೂಡ ಕಾಂಗ್ರೆಸ್ ಪಕ್ಷ ಗೆಲ್ಲುವ ಮೂಲಕ ಆಡಳಿತಾರೂಢ ಸರ್ಕಾರಕ್ಕೆ ಹೆಚ್ಚಿನ ಬಲ ತಂದುಕೊಟ್ಟಿದೆ. ಹಳೆ ಮೈಸೂರು ಭಾಗ ಜೆಡಿಎಸ್‌ನ ಭದ್ರಕೋಟೆ ಎಂಬ ಸಾಂಪ್ರದಾಯಿಕ ಅಭಿಪ್ರಾಯಕ್ಕೆ ಉಪಚುನಾವಣೆಯ ಫಲಿತಾಂಶ ಕೊಡಲಿ ಪೆಟ್ಟು ನೀಡಿದೆ. ಬಳ್ಳಾರಿಯಲ್ಲಿ ಗಣಿದಣಿಗಳು ಮತ್ತು ಬಿಜೆಪಿಯ ಪ್ರಮುಖ ನಾಯಕರು ನಡೆಸಿದ ಗರಿಷ್ಠ ಮಟ್ಟದ ಪ್ರಯತ್ನಗಳು ವ್ಯರ್ಥವಾಗಿವೆ. ಇದೇ ಫಲಿತಾಂಶವನ್ನು ಆಧರಿಸಿ ಕೆಪಿಸಿಸಿ ಅಧ್ಯಕ್ಷ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಿನ್ನೆಯೇ ವಿರೋಧಪಕ್ಷಗಳಿಗೆ ತಕ್ಕ ಪ್ರತ್ಯುತ್ತರ ನೀಡಿ ಆಗಿದೆ. ಬಿಜೆಪಿ ನಾಯಕರು ಚುನಾವಣೆಯಲ್ಲಿ ಸೋಲು–ಗೆಲುವು ಸಾಮಾನ್ಯ ಎಂಬ ಸಾಫಾಸೀದಾ ಅಭಿಪ್ರಾಯದ ಮೂಲಕ ಸರ್ಕಾರದ ವಿರುದ್ಧ ಮತ್ತೆ ಮುಗಿಬೀಳಲು ತಯಾರಿ ನಡೆಸಿವೆ.

ಮುಂದಿನ ತಿಂಗಳು ಬೆಳಗಾವಿಯಲ್ಲಿ ನಡೆಯಲಿರುವ ಅಧೀವೇಶನ ಆಡಳಿತ ಮತ್ತು ಪ್ರತಿಪಕ್ಷಗಳಿಗೆ ಮುಖಾಮುಖಿ ವೇದಿಕೆಯಾಗಲಿದೆ. ಕಳೆದ ಅಧಿವೇಶನದಿಂದೀಚೆಗೆ ನಡೆದಿರುವ ಹಲವು ವಿಚಾರಗಳು ಪ್ರಸ್ತಾಪವಾಗಲಿವೆ. ವಿರೋಧಪಕ್ಷಗಳು ಈವರೆಗೂ ಲಭ್ಯವಿರುವ ಮಾಹಿತಿ ಹಾಗೂ ದಾಖಲಾತಿಗಳನ್ನು ಮುಂದಿಟ್ಟುಕೊಂಡು ಸರ್ಕಾರವನ್ನು ಮುಜುಗರಕ್ಕೀಡು ಮಾಡಲು ತಯಾರಿ ನಡೆಸಿವೆ. ಇದಕ್ಕೆ ಉಪಚುನಾವಣೆಯ ಗೆಲುವಿನ ಅಸ್ತ್ರವನ್ನಿಟ್ಟುಕೊಂಡು ಕಾಂಗ್ರೆಸ್ಸಕ್ಷ ಎದುರೇಟು ನೀಡಲು ಸಿದ್ಧಗೊಳ್ಳುತ್ತಿದೆ. ರಾಜ್ಯ ರಾಜಕಾರಣದಲ್ಲಿ ಕಳೆದ ವಿಧಾನಸಭಾ ಚುನಾವಣಾ ಫಲಿತಾಂಶ ಲೋಕಸಭಾ ಚುನಾವಣಾ ಬಳಿಕ ನಡೆದ ಈ ಉಪಚುನಾವಣೆ ವಿರೋಧಪಕ್ಷಗಳ ನಾಯಕತ್ವದ ಕೊರತೆಯನ್ನು ಎತ್ತಿ ತೋರಿಸಿದೆ. ಕಾಂಗ್ರೆಸ್ ಪಕ್ಷದಲ್ಲಿ ನಾಯಕತ್ವದಲ್ಲಿ ಬಿರುಕಿದೆ. ತುಷ್ಟೀಕರಣವೇ ಬಂಡವಾಳ ಎಂಬೆಲ್ಲಾ ಹಲವು ರೀತಿಯ ವ್ಯಾಖ್ಯಾನಗಳ ನಡುವೆಯೂ ಉಪಚುನಾವಣೆಯ ಗೆಲುವು ವಿಪಕ್ಷಗಳಿಗೆ ಉತ್ತರ ನೀಡಿದಂತಿದ್ದು, ಕಾಂಗ್ರೆಸ್ ನಾಯಕರು ಗೆಲುವಿನ ಹುಮಸ್ಸಿನಲ್ಲಿ ತೇಲುತ್ತಿದ್ದಾರೆ.

ಪೂರ್ವ ಕರಾವಳಿಗೆ ವಿಶೇಷ ರೈಲು

ಬೆಂಗಳೂರು, ನ.24 : ಕೇರಳದ ಶಬರಿಮಲೈಗೆ ತೆರಳುವ ಅಯ್ಯಪ್ಪ ಸ್ವಾಮಿ ಭಕ್ತರಿಗೆ ಅನುಕೂಲವಾಗಲೆಂದು ಪೂರ್ವ ಕರಾವಳಿ ರೈಲ್ವೆಯು ವಿಶೇಷ ರೈಲುಗಳನ್ನು ಘೋಷಣೆ ಮಾಡಿದೆ. ಶ್ರೀಕಾಕುಳಂ ರೋಡ್ ನಿಂದ ಕೊಲ್ಲಂ ಹಾಗೂ ವಿಶಾಖಪಟ್ಟಣಂನಿಂದ ಕೊಲ್ಲಂಗೆ ವಿಶೇಷ ರೈಲುಗಳು ಸಂಚರಿಸಲಿವೆ. ಶ್ರೀಕಾಕುಳಂ ರೋಡ್‌ನಿಂದ ಕೊಲ್ಲಂಗೆ ಡಿಸೆಂಬರ್ 1ರ ಭಾನುವಾರದಿಂದ ಜನವರಿ 26ರವರೆಗೆ ವಿಶೇಷ ರೈಲುಗಳು ಸಂಚರಿಸಲಿವೆ. ಬೆಳಗ್ಗೆ 6 ಗಂಟೆಗೆ ಶ್ರೀಕಾಕುಳಂ ರೋಡ್ ನಿಂದ ಹೊರಡುವ ರೈಲು ಮರುದಿನ ಮಧ್ಯಾಹ್ನ 2.30ಕ್ಕೆ ಕೊಲ್ಲಂ ತಲುಪಲಿದೆ.

ಅದೇ ವೇಳೆ ಡಿಸೆಂಬರ್ 2ರಿಂದ ಜನವರಿ 27ರವರೆಗೆ ಕೊಲ್ಲಂನಿಂದ ವಿಶಾಖಪಟ್ಟಣಂ ಹಾಗೂ ಶ್ರೀಕಾಕುಳಂ ರೋಡ್‌ಗೆ ವಿಶೇಷ ರೈಲು ಸಂಚರಿಸಲಿದೆ. ಕೊಲ್ಲಂನಲ್ಲಿ ಸಂಜೆ 4.30ಕ್ಕೆ ಹೊರಡಲಿರುವ ರೈಲು ರಾತ್ರಿ 10.40ಕ್ಕೆ ದುವಾಡಾ ಹಾಗೂ ಮರುದಿನ ಮಧ್ಯಾಹ್ನ 2.30ಕ್ಕೆ ಶ್ರೀಕಾಕುಳಂ ತಲುಪಲಿದೆ. ವಿಶಾಖ ಪಟ್ಟಣಂ ಮತ್ತು ಕೊಲ್ಲಂ ನಡುವಿನ ವಿಶೇಷ ರೈಲು ಡಿಸೆಂಬರ್ 4 ರಿಂದ ಫೆಬ್ರವರಿ 26ರವರೆಗೆ ಸಂಚರಿಸಲಿದೆ.

ವಿಶಾಖಪಟ್ಟಣಂನಿಂದ ಬೆಳಗ್ಗೆ 8.20ಕ್ಕೆ ಹೊರಡಲಿರುವ ರೈಲು ಮಾರನೆ ದಿನ ಮಧ್ಯಾಹ್ನ ರಾತ್ರಿ 12.55ಕ್ಕೆ ಕೊಲ್ಲಂ ತಲುಪಲಿದೆ. ಅದೇ ರೀತಿ ಗುರುವಾರ ಡಿಸೆಂಬರ್ 5ರಿಂದ ಫೆಬ್ರವರಿ 27ರವರೆಗೆ ವಿಶಾಖಪಟ್ಟಣಂಗೆ ವಿಶೇಷ ರೈಲು ಸಂಚರಿಸಲಿದೆ.

ರಾತ್ರಿ 7.35ಕ್ಕೆ ಕೊಲ್ಲಂನಿಂದ ಹೊರಟು ಮರುದಿನ 11.20ಕ್ಕೆ ವಿಶೇಷ ರೈಲು ವಿಶಾಖಪಟ್ಟಣಂ ತಲುಪಲಿದೆ. ಎರಡೂ ರೈಲುಗಳು ವಿಜಯವಾಡ, ರಾಜಮಂಡ್ರಿ, ರೆಣಿಗುಂಟಾ, ಕಾಟ್ಪಾಡಿ, ಸೇಲಂ, ಇ–ರೋಡ್, ಪಾಲ್ಕಾಡ್, ಯರ್ನಾಲುಕಂ ಹಾಗೂ ಕಾಯಂಕುಲಂ ನಿಲ್ದಾಣಗಳಲ್ಲಿ ನಿಲುಗಡೆ ಹೊಂದಿರುತ್ತವೆ. ಎಸಿ, ಸ್ಲೀಪರ್ ಹಾಗೂ ಸಾಮಾನ್ಯ ದರ್ಜೆ ಕಂಪಾರ್ಟ್ ಮೆಂಟ್‌ಗಳು ಲಭ್ಯವಿರುತ್ತವೆ ಎಂದು ರೈಲ್ವೆ ಇಲಾಖೆ ತಿಳಿಸಿದೆ.

ಎಚ್.ಡಿ.ಕೆ ವಿರುದ್ಧ ಜಿಟಿಡಿ ನೇರ ವಾಗ್ದಾಳಿ

ಮೈಸೂರು, ನ.24 : ಉಪಚುನಾವಣೆ ಹೊತ್ತಿನಲ್ಲಿ ಬದಿಗೆ ಸರಿದಿದ್ದ ಜೆಡಿಎಸ್ ಆಂತರಿಕ ಸಂಘರ್ಷ ಫಲಿತಾಂಶದ ಬಳಿಕ ಮತ್ತೆ ಮುನ್ನೆಲೆಗೆ ಬಂದಿದೆ. ಫಲಿತಾಂಶದ ಬಳಿಕ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ವಿರುದ್ಧ ಜಿಟಿಡಿ ನೇರನೇರವಾಗಿಯೇ ವಾಗ್ದಾಳಿ ನಡೆಸಿದ್ದಾರೆ. ಇದಕ್ಕೆ ಜೆಡಿಎಸ್ ನಾಯಕರು ಕೂಡ ತಿರುಗೇಟು ಕೊಟ್ಟಿದ್ದಾರೆ. ಮೈಸೂರಿನಲ್ಲಿ ಮಾತನಾಡಿದ ಜಿಟಿ ದೇವೇಗೌಡ, ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು ಕಟ್ಟಿದ ಪಕ್ಷವನ್ನು ಕುಮಾರಸ್ವಾಮಿ ಡೆಮಾಲಿಷ್ ಮಾಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದಾರೆ. ಕುಮಾರಸ್ವಾಮಿ ಈಗ ಬಿಜೆಪಿಯನ್ನು ತಬ್ಬಿಕೊಂಡಿದ್ದಾರೆ. ಬಿಜೆಪಿ ಜೊತೆ ಹೋಗದಿದ್ರೆ ಜೆಡಿಎಸ್ ಏನಾಗುತ್ತಿತ್ತು, ದಳ ಉಳಿಯುತಿತ್ತೇ ದೇವರು, ದೇವೇಗೌಡರ ಶ್ರಮದಿಂದ ಜೆಡಿಎಸ್ ಪಕ್ಷ ಉಳಿಯುತ್ತಿದೆ. ಮುನಿಸು ಇದ್ದಾಗಲೂ ದ

'ಮನ್ ಕೀ ಬಾತ್'ನಲ್ಲಿ ಗುಬ್ಬಚ್ಚಿ ರಕ್ಷಣೆ ಪ್ರಸ್ತಾಪ ಹೆಮ್ಮೆಯ ಸಂಗತಿ; ಪ್ರಹ್ಲಾದ್ ಜೋಶಿ ಬಣ್ಣನೆ

ಬಾಗಲಕೋಟ, ನ.24– ದೇಶದ್ಯಂತ ಅಳಿವಿನಂಚಿಗೆ ತಲುಪಿರುವ "ಗುಬ್ಬಚ್ಚಿ" ಸಂಕುಲದ ರಕ್ಷಣೆಗೆ ಪ್ರಧಾನಿ ನರೇಂದ್ರ ಮೋದಿ ಅವರು ಇಂದು 'ಮನ್ ಕೀ ಬಾತ್'ನಲ್ಲಿ ಕರೆ ನೀಡಿದ್ದು ಹೆಮ್ಮೆಯ ಸಂಗತಿ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹೇಳಿದರು.

ಬಾಗಲಕೋಟೆ ಬಾದಾಮಿ ತಾಲೂಕಿನ ಬೇಲೂರು ಗ್ರಾಮದಲ್ಲಿ ಇಂದು ಮನ್ ಕೀ ಬಾತ್ ವೀಕ್ಷಿಸಿದ ಸಚಿವರು, ಮಕ್ಕಳು ಗುಬ್ಬಚ್ಚಿಯನ್ನು ಫೋಟೋ–ವಿಡಿಯೋದಲ್ಲಿ ನೋಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಪ್ರಧಾನಿ ಮೋದಿ ಅವರು ದೇಶದಾದ್ಯಂತ 'ಮನ್ ಕೀ ಬಾತ್' ಅಮೋಘ ಕಾರ್ಯಕ್ರಮದ ಮೂಲಕ ದೇಶವಾಸಿಗಳಿಗೆ ಸ್ಫೂರ್ತಿ ಯಾಗಿದ್ದಾರೆ ಎಂದು ಬಣ್ಣಿಸಿದರು. ಇಂದಿನ ಆಧುನಿಕ ಯುಗದಲ್ಲಿ ದೇಶಾದ್ಯಂತ ನಗರೀಕರಣ ಹೆಚ್ಚುತ್ತಿರುವ ಕಾರಣ ಗುಬ್ಬಚ್ಚಿ ಹಕ್ಕಿ ಅಳಿವಿನಂಚಿಗೆ ತಲುಪಿದೆ. ಪ್ರಧಾನಿ ಈ ಬಾರಿಯ ಮನ್ ಕೀ ಬಾತ್ ಆವೃತ್ತಿಯಲ್ಲಿ ಇದನ್ನು ಪ್ರಸ್ತಾಸಿದ್ದಾರೆ. ಈಗಿನ ಮಕ್ಕಳಿಗೆ ಗುಬ್ಬಚ್ಚಿಯನ್ನು ವಿಡಿಯೋ ಅಥವಾ ಚಿತ್ರದ ಮುಖಾಂತರ ಪರಿಚಯಿಸುವ ಸಂದರ್ಭ ಎದುರಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು. ಅಳಿವಿನಂಚಿ ನಲ್ಲಿ ಇರುವ ಗುಬ್ಬಚ್ಚಿ ಸಂತತಿ ರಕ್ಷಿಸಲು ಚೆನ್ನೈನ ಕುಡುಗಲ್ ಟ್ರಸ್ಟ್ ತಮ್ಮ ಶಾಲಾ ಮಕ್ಕಳ ಮುಖಾಂತರ ಶತಘತ ಪ್ರಯತ್ನ ನಡೆಸುತ್ತಿದ್ದು, ದೇಶವೇ ಹೆಮ್ಮೆ ಪಡುವ ವಿಚಾರ ಎಂದು ಹೇಳಿದರು.

ಬಾದಾಮಿ ತಾಲೂಕಿನ ಬೇಲೂರು ಗ್ರಾಮದಲ್ಲಿ ನೆರೆದಿದ್ದ ವಿದ್ಯಾರ್ಥಿಗಳು, ಯುವಕರು ಹಾಗೂ ಅಪಾರ ಸಂಖ್ಯೆಯ ಗ್ರಾಮವಾಸಿಗಳೊಂದಿಗೆ ಸಚಿವ ಪ್ರಲ್ಹಾದ ಜೋಶಿ ಮನ್ ಕೀ ಬಾತ್ ಆಲಿಸಿದರು.

ವಚನ ವಿವಿ ಸ್ಥಾಪನೆಗೆ ಸಿಎಂ ಬಳಿ ನಿಯೋಗ: ಡಾ.ಪಟ್ಟದ್ದೇವರು

ಬಸವಕಲ್ಯಾಣ, ನ.24– ಬಸವಕಲ್ಯಾಣದಲ್ಲಿ ನೂತನ ಅನುಭವ ಮಂಟಪ ನಿರ್ಮಾಣವಾಗುತ್ತಿದೆ. ಈ ಅನುಭವ ಮಂಟಪಕ್ಕೆ ಜೀವಂತಿಕೆ ಬರಬೇಕಾದರೆ ಬಸವಕಲ್ಯಾಣದಲ್ಲಿ ರಾಜ್ಯ ಸರ್ಕಾರ ವಚನ ವಿಶ್ವ ವಿದ್ಯಾಲಯ ಸ್ಥಾಪಿಸಬೇಕು. ಇದಕ್ಕೆ ಸಚಿವ ಈಶ್ವರ ಖಂಡ್ರೆ ಅವರು ಸರ್ಕಾರದ ಮೇಲೆ ಒತ್ತಡ ಹೇರಬೇಕು ಎಂದು ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು ಹೇಳಿದರು.

45ನೇ ಶರಣ ಕಮ್ಮಟ ಹಾಗೂ ಅನುಭವ ಮಂಟಪ ಉತ್ಸವದ ಉದ್ಘಾಟನಾ ಸಮಾರಂಭದಲ್ಲಿ ಶ್ರೀಗಳು ಮಾತನಾಡಿ, ಜನಪದ ವಿಶ್ವ ವಿದ್ಯಾಲಯ, ಸಂಗೀತ ವಿಶ್ವ ವಿದ್ಯಾಲಯ ಹಾಗೂ ಸಂಸ್ಕೃತ ವಿಶ್ವ ವಿದ್ಯಾಲಯದಂತೆ 12ನೇ ಶತಮಾನದ ಶರಣರ ಕಾಯಕ ಭೂಮಿ ಬಸವಕಲ್ಯಾಣದಲ್ಲಿ ವಚನ ವಿಶ್ವ ವಿದ್ಯಾಲಯ ಸ್ಥಾಪಿಸಿದರೆ ಅನುಕೂಲವಾಗಲಿದೆ. ಈ ನಿಟ್ಟಿನಲ್ಲಿ ಸರ್ಕಾರ ವಿವಿ ಸ್ಥಾಪಿಸಿದರೆ ಚಿಂಥನ–ಮಂಥನ ನಡೆಯಲು ಸಹಕಾರಿಯಾಗುತ್ತದೆ. ವಿವಿಧ ರಾಜ್ಯಗಳಲ್ಲಿರುವ ಶರಣರ ಸ್ಮಾರಕಗಳು ನಶಿಸಿ ಹೋಗುತ್ತಿವೆ. ಆಯಾ ರಾಜ್ಯದ ಸರ್ಕಾರಗಳು ಪ್ರತ್ಯೇಕ ಪ್ರಾಧಿಕಾರ ರಚನೆ ಮಾಡುವ ಮೂಲಕ ಶರಣರ ಸ್ಮಾರಕಗಳು ಸಂರಕ್ಷಿಸುವ ಕೆಲಸ ಆಗಬೇಕು. ಸ್ಮಾರಕಗಳು ಉಳಿಸಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಅಲ್ಲದೆ ಬಸವಣ್ಣ ಕೇವಲ ಕರ್ನಾಟಕಕ್ಕೆ ಸೀಮಿತವಲ್ಲ ಅವರು ಇಡಿ ವಿಶ್ವಕ್ಕೆ ಸೀಮಿತರಾಗಿದ್ದಾರೆ. ಬಸವ ಜಯಂತಿ ಕರ್ನಾಟಕಕ್ಕೆ ಸೀಮಿತಗೊಳ್ಳುತ್ತಿದೆ. ಹೀಗಾಗಿ ಕೇಂದ್ರ ಸರ್ಕಾರವೇ ಬಸವ ಜಯಂತಿ ಆಚರಿಸಲು ಮುಂದಾಗಬೇಕು. ಆಗ ಎಲ್ಲಾ ರಾಜ್ಯಗಳಲ್ಲಿಯೂ ಆಚರಣೆಗೆ ಬರುತ್ತದೆ. ಈ ಹಿಂದೆ ಗದಗ್‌ನ ಜಗದ್ಗುರು ಡಾ. ತೋಂಟದ ಸಿದ್ದರಾಮ ಮಹಾಸ್ವಾಮೀಜಿ ಅವರ ನೇತೃತ್ವದಲ್ಲಿ ನಾಡಿನ ಮಠಾಧೀಶರು ಸೇರಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಿಸುವಂತೆ ಮನವಿ ಮಾಡಿದ ನಂತರ ಸಿಎಂ ಈ ಕ್ರಮ ಅನುಸರಿಸಿದರು. ಈಗ ಮತ್ತೊಮ್ಮೆ ಮಠಾಧೀಶರು ಸಿಎಂ ಬಳಿ ನಿಯೋಗ ತೆರಳಿ ವಚನ ವಿಶ್ವ ವಿದ್ಯಾಲಯ ಸ್ಥಾಪನೆ ಮಾಡುವಂತೆ ಒತ್ತಡ ಹೇರಲಾಗುವುದು.

12ನೇ ಶತಮಾನದಲ್ಲಿ ಬಸವಾದಿ ಶಿವಶರಣರು ತಮ್ಮ ಪ್ರಾಣತ್ಯಾಗ ಮಾಡಿದ್ದು ಹೆಣ್ಣು–ಹೊನ್ನು–ಮಣ್ಣಿಗಾಗಿ ಕ್ರಾಂತಿ ನಡೆಸಿಲ್ಲ. ಸಮಾನತೆಗಾಗಿ ನಡೆಸಿದ ಕ್ರಾಂತಿಯಾಗಿದೆ. ಇದು ಜಗತ್ತಿಗೇ ಮಾದರಿಯಾಗಿದ್ದು, ಇಂತಹ ಕಲ್ಯಾಣ ನಾಡಿನ ನೆಲದಲ್ಲಿ ಭಕ್ತಿಯ ಜೊತೆಗೆ ಶಕ್ತಿ ಅಡಗಿದೆ ಎಂದ ಶ್ರೀಗಳು 12ನೇ ಶತಮಾನದ ಶರಣರ ಗತವೈಭವ ಮತ್ತೆ 21ನೇ ಶತಮಾನದಲ್ಲಿ ಮರುಕಳಿಸುತ್ತಿದೆ ಎಂದು ತಿಳಿಸಿದರು.

'ವಕ್ಫ್ ಹಟಾವೋ ಅನ್ನದಾತ ಬಚಾವೋ' ಧರಣಿಗೆ ತೆರೆ

ವಕ್ಫ್ ಕಾಯ್ದೆ ವಿರುದ್ಧ ಪ್ರತಿಯೊಬ್ಬರೂ ತೊಡೆತಟ್ಟಿ ಹೋರಾಡಲಿ: ಸಿ.ಟಿ.ರವಿ

ಕಲಬುರಗಿ, ನ.24– ರಾಜ್ಯ ಸರ್ಕಾರ ಪ್ರಜಾಪ್ರಭುತ್ವ ವಿರೋಧಿ ಹಾಗೂ ಅಸಂವಿಧಾನಿಕವಾದ ವಕ್ಫ್ ಬೋರ್ಡ್ ಮೂಲಕ ಹಿಂದೂಗಳ ಆಸ್ತಿಗಳನ್ನು ಕಬಳಿಸಲು ಹೊರಟಿದೆ. ಈ ಕರಾಳ ಕಾಯ್ದೆ ರದ್ದುಗೊಳಿಸಲು, ವಕ್ಫ್ ವಿರುದ್ಧ ನಾವೆಲ್ಲರೂ ತೊಡೆತಟ್ಟಿ ಹೋರಾಟ ನಡೆಸಬೇಕಾಗಿದೆ ಎಂದು ವಿಧಾನ ಪರಿಷತ್ ಸದಸ್ಯ, ಮಾಜಿ ಸಚಿವ ಸಿ.ಟಿ. ರವಿ ಹೇಳಿದರು.

ಕಲಬುರಗಿಯಲ್ಲಿ ನಡೆದ 'ವಕ್ಫ್ ಹಟಾವೋ ಅನ್ನದಾತ ಬಚಾವೋ' ಧರಣಿ ಸತ್ಯಾಗ್ರಹದ ಸಮಾರೋಪದಲ್ಲಿ ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಭಾಗವಹಿಸಿ ಮಾತನಾಡಿದರು.

ನೇಗಿಲಯೋಗಿ ಸ್ವಾಭಿಮಾನ ವೇದಿಕೆಯಿಂದ ನಗರದ ಜಗತ್ ವೃತ್ತದಲ್ಲಿ ಹಮ್ಮಿಕೊಂಡಿದ್ದ ವಕ್ಫ್ ಹಟಾವೋ ಅನ್ನದಾತ ಬಚಾವೋ ಧರಣಿ ಸತ್ಯಾಗ್ರಹದ ಸಮಾರೋಪದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಮೂರು ದಿನಗಳ ಮಠಾಧೀಶರ ಅಹೋರಾತ್ರಿ ಧರಣಿಗೆ ತೆರೆಬಿದ್ದಿದೆ ಅಂದರೆ ಈ ಹೋರಾಟ ಇಲ್ಲಿಗೆ ಮುಗಿಯಿತೆಂದಲ್ಲ. ಮುಂದಿನ ಹಟಿರಾಟ ಇನ್ನೂ ದೊಡ್ಡ ಪ್ರಮಾಣದಲ್ಲಿ ನಡೆಯಬೇಕಿದೆ. ಮುಂದಿನ ಹೋರಾಟದಲ್ಲಿ ಇಡೀ ರಾಜ್ಯದ ಜನತೆ ಭಾಗವಹಿಸುವ ಮೂಲಕ ವಕ್ಫ್ ಎಂಬ ಕರಾಳ ಕಾಯ್ದೆ ಹಿಮ್ಮೆಟ್ಟಿಸಬೇಕು ಎಂದು ಕರೆ ನೀಡಿದರು.

ರಾಜ್ಯದ ಜನರು ಅಧಿಕಾರದ ವರ ಕೊಟ್ಟಿದ್ದು ರೈತರಿಗೆ ಆಸರೆಯಾಗಲೆಂದು. ಆದರೆ, ಕೊಟ್ಟಂತಹ ವರವನ್ನು ಈ ಸರ್ಕಾರ ಕೆಟ್ಟ ರೀತಿಯಲ್ಲಿ ಬಳಸಿಕೊಂಡು ಆಧುನಿಕ ಭಸ್ಮಾಸುರನಂತೆ ಹಿಂದೂಗಳ ಆಸ್ತಿಯನ್ನು ಕಬಳಿಸುತ್ತಿದ್ದಾರೆ. ಸಿಎಂ ಸಿದ್ದರಾಮಯ್ಯ ಹಾಗೂ ಸಚಿವ ಜಮೀರ್ ಅಹ್ಮದ್ ಅವರು, ಹಿಂದೂಗಳ ಆಸ್ತಿಯನ್ನೇ ಗಿರಿಯಾಗಿಸಿಕೊಂಡು ಅದನ್ನು ಕಬಳಿಸಲು ಹೊರಟಿದ್ದಾರೆ. ಹೀಗಾಗಿ ಪ್ರಜಾಪ್ರಭುತ್ವಕ್ಕೆ ಹಾಗೂ ಸಂವಿಧಾನಕ್ಕೆ ವಿರುದ್ಧವಾದ ವಕ್ಫ್ ಕಾಯ್ದೆ ರದ್ದಾಗಬೇಕು ಎಂದು ಹೇಳಿದರು.

ಕಲಬುರಗಿ ಜಿಲ್ಲೆಯಯೊಂದರಲ್ಲೇ 17 ಸಾವಿರ ಎಕರೆ ಭೂಮಿಯಲ್ಲಿ ವಕ್ಫ್ ಆಸ್ತಿ ಎಂದು ನಮೂದಿಸಲಾಗಿದೆ. ಇದರ ವಿರುದ್ಧ ನಾವು ವಿಧಾನ ಮಂಡಲ ಹಾಗೂ ಲೋಕಸಭೆಯಲ್ಲಿ ಧ್ವನಿ ಎತ್ತಲಿದ್ದೇವೆ. ದೇಶದ ರೈತನಿಗೆ ಜೀವ ಕೊಟ್ಟಾದರೂ ನ್ಯಾಯ ಕೊಡಿಸುವಂತಹ ಕೆಲಸ ಮಾಡುತ್ತೇವೆ. ರೈತರ ಹಿತಕ್ಕಾಗಿಯೇ ಪ್ರಧಾನಿ ನರೇಂದ್ರ ಮೋದಿ ಹಗಲಿರುಳು ಶ್ರಮಿಸುತ್ತಿದ್ದಾರೆ. ಹಿಂದೂ ಏಕ್ ಹೈ ತೋ ಸೇಫ್ ಹೈ. ನಾವೆಲ್ಲರೂ ಒಂದಾದಾಗ ಮಾತ್ರ ಇಂತಹ ಸಂಗತಿಗಳನ್ನು ಎದುರಿಸಲು ಸಾಧ್ಯ. ಜಾತಿವಾದ ಮಾಡಿಕೊಂಡು ಬದುಕಬೇಡಿ. ನಮ್ಮ ಆಸ್ತಿಗಳು ನಮ್ಮಿಂದ ದೂರ ಹೋಗುವ ಮುನ್ನ ಜಾಗೃತರಾಗಿ ಎಂದು ಜನರಿಗೆ ಜಾಗೃತಗೊಳಿಸಿದರು.

ನೇಗಿಲಯೋಗಿ ಸ್ವಾಭಿಮಾನ ವೇದಿಕೆ ನೇತೃತ್ವದಲ್ಲಿ ಮೂರು ದಿನಗಳ ಕಾಲ ಧರಣಿ ಸತ್ಯಾಗ್ರಹ ನಡೆಸಿದ ಮಠಾಧೀಶರು ಎಂಎಲ್ಸಿ ಸಿಟಿ ರವಿ ಅವರಿಗೆ ರೈತರ ಜಮೀನು, ಹಿಂದೂ ಮಠ ಮಂದಿರಗಳಿಗೆ ಆಗುತ್ತಿರುವ ಅನ್ಯಾಯವನ್ನು ಸರಿಪಡಿಸುವಂತೆ ಮನವಿ ಸಲ್ಲಿಸುವ ಮೂಲಕ ಹೋರಾಟ ಅಂತ್ಯಗೊಳಿಸಿದರು.

> ರಾಜ್ಯ ಸರ್ಕಾರದ ಬಕಾಸುರನ ಸಂಸ್ಕೃತಿಗೆ ತಿಲಾಂಜಲಿ ಇಡಬೇಕಾದ ಅನಿವಾರ್ಯತೆ ಎದುರಾಗಿದೆ. ಪ್ರಜಾಪ್ರಭುತ್ವ ಹಾಗೂ ಸಂವಿಧಾನಕ್ಕೆ ಆಗಿರುವ ಅನ್ಯಾಯದ ವಿರುದ್ಧ ಹಿಂದೂಗಳು ಧ್ವನಿ ಎತ್ತಬೇಕಾಗಿದೆ.
> –ಸಿ.ಟಿ. ರವಿ,
> ವಿಧಾನ ಪರಿಷತ್ ಸದಸ್ಯ.

ಅಧಿಕಾರಿಗಳ ತಂಡದಿಂದ ನರೇಗಾ ಪ್ರಗತಿ ಪರಿಶೀಲನೆ

ರಾಯಚೂರು ತಾಲ್ಲೂಕಿನ ಚಂದ್ರಬಂಡಾ ಗ್ರಾಮದಲ್ಲಿ ನರೇಗಾ ಯೋಜನೆಯಡಿ ಕೈಗೊಂಡ ಕಾಮಗಾರಿಗಳನ್ನು ಪಂಚಾಯತ್ ರಾಜ್ ಇಲಾಖೆಯ ಆಯುಕ್ತಾಲಯದ ಮುಖ್ಯ ಕಾರ್ಯಾಚರಣೆ ಅಧಿಕಾರಿ ಪಿ.ಜಿ ವೇಣುಗೋಪಾಲ ಅವರು ಕಾಮಗಾರಿ ಪರಿಶೀಲನೆ ನಡೆಸಿದರು.

ರಾಯಚೂರು, ನ.24– ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಆಯುಕ್ತಾಲಯ ಮುಖ್ಯ ಕಾರ್ಯಾಚರಣೆ ಅಧಿಕಾರಿ ಪಿಜಿ ವೇಣುಗೋಪಾಲ ಅವರ ಅಧ್ಯಕ್ಷತೆಯಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆ ಅನುಷ್ಠಾನದ ಕುರಿತು ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನೆ ಸಭೆ ನಡೆಸಲಾಯಿತು.

ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನೆ ಸಭೆಯಲ್ಲಿ ಮಾನವ ದಿನಗಳ ಸೃಜನೆ, ಸಾಮಾಜಿಕ ಲೆಕ್ಕ ಪರಿಶೋಧನೆ, ಪ್ರಕರಣಗಳ ಆಧಾರ್ ಸ್ಥಿತಿ, ರಿಜೆಕ್ಟ್ ಟ್ರಾನಜೆಕ್ಷನ್, ಕಾಮಗಾರಿ ಪೂರ್ಣಗೊಳಿಸಲು ಹೆಚ್ಚಿನ ಆದ್ಯತೆ, ಜಿಯೋ ಟ್ಯಾಗ್, ಏರಿಯಾ ಆಫೀಸರ್ ವರದಿ, ಬೂದು ನೀರು ನಿರ್ವಹಣೆ ಘಟಕ, ಸಿ.ಎಫ್.ಪಿ ಕ್ಲಸ್ಟರ್ ಸೌಲಭ್ಯ ಯೋಜನೆ, ಇನ್ನೂ ಅಮೃತ ಸರೋವರ 2.0 ಕಾಮಗಾರಿಗಳನ್ನು ಸ್ಥಳ ಗುರುತಿಸುವಿಕೆ ಹಾಗೂ ಇನ್ನೀತರ ವಿಷಯಗಳ ಕುರಿತು ಪ್ರಗತಿ ಪರಿಶೀಲನೆ ನಡೆಯಿತು. ನಂತರ ತಾಲ್ಲೂಕಿನ ಚಂದ್ರಬಂಡಾ ಗ್ರಾಮದಲ್ಲಿ ಆಶ್ರಯ ಕಾಲೋನಿಯಲ್ಲಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ನಿರ್ಮಾಣ ಮಾಡಿರುವ ಕಂಪೌಂಡ್ ಕಾಮಗಾರಿಯನ್ನು ಪರಿಶೀಲಿಸಿದರು. ನಂತರ ಕಟ್ಲಟ್ಕೂರು ಗ್ರಾಮದಲ್ಲಿರುವ ನೀರು ನಿಲ್ಲುವ ಸ್ಥಳಗಳನ್ನು ವೀಕ್ಷಿಸಿ, ನೀರು ನಿಲ್ಲುವ ಕಡೆ ಯಾವ ರೀತಿ ಚರಂಡಿ, ಇಂಗು ಗುಂಡಿಗಳನ್ನು ನಿರ್ಮಾಣ ಮಾಡಬೇಕು ಎಂದು ಸೂಚಿಸಿದರು.

ನಂತರ ನರೇಗಾ ಯೋಜನೆಯಡಿ ಅನುಷ್ಠಾನಗೊಂಡ ಸಂಜೀವಿನಿ ಶೆಡ್ ನಿರ್ಮಾಣ ಕಾಮಗಾರಿ ಪರಿಶೀಲಿಸಿ, ಪ್ರತಿಯೊಂದು ಕಾಮಗಾರಿಯನ್ನು ಉತ್ತಮವಾಗಿ ನಿರ್ಮಾಣ ಮಾಡಲು ಸಂಬಂಧಿಸಿದ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಸೂಚನೆ ನೀಡಿದರು.

'ಬಸವ ಪುರಾಣ'ದಲ್ಲಿ ಪಾಲ್ಗೊಳ್ಳಲು ಮುಸ್ಲಿಮರಿಗೆ ಆಹ್ವಾನ

ಗದಗ, ನ.24– ಹಾಲಕೆರೆ ಅನ್ನದಾನೇಶ್ವರ ಮಠದಲ್ಲಿ ಒಂದು ತಿಂಗಳ ಕಾಲ ನಡೆಯುವ 'ಬಸವ ಪುರಾಣ' ಪ್ರವಚನ ಹಾಗೂ ಇತರೆ ಧಾರ್ಮಿಕ ವಿಧಿ ವಿಧಾನಗಳಲ್ಲಿ ಪಾಲ್ಗೊಳ್ಳುವಂತೆ ಮುಸ್ಲಿಮರಿಗೆ ಆಹ್ವಾನ ನೀಡಲಾಗಿದೆ.

ಪಟ್ಟಣದ ಜಾಮೀಯಾ ಮಸೀದಿಯಲ್ಲಿ ಹಾಲಕೆರೆ ಅನ್ನದಾನೇಶ್ವರ ಮಠ ಗಜೇಂದ್ರಗಡ–ಹಾಲಕೆರೆ ವತಿಯಿಂದ ಆಯೋಜಿಸಿರುವ ಬಸವ ಪುರಾಣ ಅಂಗವಾಗಿ ಜರುಗಿದ ಸಭೆಯಲ್ಲಿ ಹಾಲಕೆರೆಯ ಮುಪ್ಪಿನ ಬಸವಲಿಂಗ ಸ್ವಾಮೀಜಿ ಮುಸ್ಲಿಮರಿಗೆ ಆಹ್ವಾನ ನೀಡಿದರು. ಸಮಾಜದಲ್ಲಿ ಶಾಂತಿ ಮತ್ತು ಸೌಹಾರ್ದತೆ ಮೂಡಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ಬ್ರಿಟಿಷರು ಜಾತಿ ಮತ್ತು ಧರ್ಮದ ಹೆಸರಿನಲ್ಲಿ ಜನರನ್ನು ವಿಭಜಿಸಿದರು, ಇದೀಗ ಮಠವು ಇಂತಹ ಕಾರ್ಯಕ್ರಮಗಳ ಮೂಲಕ ವಿಭಜನೆ ಗೊಂಡ ಜನರನ್ನು ಒಗ್ಗೂಡಿಸಲು ಬಯಸಿದೆ. ಟಕ್ಕೇದ ದರ್ಗಾದ ಸೈಯದ್ ನುಜಾಮುದ್ದೀನ ಶಾ ಮಕಾನದಾರ ಮಾತನಾಡಿ, ಹಾಲಕರೆಯ ಅಭಿನವ ಅನ್ನದಾನ ಸ್ವಾಮೀಜಿಗಳು ಪಟ್ಟಣದ ಟಕ್ಕೇದ ದರ್ಗಾದ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಸಮ ಸಮಾಜದ ಆಶಯ ಹಾಗೂ ಶಿಕ್ಷಣ ಮಹತ್ವ ಸಾರಿದ್ದರು. ಮಠದ ಕೆಲ ಕಾರ್ಯಕ್ರಮಗಳಿಗೂ ಸಹ ಟಕ್ಕೇದ ದರ್ಗಾದ ಪೂಜ್ಯರು ಸಹ ತೆರಳಿದ್ದರೆಂದು ಸ್ಮರಿಸಿದರು.

ನಾವೆಲ್ಲರೂ ಭಾರತೀಯರು, ಆದರೆ ಧರ್ಮಾಂಧರು ಯಾವಾಗಲೂ ನಮ್ಮನ್ನು ವಿಭಜಿಸಲು ಪ್ರಯತ್ನಿಸುತ್ತಾರೆ. ಈ ಅವರ ಪ್ರಯತ್ನಗಳನ್ನು ನಾವು ಒಗ್ಗಟ್ಟಿನಿಂದ ವಿಫಲಗೊಳ್ಳುವಂತೆ ಮಾಡಬೇಕು. ಗಜೇಂದ್ರಗಡ ವೀರ ಶೈವ–ಲಿಂಗಾಯತ ಸಂಘದ ಅಧ್ಯಕ್ಷ ಸಿದ್ದಪ್ಪ ಬಂಡಿ ಮಾತನಾಡಿ, 10 ಸಾವಿರ ಜನರಿಗೆ ಆಸನ ವ್ಯವಸ್ಥೆ ಮಾಡಲಾಗಿದ್ದು, ಒಂದು ತಿಂಗಳ ಕಾಲ ನಡೆಯುವ ಎಲ್ಲರಿಗೂ ಪ್ರಸಾದ ವಿತರಿಸಲಾಗುವುದು. ಅರುಣ್ ಕುಲಕರ್ಣಿ, ಚಿದಂಬರ ಮತ್ತು ಮಠದ ಇತರ ಭಕ್ತರು ಮಾತನಾಡಿ, ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಮುಸ್ಲಿಮರು ಒಪ್ಪಿಗೆ ನೀಡಿದ್ದಾರೆಂದು ಹೇಳಿದರು.

ಪಂಡಿತ ಪುಟ್ಟರಾಜ ಗವಾಯಿ–ತುಲಾಭಾರ–ಸ್ವರ ನಮನ, ಸಂಗೀತದಿಂದ ಶಾಂತಿ–ನೆಮ್ಮದಿ ಪ್ರಾಪ್ತಿ: ಶಾಸಕ ಅಲ್ಲಮಪ್ರಭು ಪಾಟೀಲ್

ಕಲಬುರಗಿ, ನ.24– ಸಂಗೀತದಿಂದ ಮಾನಸಿಕ ನೆಮ್ಮದಿ ಮತ್ತು ಶಾಂತಿ ಲಭ್ಯವಾಗುತ್ತದೆ ಎಂದು ಶಾಸಕ ಅಲ್ಲಮಪ್ರಭು ಪಾಟೀಲ್ ಹೇಳಿದರು. ಕಲ್ಬುರ್ಗಿಯ ಕನ್ನಡ ಭವನದಲ್ಲಿ ನವಂಬರ್ 23ರಂದು ಕಲ್ಬುರ್ಗಿಯ ಹಿರಿಯ ಮತ್ತು ಕಿರಿಯ ಕಲಾವಿದರ ಸಹಯೋಗದಲ್ಲಿ ನಡೆದ ಪಂಡಿತ ಪುಟ್ಟರಾಜ ಗವಾಯಿಗಳವರ ಹದಿನಾಲ್ಕನೇ ಪುಣ್ಯಸ್ಮರಣೆ, ಗದಗ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿ ಪೂಜ್ಯ ಡಾ. ಕಲ್ಲಯ್ಯ ಅಜ್ಜನವರ ತುಲಾಭಾರ ಮತ್ತು ಸ್ವರ ನಮನ ಸಂಗೀತ ಕಾರ್ಯಕ್ರಮವನ್ನು ದೀಪ ಬೆಳಗಿಸುವ ಘಟನೆ ಮಾಡಿ ಮಾತನಾಡಿ ಗದಗ ವೀರೇಶ್ವರ ಪುಣ್ಯಾಶ್ರಮವು ಅಂತರ ಮತ್ತು ವಿಕಲಚೇತನರಿಗೆ ಸಂಗೀತ ಶಿಕ್ಷಣ ನೀಡಿ ಅವರ ಬಾಳು ಹಸನು ಮಾಡಿದೆ. ಪಂಡಿತ ಪುಟ್ಟರಾಜ ಗವಾಯಿಗಳವರ ಸೇವೆ ಸಂಗೀತ ಕ್ಷೇತ್ರಕ್ಕೆ ಅನನ್ಯವಾಗಿದ್ದು ಕಲ್ಬುರ್ಗಿಯಲ್ಲೂ ಅವರ ಶಿಷ್ಯಂದಿರ ಕೊಡುಗೆ ಅಪಾರ ವಾಗಿದ್ದು ಸಂಗೀತ ಕ್ಷೇತ್ರದ ಬೆಳವಣಿಗೆಗೆ ಕಾರಣರಾಗಿದ್ದಾರೆ ಸಂಗೀತದಿಂದ ಮಾತ್ರ ಶಾಂತಿ ಸಮಾಧಾನ ಹೊರತು ಹಣ ಸಿರಿತನದಿಂದ ಸಿಗದು ಎಂದು ಅಲ್ಲಮಪ್ರಭು ಪಾಟೀಲ್ ಹೇಳಿದರು.



ಪಂಡಿತ ಪುಟ್ಟರಾಜ ಗವಾಯಿಗಳಿಂದಾಗಿ ಕಲಬುರಗಿಯೂ ಸಂಗೀತ ಕ್ಷೇತ್ರದಲ್ಲಿ ಹೆಸರನ್ನು ಪಡೆದು ರಾಜ್ಯದ ಗಮನ ಸೇವಂತಾಗಿದೆ. ಶಾಲಾ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಸಂಗೀತ ಶಿಕ್ಷಕರ ನೇಮಕಾತಿ ಮಾಡುವುದರ ಮೂಲಕ ಸಂಗೀತ ಶಿಕ್ಷಣ ಪಡೆದವರಿಗೆ ಅವಕಾಶ ಕಲ್ಪಿಸುವುದು ಅತ್ಯಂತ ಅವಶ್ಯಕ ಎಂದು ಶ್ರೀಶೈಲ ಮತ್ತು ಲಫಲ ಮಠದ ಜಗದ್ಗುರು ಶ್ರೀ ಸಾರಂಗಧರೇಶ್ವರ ದೇಶಿಕೇಂದ್ರ ಸ್ವಾಮೀಜಿಯವರು ಹೇಳಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿಗಳಾದ ಬಸವರಾಜ್ ದೇಶಮುಖ ಮಾತನಾಡಿ ಪಂಡಿತ ಪುಟ್ಟರಾಜ ಗವಾಯಿಗಳವರ ಸ

ಮುಸ್ಲಿಮರ ಪರವಾಗಿ ಎಷ್ಟೇ ಕೆಲಸ ಮಾಡಿದ್ರೂ ನಮಗೆ ಮತ ಹಾಕಲ್ಲ

ಹಿಂದೂಗಳ ಮತಬ್ಯಾಂಕ್ ಸೃಷ್ಟಿ ಅಗತ್ಯ ಎಂದು ಈ ಚುನಾವಣೆ ತೋರಿಸಿಕೊಟ್ಟಿದೆ: ಸಿ.ಟಿ.ರವಿ

ಕಲಬುರಗಿ, ನ. 24: ನಾವು ಮುಸ್ಲಿಮರ ಪರವಾಗಿ ಎಷ್ಟೇ ಕೆಲಸ ಮಾಡಿದರೂ ಅವರು ನಮಗೆ ಮತ ಹಾಕಲ್ಲ. ಹಿಂದೂಗಳ ಕುರಿತು ಅವರ ಮನದಲ್ಲಿ ಕಾಂಗ್ರೆಸ್ಸಿನವರು ವಿಷ ತುಂಬಿದ್ದಾರೆ. ಆದ್ದರಿಂದ ನಾವು ಅವರನ್ನ ಓಲೈಕೆ ಮಾಡಲು ಹೋಗುವ ಬದಲು ನಮ್ಮದೇ ಹಿಂದೂಗಳ ಮತಬ್ಯಾಂಕ್ ಸೃಷ್ಟಿ ಅಗತ್ಯವೆಂದು ಮಹಾರಾಷ್ಟ್ರದ ವಿಧಾನಸಭಾ ಚುನಾವಣೆಯಲ್ಲಿ ತೋರಿಸಿಕೊಟ್ಟಿದ್ದೇವೆ. ಇದು ದೇಶದ ತುಮಬೆಲ್ಲ ನಡೆಯಬೇಕಿದೆ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ಹೇಳಿದರು.

ಸುದ್ದಿಗಾರರೊಂದಿಗೆ, ಚನ್ನಪಟ್ಟಣದಲ್ಲಿ ಮುಸ್ಲಿಂ ಮತಗಳ ಸಂಖ್ಯೆ ಜಾಸ್ತಿ ಇದೆ. ಹಾಗಾಗಿ ಯೋಗೇಶ್ವರ್‌ಗೆ ಮುನ್ನಡೆ ಇರಬೇಕು. ನಾವು ಎಷ್ಟೇ ಅವರ ಪರ ಕೆಲಸ ಮಾಡಿದ್ರೂ ಮುಸ್ಲಿಮರು ನಮಗೆ ಮತ ಹಾಕಲ್ಲ. ಶಿಗ್ಗಾಂವಿ ನಗರದಲ್ಲೂ ಮುಸ್ಲಿಂ ಮತಗಳು ಹೆಚ್ಚಾಗಿದೆ. ಹಾಗಾಗಿಯೇ ಅವರು ಮೇಲಿಂದ ಮೇಲೆ ಮುಸ್ಲಿಮರಿಗೆ ಟಿಕೆಟ್ ನೀಡಿ ಎಂದು ಕೇಳುತ್ತಿದ್ದರು. ಆದರೆ, ನಾವು ಮುಸ್ಲಿಮರಿಗೆ ಓಲೈಕೆ ನಾವು ಮಾಡಲ್ಲ. ಎಲ್ಲರೂ ಒಂದು ಎಂದು ಭಾವಿಸುತ್ತೇವೆ. ಹಾಗಾಗಿ ಅವರು ನಮಗೆ ಮತ ಹಾಕಲ್ಲ. ತೀರ್ಪು ಏನೇ ಬಂದರೂ ಕ್ರೀಡಾ ಮನೋಭಾವದಿಂದ ಸ್ವೀಕರಿಸುತ್ತೇವೆ. ಕಾಂಗ್ರೆಸ್ ಮೂರು ಉಪ ಚುನಾವಣೆ ಗೆದ್ದು ಜನಾದೇಶ ಅಂತಿದ್ದಾರೆ. ಅವರು ಗೆಲ್ಲದಿದ್ದರೆ ಇವಿಎಂ ದೋಷ ಅಂತಾ ಹೇಳ್ತಾರೆ. ಆದರೆ ಪ್ರಯತ್ನ ನಾವು ಪಟ್ಟಿದ್ದೇವೆ ತೀರ್ಪು ಜನರು ಕೊಡ್ತಾರೆ ಎಂದರು.

ಮಹಾರಾಷ್ಟ್ರದಲ್ಲಿ ಕರ್ನಾಟಕದಿಂದ ನಾನು ಸೇರಿ ಹಲವು ಜನರು ಕೆಲಸ ಮಾಡಿದ್ದೇವೆ. ಪಶ್ಚಿಮ ಮಹಾರಾಷ್ಟ್ರದ 58 ಕ್ಷೇತ್ರದಲ್ಲಿ ಓಡಾಟ ನಡೆಸಿದ್ದೇನೆ. ಎನ್‌ಡಿಎ 233 ಕ್ಷೇತ್ರಗಳಲ್ಲಿ ಅಭೂತಪೂರ್ವ ಗೆಲುವನ್ನು ದಾಖಲಿಸಿದೆ. ಇದೇ ಅಂತಿಮ ಅಲ್ಲ, ಜಾರ್ಖಂಡ್‌ನಲ್ಲಿ ನಮ್ಮ ನೀರಿಕ್ಷೆಯಷ್ಟು ಮುನ್ನಡೆ ಸಿಕ್ಕಿಲ್ಲ. ಆದರೂ ಮುಂಬರುವ ದಿನಗಳಲ್ಲಿ ಜಾರ್ಖಂಡ್ ಕೂಡ ಗೆಲ್ಲುವ ಗುರಿ ನಮ್ಮದಾಗಿದೆ.ಶಿಗ್ಗಾವಿ ಫಲಿತಾಂಶ ಅನಿರೀಕ್ಷಿತ; ಶಿಗ್ಗಾವಿ ಉಪಚುನಾವಣೆಯ ಫಲಿತಾಂಶ ಅನಿರೀಕ್ಷಿತ. ಅದನ್ನು ನಾವು ಒಪ್ಪುವುದಿಲ್ಲ. ಮುಸ್ಲಿಮರು ಜಾಸ್ತಿಯಿರುವ ಕಡೆ ಮತ ಬಂದಿರಬಹುದು. ಆದರೆ ಜನರ ತೀರ್ಪನ್ನು ನಾವು ಸ್ವಾಗತ ಮಾಡುತ್ತೇವೆ. ಕಾಂಗ್ರೆಸ್ ರೀತಿ ಇವಿಎಂ ಮೇಲೆ ಹಾಕುವುದಿಲ್ಲ. ಜನರ ತೀರ್ಪನ್ನು ಕ್ರೀಡಾ ಮನೋಭಾವದ ರೀತಿ ಸ್ವಾಗತ ಮಾಡುತ್ತೇವೆ. ರಾಜ್ಯದಲ್ಲಿ ಆಡಳಿತ ವಿರೋಧಿ ಅಲೆಯಿತ್ತು. ಅದನ್ನು ನಾವು ಜನರಿಗೆ ಸರಿಯಾಗಿ ತಲುಪಿಸಬೇಕಿತ್ತು. ಕಾಂಗ್ರೆ ಆಡಳಿತ ಪಕ್ಷ ಇರುವುದರಿಂದ ಸಹಜವಾಗಿಯೇ ಮೇಲುಗೈ ಇರುತ್ತದೆ. ಸ್ವಾಭಾವಿಕವಾಗಿ ಅದು ಆಡಳಿತ ಪಕ್ಷಕ್ಕೆ ಸಹಾಯ ಆಗುತ್ತದೆ. ಈ ಫಲಿತಾಂಶ ಭ್ರಷ್ಟಾಚಾರ ಮಾಡಲು ನೀಡಿದ ಮತವೆಂದು ಕಾಂಗ್ರೆಸ್ ಭಾವಿಸಬಾರದು. ರಾಜ್ಯದ ಫಲಿತಾಂಶವನ್ನು ಚಿಂತನೆ ನಡೆಸಬೇಕಿದೆ. ಆತ್ಮಚಿಂತನೆ ಮಾಡಬೇಕಾದ ಅನಿವಾರ್ಯತೆಯಿದೆ. ಯೋಗೇಶ್ವರ್– ಕಾಂಗ್ರೆಸ್ ಕಾಂಬಿನೇಷನ್ ವೀಕ್ ಇರಲಿಲ್ಲ. ಅದು ಸ್ಟ್ರಾಂಗ್ ಕಾಂಬಿನೇಷನ್ ಇತ್ತು. ಆದರೂ ನಮಗೆ ಗೆಲ್ಲುವ ವಾತಾವರಣವಿತ್ತು. ಮೈತ್ರಿ ಕಾರಣಕ್ಕೆ ಸೋಲಾಗಿದೆ ಎಂದು ನಾನು ಹೇಳುವದಿಲ್ಲ ಎಂದರು.

ಎಲ್ಲಿ ಹೇಳಬೇಕೋ ಅಲ್ಲಿ ಹೇಳುತ್ತೇನೆ

ವಕ್ಫ್ ಎನ್ನುವ ಕರಾಳ ಕಾಯ್ದೆಯ ವಿರುದ್ಧ ಹೊರಾಟ ಮುಂದುವರೆಯುತ್ತದೆ. ಇನ್ನಾದರೂ ಬಣ ರಾಜಕೀಯ ಶಮನ ಮಾಡಬೇಕು. ಈ ಕುರಿತು ನಾನು ಎಲ್ಲಿ ಮಾತನಾಡಬೇಕು ಅಲ್ಲಿ ಮಾತನಾಡುತ್ತೇನೆ. ನಮಗೂ ಸಾಮರ್ಥ್ಯ ದೌರ್ಬಲ್ಯ ಎರಡೂ ಇದೆ. ಎಲ್ಲರ ಹತ್ತಿರವಿರುವ ಸಾಮರ್ಥ್ಯ ಬಳಸಿಕೊಳ್ಳಬೇಕು. ನಾಯಕತ್ವದ ಬದಲಾವಣೆ ಬಗ್ಗೆ ನಾನು ಮಾತನಾಡುವುದಿಲ್ಲ. ಎಲ್ಲಿ ಏನು ಹೇಳಬೇಕು ಅಲ್ಲಿ ಹೇಳುತ್ತೇನೆ. ಮಹಾರಾಷ್ಟ್ರದಲ್ಲಿ 233 ಸ್ಥಾನದಲ್ಲಿನ ಗೆಲುವು ಅಲ್ಲಿನ ರೂಟ್ ಮಟ್ಟದ ಕಾರ್ಯಕರ್ತರ ಗೆಲುವು. ಅವರೆಲ್ಲರ ಪರಿಶ್ರಮ ನಮಗೆ ಗೆಲುವು ದೊರಕಿದೆ ಎಂದ ಅವರು, ಗ್ಯಾರೆಂಟಿಯನ್ನು ನಾವೇ ಘೋಷಣೆ ಮಾಡಿದ್ದೆವು. ಮಂತಾಧರು ವೋಟ್ ಜಿಹಾದ್‌ಗೆ ಕರೆ ಕೊಟ್ಟಿದ್ದರು. ನಾವು ಅದಕ್ಕೆ ಪ್ರತಿತಂತ್ರ ರೂಪಿಸಿದ್ದೆವು ಎಂದು ಸಿ.ಟಿ.ರವಿ ಹೇಳಿದರು.



ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಮಾಧ್ಯಮಗಳೊಂದಿಗೆ ಮಾತನಾಡಿದರು.

ಬಸವನಗುಡಿಯ ಕಡ್ಲೆಕಾಯಿ ಪರಿಷೆ ಬೆಂಗಳೂರಿನಲ್ಲಿ ಭಾನುವಾರ ನೆರೆದಿದ್ದವರನ್ನು ಆಕರ್ಷಿಸಿತು.

ರಾಜ್ಯಪಾಲ ವಿಜಯಶಂಕರ ಭರವಸೆ

ದೇಶಾದ್ಯಂತ ಬಸವ ಜಯಂತಿ ಆಚರಣೆ: ಪ್ರಧಾನಿಗೆ ಪತ್ರ

ಬಸವಕಲ್ಯಾಣದಲ್ಲಿ ಆರಂಭಗೊಂಡ 45ನೇ ಶರಣ ಕಮ್ಮಟ ಹಾಗೂ ಅನುಭವ ಮಂಟಪ ಉತ್ಸವವನ್ನು ಮೇಘಾಲಯ ರಾಜ್ಯಪಾಲ ಸಿ.ಎಚ್. ವಿಜಯಶಂಕರ ಉದ್ಘಾಟಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಮುಂತಾದವರಿದ್ದರು.

ಬಸವಕಲ್ಯಾಣ, ನ.24– ದೇಶದಾದ್ಯಂತ ಬಸವ ಜಯಂತಿ ಆಚರಿಸುವ ಕುರಿತು ಪ್ರಧಾನ ಮಂತ್ರಿಯವರಿಗೆ ಪತ್ರ ಬರೆಯುವೆ. ಬಸವಣ್ಣನವರ, ಬಸವ ಸಂಸ್ಕೃತಿ ಬಗ್ಗೆ ಅವರಿಗೆ ಎಲ್ಲಾ ರೀತಿಯ ಮಾಹಿತಿ ಇದೆ. ಜನರ ಬಯಕೆಯ ಕಡೆ ಗಮನ ಕೊಡುವಂತೆ ಪ್ರಾರ್ಥಿಸುವೆ ಎಂದು ಮೇಘಾಲಯ ರಾಜ್ಯಪಾಲ ಸಿ.ಎಚ್. ವಿಜಯಶಂಕರ ಭರವಸೆ ನೀಡಿದರು.

ಇಲ್ಲಿಯ ವಿಶ್ವ ಬಸವಧರ್ಮ ಟ್ರಸ್ಟ್ ಅನುಭವ ಮಂಟಪದ ಪರಿಸರದಲ್ಲಿ 45ನೇ ಶರಣ ಕಮ್ಮಟ ಹಾಗೂ ಅನುಭವ ಮಂಟಪ ಉತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಕನ್ನಡ ನಾಡಿಗೆ, ಶಿಕ್ಷಣಕ್ಕೆ ಮಠ–ಮಾನ್ಯಗಳು ನೀಡುತ್ತಿರುವ ಕೊಡುಗೆಗೆ ಬೆಲೆ ಕಟ್ಟಲಿಕ್ಕಾಗದು. ಶಿಕ್ಷಣ, ಸಂಸ್ಕಾರ ಹಾಗೂ ದಾಸೋಹ ಪರಂಪರೆಯನ್ನು ಮಠಗಳು ನಡೆಸಿಕೊಂಡು ಬರುತ್ತಿವೆ. ಇದಕ್ಕೆ ಬಸವಾದಿ ಪ್ರಮಥರು ರೂವಾರಿಗಳಾಗಿದ್ದಾರೆ ಎಂದರು.

ಕನ್ನಡ ನಾಡಿಗೆ ಇನ್ನೊಂದು ಹೆಸರೇ ಶರಣರ ನಾಡು. ಕನ್ನಡ ನಾಡನ್ನು ಶರಣರ ನಾಡಾಗಿ ಪರಿವರ್ತಿಸಿದ, ಬಸವಕಲ್ಯಾಣ ನಾಡನ್ನು ತಪೋಭೂಮಿಯಾಗಿ ಪರಿವರ್ತಿಸಿದ, ಲೋಕ ಕಲ್ಯಾಣವೇ ನಮ್ಮ ಕಲ್ಯಾಣ ಎಂದು ಭಾವಿಸಿ ಇಡೀ ಮಾನವ ಕುಲದ ಕಲ್ಯಾಣಕ್ಕಾಗಿ ಬದುಕನ್ನು ಮೀಸಲಿಟ್ಟವರು ಬಸವಾದಿ ಶರಣರು. ಬಸವಭೂಮಿಗೆ ಬರುವಂಥವರಿಗೆ ಶುದ್ಧತೆ, ಬದ್ಧತೆ ಎರಡೂ ಅಗತ್ಯವಿರುತ್ತದೆ ಎಂದು ಹೇಳಿದರು.

ಭರತ ಭೂಮಿ ಇತಿಹಾಸದಲ್ಲಿ ಎಲ್ಲಿಯಾದರೂ ಧಾರ್ಮಿಕ, ಸಾಮಾಜಿಕ ಕ್ರಾಂತಿ, ಶೈಕ್ಷಣಿಕ ಕ್ರಾಂತಿ, ವರ್ಗ ರಹಿತ, ವರ್ಣ ರಹಿತ ಸಮಾಜ ಕಟ್ಟಿರುವುದನ್ನು ಕಾಣಬೇಕಾದರೆ ಶರಣರ ನಾಡು ಬಸವಕಲ್ಯಾಣಕ್ಕೆ ಬರಬೇಕು. ಶರಣರ ಒಂದೊಂದು ನುಡಿ ಮುತ್ತುಗಳಿಗೆ ಬೆಲೆ ಕಟ್ಟಲು ಸಾಧ್ಯವಿಲ್ಲ ಎಂದರು.

ಶಿಕ್ಷಣದಲ್ಲಿ ಪೈಪೋಟಿ ನೀಡಲು ವಸತಿ ಶಾಲೆ ವಿದ್ಯಾರ್ಥಿಗಳಿಗೆ ದುರುಗೇಶ ಕರೆ

ರಾಯಚೂರು, ನ.24– ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ವಿವಿಧ ವಸತಿ ಶಾಲೆಗಳಿಗೆ ರಾಯಚೂರು ತಾಲ್ಲೂಕು ಉಸ್ತುವಾರಿ ಅಧಿಕಾರಿ ಡಾ.ಕೆ.ಆರ್ ದುರುಗೇಶ ಅವರು ಭೇಟಿ ನೀಡಿ, ವಸತಿ ಶಾಲೆಗಳ ಮೂಲಸೌಕರ್ಯಗಳನ್ನು ಪರಿಶೀಲನೆ ನಡೆಸಿ, ನಂತರ ವಿದ್ಯಾರ್ಥಿಗಳೊಂದಿಗೆ ಚರ್ಚೆ ನಡೆಸಿದರು.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಎಪಿಜೆ ಅಬ್ದುಲ್ ಕಲಂ ವಸತಿ ಶಾಲೆಗಳಿಗೆ ಭೇಟಿ ನೀಡಿದ ರಾಯಚೂರು ತಾಲೂಕು ಉಸ್ತುವಾರಿ ಅಧಿಕಾರಿ ಹಾಗೂ ರಿಮ್ಸ್ ಆಸ್ಪತ್ರೆಯ ಮುಖ್ಯ ಆಡಳಿತಾಧಿಕಾರಿಗಳು ವಸತಿ ನಿಲಯದ ಕಟ್ಟಡ ಹಾಗೂ ಅಡುಗೆ ಕೋಣೆಯನ್ನು ಪರಿಶೀಲಿಸಿ, ವಿದ್ಯಾರ್ಥಿಗಳ ಭೋಜನದ ಗುಣಮಟ್ಟದ ಬಗ್ಗೆ ಕೇಳಿದ ಅವರು, ಆಹಾರ ಸಾಮಗ್ರಿ ಸಂಗ್ರಹಣೆ ಕೊಠಡಿ ಪರಿಶೀಲಿಸಿದರು. ಈ ವೇಳೆ ವಸತಿ ಶಾಲೆಯ ಪ್ರಾಂಶುಪಾಲರು, ವಾರ್ಡನ್ ಹಾಗೂ ಶಿಕ್ಷಕರೊಂದಿಗೆ ಸಭೆ ನಡೆಸಿ, ವಸತಿ ಶಾಲೆಯ ವಿದ್ಯಾರ್ಥಿಗಳು ಉತ್ತಮ ಅಂಕಗಳಿಸಿ ರಾಜ್ಯ ಮಟ್ಟದಲ್ಲಿ ಹೆಸರು ಮಾಡುವ ರೀತಿಯಲ್ಲಿ ಸಾಧನೆಗೆ ಪ್ರೇರಣೆ ನೀಡಬೇಕು. ಎಲ್ಲ ಶಿಕ್ಷಕರು ಮಕ್ಕಳ ವೈಯಕ್ತಿಕವಾಗಿ ಗಮನಹರಿಸಲು ಆದ್ಯತೆ ನೀಡಬೇಕು. 371(ಜೆ) ಅಡಿಯಲ್ಲಿ ಹಲವಾರು ಉದ್ಯೋಗ ಅವಕಾಶ ಹಾಗೂ ಶಿಕ್ಷಣದಲ್ಲಿ ಮೀಸಲಾತಿಯ ಅನುಕೂಲ ವಿದ್ದು, ವಿದ್ಯಾರ್ಥಿಗಳು ತಮ್ಮ ಮುಂದಿನ ಜೀವನ ರೂಪಿಸಿಕೊಳ್ಳಲು ಅನುಕೂಲ ವಾಗಿದೆ. ಈ ಬಗ್ಗೆ ವಿದ್ಯಾರ್ಥಿಗಳಿಗೆ ಶಿಕ್ಷಕರು ಮಾಹಿತಿ ಒದಿಗಿಸಿ ಸಾಧನೆಗೆ ಪ್ರೇರಣೆ ನೀಡಬೇಕು. ಅಲ್ಲದೇ ವಸತಿ ನಿಲಯದ ವಿದ್ಯಾರ್ಥಿಗಳ ಆರೋಗ್ಯದ ದೃಷ್ಟಿಯಿಂದ ವಿದ್ಯಾರ್ಥಿ ಗಳಲ್ಲಿ ಗ್ಲೂಕೋಸ್ ಅಂಶ ಕಡಿಮೆ ಯಾಗದ ರೀತಿಯಲ್ಲಿ ನೋಡಿ ಕೊಳ್ಳಬೇಕು. ವಿದ್ಯಾರ್ಥಿಗಳಲ್ಲಿ ಕೌಶಲ್ಯ ಜ್ಞಾನ ಬೆಳೆಸಲು ಹೆಚ್ಚು ಒತ್ತು ನೀಡಬೇಕು. ವಿದ್ಯಾರ್ಥಿಗಳಲ್ಲಿ ಮಾನಸಿಕ ಧೈರ್ಯ ಮತ್ತು ಆತ್ಮೀಯ ಸ್ಪಂದನೆ ಬೆಳೆಸಬೇಕು.

ವಸತಿ ನಿಲಯಗಳಲ್ಲಿ ಮಕ್ಕಳಿಗೆ ಅಗತ್ಯ ಸೌಕರ್ಯ ಹಾಗೂ ಅಭ್ಯಾಸಕ್ಕೂ ಸಮಯಾವಕಾಶ ದೊರೆಯುತ್ತದೆ. ವಿದ್ಯಾರ್ಥಿಗಳ ಸಮಯ ವ್ಯರ್ಥ ಮಾಡದೇ ಓದಿನ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು. ವಿದ್ಯಾರ್ಥಿನಿಯರು ಸರ್ಕಾರದ ಹಿಂದಿನ ಮುಖ್ಯಕಾರ್ಯದರ್ಶಿಗಳಾದ ವಂದಿತಾ ಶರ್ಮಾ,ಕೆ. ರತ್ನಪ್ರಭ ಹಾಗೂ ಶಾಲಿನಿ ರಜನೀಶ್ ಮತ್ತು ಧಾರವಾಡದ ಜಿಲ್ಲಾಧಿಕಾಯಿರಿಗಳಾದ ದಿವ್ಯ ಪ್ರಭು ಅವರಂತ ಅಧಿಕಾರಿಗಳನ್ನು ಮಾದರಿ ಯಾಗಿ ಇಟ್ಟುಕೊಂಡು ಐಎಎಸ್, ಐಪಿಎಸ್ ಓದಿ, ಪಾಸ್ ಆಗುವ ಮೂಲಕ ಉನ್ನತ ಸಾಧನೆ ಮಾಡಬೇಕು ಎಂದು ಸಲಹೆ ನೀಡಿದರು.

ಲಿಂಗಾಯತ ಸ್ವತಂತ್ರ ಧರ್ಮ ಹೋರಾಟ ನಿರಂತರವಿರಲಿ: ನ್ಯಾ.ನಾಗಮೋಹನ್ ದಾಸ್

ಬಸವಕಲ್ಯಾಣದಲ್ಲಿ 45ನೇ ಶರಣ ಕಮ್ಮಟ ಮತ್ತು ಅನುಭವ ಮಂಟಪ ಉತ್ಸವ ನಿಮಿತ್ಯ ನಡೆದ 'ಲಿಂಗಾಯತ ಹೋರಾಟ ; ಮುಂದೇನು?' ಎಂಬ ವಿಷಯದ ಗೋಷ್ಠಿಯಲ್ಲಿ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ನಾಗಮೋಹನ್ ದಾಸ್ ಮಾತನಾಡಿದರು

ಬಸವಕಲ್ಯಾಣ, ನ.24– ಧಾರ್ಮಿಕ ಅಲ್ಪಸಂಖ್ಯಾತರ ಪಟ್ಟಿಯಲ್ಲಿ ಲಿಂಗಾಯತ ಧರ್ಮ ಒಳಗೊಂಡು ಅದಕ್ಕೆ ಸಾಂವಿಧಾನಿಕ ಮಾನ್ಯತೆಗಾಗಿ ನಡೆಯುತ್ತಿರುವ ಹೋರಾಟ ನಿರಂತರವಾಗಿ ಸಾಗಬೇಕು ಎಂದು ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ನಾಗಮೋಹನ್ ದಾಸ್ ಹೇಳಿದರು.

ನಗರದಲ್ಲಿ ನಡೆದ 45ನೇ ಶರಣ ಕಮ್ಮಟ ಮತ್ತು ಅನುಭವ ಮಂಟಪ ಉತ್ಸವ ನಿಮಿತ್ಯ ನಡೆದ ಲಿಂಗಾಯತ ಹೋರಾಟ : ಮುಂದೇನು? ಎಂಬ ವಿಷಯ ಕುರಿತ ಗಓಷ್ಠಿಯಲ್ಲಿ ಮಾತನಾಡಿದರು.

ನಾಂದೇಡ್‌ನ ಆನಂದ ಕರ್ಣೆ ಮಾತನಾಡಿ, ಲಿಂಗಾಯತ ಧರ್ಮಾಚರಣೆಗಳು ನಿತ್ಯ ಬದುಕಿನಲ್ಲಿ ಅಳವಡಿಸಿಕೊಂಡರೆ ಅವೆಲ್ಲವು ಲಿಂಗಾಯತ ಧರ್ಮ ಆಂದೋಲನದ ವ್ಯಾಪ್ತಿಯ ಒಂದೊಂದು ಹೆಜ್ಜೆಗಳೆ ಆಗಿವೆ ಎಂದರು.

ಶಹಾಪುರ ಶರಣ ಸಾಹಿತಿ ವಿಶ್ವರಾಧ್ಯ ಸತ್ಯಂಪೇಟೆ ಮಾತನಾಡಿ, ಶಿವಯೋಗ ಮಂದಿರದಲ್ಲಿ ವೇದ–ಶಾಸ್ತ್ರ ಅಧ್ಯಯನ ಮಾಡುವುದನ್ನು ಬಿಟ್ಟು ಶರಣರ ವಚನ ಅಧ್ಯಯನ ಮಾಡುವ ನಿಟ್ಟಿನಲ್ಲಿ ನಮ್ಮ ಹೋರಾಟ ಸಾಗಬೇಕಿದೆ. ಹೋರಾಟದ ನೇತೃತ್ವ ವಹಿಸುವ ಎಲ್ಲ ಮಠಾಧೀಶರಿಗೆ ನಮ್ಮ ಬೆಂಬಲ ಇರುತ್ತದೆ ಎಂದರು.

ಇದೆ ವೇಳೆ ಸಮಾಜದ ವಿವಿಧ ರಂಗದಲ್ಲಿ ಗಣನೀಯ ಸೇವೆ ಸಲ್ಲಿಸಿದ ಶೀಲಾದೇವಿ ವೈಜಿನಾಥ ಭೈರಪ್ಪ, ಅಮೆರಿಕಾ, ಶೋಭಾ ದಿಲೀಪ ಬದೊಲೆ, ಸಚಿನ ಪರಬ, ಸಿ.ಎಸ್.ಶಿವಕುಮಾರ ಸ್ವಾಮಿ, ವೀರೇಂದ್ರ ಮಂಗಲಗೆ, ಸಚಿನ್ ಸಂಗಶೇಟ್ಟಿ, ಒಪ್ರದೀಒಪ್ ಬುರಾಂಡ, ಅಭಿಷೇಕ್ ಮಿಠಾರಿ ಯಶ್ ಅಂಬೋಳೆ, ಸುದರ್ಶನ ಮನೋಹರ ಭೂರೆ ಅವರಿಗೆ ಸನ್ಮಾನಿಸಲಾಯಿತು. ಉಸ್ತುರಿ ವಿರಕ್ತಮಠದ ಶ್ರೀ ಕೋರಣೇಶ್ವರ ಮಹಾಸ್ವಾಮಿಗಳು, ಶ್ರೀ ಜಗದ್ಗುರು ಸಿದ್ಧರಾಮ ಮಹಾಸ್ವಾಮಿಗಳು, ಶ್ರೀ ಶಿವಕುಮಾರ ಸ್ವಾಮಿಗಳು, ಶ್ರೀ ಶಿವಯೋಗೇಶ್ವರ ಮಹಾಸ್ವಾಮಿಗಳು, ಶ್ರೀ ಪ್ರಭುದೇವ ಮಹಾಸ್ವಾಮಿಗಳು, ಶ್ರೀ ಬಸವಪ್ರಭು ಸ್ವಾಮಿಗಳು, ಶ್ರೀ ಪಂಚಾಕ್ಷರಿ ಸ್ವಾಮಿಗಳು ಉಪಸ್ಥಿತರಿದ್ದರು.

ಶಿವಾನಂದ ಮೆಟ್ಯಾಲ್ ಬೈಲಹೊಂಗಲ್ ಬಸವಗುರುಪೂಜೆ ನೆರವೇರಿಸಿದರು. ಮಲ್ಲಿಕಾರ್ಜುನ ಗುಂಗೆ, ಜಗನಾಥ ಹಲಂಗೆ, ಶಂಕರ ಗುಡಸ್, ಎಸ್. ಎಸ್.ದಿವಾಕರ, ಆರ್.ಜಿ.ಶೆಟಗಾರ, ಅಮೃತಪ್ಪ ಪಾಟೀಲ್ ಗುಡ್ಡೆವಾಡಿ, ಶಂಭುಲಿಂಗ ಕಾಮಣ್ಣ, ಡ.ಮಲ್ಲಿಕಾರ್ಜುನ ವಡ್ಡನಕೆರೆ, ಸವರಾಜ ಧೂಲಗುಂಡೆ, ಅಲ್ಲಮಪ್ರಭು ನಾವದಗೆರೆ, ಗಾದಗಿ, ರವೀಂದ್ರ ಮೀಸೆ, ಬಂಡೆಪ್ಪ ಕಂಟೆ, ಪ್ರಕಾಶ ಟೊಣ್ಣೆ, ಪ್ರಕಾಶ ಘೂಲೆ ಡಾ.ಧನರಾಜ ರಾಗಾ ಇದ್ದರು.

ಬಳ್ಳಾರಿಯಲ್ಲಿ ನಾಳೆಯಿಂದ ಚಾಗಂಟಿ ಕೋಟೇಶ್ವರ್ ರಾವ್ ಸರಣಿ ಪ್ರವಚನ ಕಾರ್ಯಕ್ರಮ– ರಾಮಕೃಷ್ಣ ರೇಣಿಗುಂಟ್ಲ

ಬಳ್ಳಾರಿ, ನ.24– ಬಳ್ಳಾರಿಯ ಆರ್ಯ ವೈಶ್ಯ ಅಸೋಸಿಯೇಷನ್ ಮತ್ತು ಶ್ರೀ ರಾಮಕೃಷ್ಣ ವಿವೇಕಾನಂದ ಕೇಂದ್ರ ಸಹಯೋಗದಲ್ಲಿ ಬ್ರಹ್ಮಶ್ರೀ ಚಾಗಂಟಿ ಕೋಟೇಶ್ವರ್ ರಾವ್ ಅವರ ಪ್ರವಚನಗಳ ಕಾರ್ಯಕ್ರಮವನ್ನು ನವಂಬರ್ 26, 27 ಮತ್ತು 28 ರಂದು ಮೂರು ದಿನಗಳ ಕಾಲ ಸಂಜೆ 5.30 ರಿಂದ ರಾತ್ರಿ 8 ಗಂಟೆಯ ವರೆಗೆ ಸಿರುಗುಪ್ಪ ರಸ್ತೆಯ ಹವಂಭಾವಿಯ ಅನೂಪ್ ಗಾರ್ಡೆನ್‌ನಲ್ಲಿ ಆಯೋ ಜಿಸಲಾಗಿದೆ ಎಂದು, ಈ ಕಾರ್ಯಕ್ರಮಕ್ಕೆ ಯಾವುದೇ ಟಿಕೆಟ್ ಇಲ್ಲದೇ, ಫ್ರೀ ಎಂಟ್ರಿ ಮಾಡಲಾಗಿದೆ ಎಂದು ಆರ್ಯ ವೈಶ್ಯ ಅಸೋಸಿಯೇಷನ್‌ನ ಕಾರ್ಯದರ್ಶಿ, ಅಭಯ ಫೌಂಡೇಷನ್‌ನ ಅದ್ಯಕ್ಷರಾದ ರಾಮಕೃಷ್ಣ ರೇಣಿಗುಂಟ್ಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಕಾರ್ಯಕ್ರಮಕ್ಕೆ ಬಳ್ಳಾರಿ ಜಿಲ್ಲೆಯ ನಾಗರೀಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕೆಂದು, ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದ್ದಾರೆ.

ಅರೆಕಾಲಿಕ ಕಾನೂನು ಸ್ವಯಂಸೇವಕರಿಗೆ ತರಬೇತಿ ಕಾರ್ಯಾಗಾರ ವಂಚಿತರಿಗೆ ಕಾನೂನಿನ ಅರಿವು ಮೂಡಿಸಲು ಕರೆ

ಬಳ್ಳಾರಿ, ನ.24– ಸಮಾಜದಲ್ಲಿ ವಿವಿಧ ರೀತಿ ವಂಚಿತರಾದವರಿಗೆ ಕಾನೂನಿನ ಅರಿವು ಮೂಡಿಸುವುದರ ಜೊತೆಗೆ ನ್ಯಾಯ ಒದಗಿಸುವ ಸಮಾಜಮುಖಿ ಕೆಲಸದಲ್ಲಿ ಅರೆಕಾಲಿಕ ಸ್ವಯಂ ಸೇವಕರು ತೊಡಗಿಸಿಕೊಳ್ಳಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯ

ಹವಾಮಾನ ಹಣಕಾಸು ಪ್ಯಾಕೇಜ್ ತಿರಸ್ಕರಿಸಿದ ಭಾರತ

ಬಾಕು,ನ.24: ಭೂಗೋಳದ ದಕ್ಷಿಣದ ದೇಶಗಳಿಗಾಗಿ ವಿಶ್ವಸಂಸ್ಥೆಯ ಹವಾಮಾನ ಸಮಾವೇಶವು ಘೋಷಿಸಿರುವ ವಾರ್ಷಿಕ ಅಂದಾಜು 25 ಸಾವಿರ ಕೋಟಿ (300 ಶತಕೋಟಿ ಡಾಲರ್) ಮೊತ್ತದ 'ಹವಾಮಾನ ಹಣಕಾಸು ಪ್ಯಾಕೇಜ್ ಅನ್ನು ಭಾರತ ಸಾರಾಸಗಟಾಗಿ ತಿರಸ್ಕರಿಸಿದೆ.

'ಬಡದೇಶಗಳಿಗೆ ಅತ್ಯಲ್ಪ ಮೊತ್ತದ ಪ್ಯಾಕೇಜ್ ನೀಡಲಾಗಿದೆ. ಈ ಕುರಿತು ಆಕ್ಷೇಪ ವ್ಯಕ್ತಪಡಿಸಲು ಅವಕಾಶ ನೀಡದಯೇ ಹವಾಮಾನ ಸಮಾವೇಶದ (ಸಿಒಪಿ29) ಅಧ್ಯಕ್ಷ ವಹಿಸಿರುವ ರಾಷ್ಟ್ರ ಹಾಗೂ ವಿಶ್ವಸಂಸ್ಥೆ ಈ ಪ್ಯಾಕೇಜ್ ಘೋಷಿಸಿದೆ' ಎಂದು ಭಾರತ ಹೇಳಿದೆ. ಹವಾಮಾನ ಸಮಾವೇಶದ ಅಂಗವಾಗಿ ನಡೆದ ಸರ್ವಸಾಧಾರಣ ಸಭೆಯಲ್ಲಿ,

ಭಾರತದ ಆರ್ಥಿಕ ವ್ಯವಹಾರಗಳ ಇಲಾಖೆ ಸಲಹೆಗಾರ್ತಿ ಚಾಂದಿನಿ ರೈನಾ ಅವರು ಈ ಮಾತು ಹೇಳಿದ್ದಾರೆ. 'ಈ ಪ್ಯಾಕೇಜ್ ಅನ್ಯಾಯದಿಂದ ಕೂಡಿದೆ ಹಾಗೂ ತಮಗೆ ಅನುಕೂಲವಾಗುವಂತೆ ರೂಪಿಸಲಾಗಿದೆ. ವ್ಯಾಕೇಜ್ ಅಂಗೀಕರಿಸುವುದಕ್ಕೂ ಮೊದಲು ಈ ವಿಷಯವಾಗಿ ಮಾತನಾಡಬೇಕೆಂಬ ಭಾರತದ ಮನವಿಯನ್ನು ನಿರ್ಲಕ್ಷಿಸಲಾಗಿದೆ. ಈ ಘಟನೆಯಿಂದ ತೀವ ನಿರಾಸೆಯಾಗಿದೆ' ಎಂದು ಹೇಳಿದ್ದಾರೆ. ಭಾರತದ ವಾದವನ್ನು ಬೆಂಬಲಿಸಿ ಮಾತನಾಡಿದ ನೈಜೀರಿಯಾ ಪ್ರತಿನಿಧಿ, '300 ಶತಕೋಟಿ ಡಾಲರ್ ಪ್ಯಾಕೇಜ್ ಘೋಷಿಸಿರುವುದು ತಮಾಷೆಯೇ ಸರಿ' ಎಂದಿದ್ದಾರೆ. ಮಲಾವಿ ಮತ್ತು ಬೊಲಿವಿಯಾ ದೇಶಗಳು ಕೂಡ ಈ ವಿಚಾರವಾಗಿ ಭಾರತವನ್ನು ಬೆಂಬಲಿಸಿವೆ. ಹವಾಮಾನ ಬದಲಾವಣೆಯಿಂದಾಗುವ ಪರಿಣಾಮಗಳನ್ನು ಎದುರಿಸುವುದಕ್ಕಾಗಿ 1.3 ಟ್ರಿಲಿಯನ್ ಡಾಲರ್ ನೀಡಬೇಕು ಎಂಬುದು ಭೌಗೋಳಿಕವಾಗಿ ದಕ್ಷಿಣದಲ್ಲಿರುವ ರಾಷ್ಟ್ರಗಳ ಬೇಡಿಕೆಯಾಗಿದೆ. ಚಾಂದಿನಿ ರೈನಾ ಭಾರತದ ಆರ್ಥಿಕ ವ್ಯವಹಾರಗಳ ಇಲಾಖೆ ಸಲಹೆಗಾರ್ತಿಅಭಿವೃದ್ಧಿ ಹೊಂದಿರುವ ರಾಷ್ಟ್ರಗಳು ತಮ್ಮ ಜವಾಬ್ದಾರಿ ವಿಭಾಯಿಸಲು ಆಸಕ್ತಿ ಹೊಂದಿಲ್ಲ ಎಂಬುದನ್ನು ಈ ವ್ಯಾಕೇಜ್.

ಭಾರತದ ಚುನಾವಣಾ ವ್ಯವಸ್ಥೆಗೆ ಎಲಾನ್ ಮಸ್ಕ್ ಶ್ಲಾಘನೆ

ಟೆಸ್ಲಾ ಸಿಇಒ ಎಲಾನ್ ಮಸ್ಕ್ ಅವರು ಶನಿವಾರ ಭಾರತೀಯ ಚುನಾವಣಾ ವ್ಯವಸ್ಥೆ ಮತ್ತು ಒಂದು ದಿನದಲ್ಲಿ ಚುನಾವಣೆಯ ಫಲಿತಾಂಶವನ್ನು ನೀಡುವ ಸಾಮರ್ಥ್ಯವನ್ನು ಶ್ಲಾಘಿಸಿದರು. ಅದೇ ಸಮಯದಲ್ಲಿ ಕ್ಯಾಲಿಫೋರ್ನಿಯಾದಲ್ಲಿ ಇನ್ನೂ ಮತದಾನದ ಫಲಿತಾಂಶ ಬಾರದ ಹಿನ್ನೆಲೆ ಯುಎಸ್ ಚುನಾವಣಾ ಪ್ರಕ್ರಿಯೆಯ ಬಗ್ಗೆ ವ್ಯಂಗ್ಯವಾಡಿದರು.

ಭಾರತವು ಒಂದೇ ದಿನದಲ್ಲಿ 640 ದಶಲಕ್ಷ ಮತಗಳನ್ನು ಎಣಿಸಿದೆ. ಕ್ಯಾಲಿಫೋರ್ನಿಯಾ ಇನ್ನೂ 18 ದಿನಗಳ ನಂತರ 15 ದಶಲಕ್ಷ ಮತಗಳನ್ನು ಎಣಿಕೆ ಮಾಡುತ್ತಿದೆ ಎಂಬ ಪೋಸ್ಟ್ಗೆ ಪ್ರತಿಕ್ರಿಯಿಸಿರುವ ಮಸ್ಕ್,ದುರಂತ ಎಂದು ಹೇಳಿದ್ದಾರೆ. ಡೊನಾಲ್ಡ್ ಟ್ರಂಪ್ ಅವರು ಅಮೆರಿಕ ಚುನಾವಣೆಯಲ್ಲಿ ವಿಜೇತರು ಮತ್ತು ಅಧ್ಯಕ್ಷರಾಗಿ ಆಯ್ಕೆಯಾದವರು ಎಂದು ಘೋಷಿಸಿ ಹಲವು ದಿನ ಕಳೆದಿವೆ.

ಆದರೆ, ಎರಡು ವಾರಗಳು ಕಳಾದರೂ

ಕ್ಯಾಲಿಫೋರ್ನಿಯಾ ಇನ್ನೂ 3,00,000 ಮತಗಳನ್ನು ಎಣಿಕೆ ಮಾಡಬೇಕಾಗಿದೆ ಎಂದು ವರದಿಗಳು ತಿಳಿಸಿವೆ. ಸುಮಾರು 39 ದಶಲಕ್ಷ ನಿವಾಸಿಗಳನ್ನು ಹೊಂದಿರುವ ಕ್ಯಾಲಿಫೋರ್ನಿಯಾ ಅಮೆರಿಕದಲ್ಲಿ ಹೆಚ್ಚು ಜನಸಂಖ್ಯೆ ಹೊಂದಿರುವ ರಾಜ್ಯವಾಗಿದೆ. ನವೆಂಬರ್ 5 ರಂದು ನಡೆದ ಮತದಾನದಲ್ಲಿ ಕನಿಷ್ಠ 16 ದಶಲಕ್ಷ ಮತದಾರರು ಭಾಗವಹಿಸಿದ್ದರು. ಆದಾಗ್ಯೂ, ಇತ್ತೀಚಿನ ವರ್ಷಗಳಲ್ಲಿ ಚುನಾವಣಾ ಫಲಿತಾಂಶಗಳನ್ನು ಲೆಕ್ಕಹಾಕಲು ಮತ್ತು ವರದಿ ಮಾಡಲು ಇದು ನಿಧಾನವಾದ ರಾಜ್ಯಗಳಲ್ಲಿ ಒಂದಾಗಿದೆ. ವಿಳಂಬವು ಪ್ರಾಥಮಿಕವಾಗಿ ಅದರ ದೊಡ್ಡ ಗಾತ್ರ ಮತ್ತು ಮೇಲ್-ಇನ್ ಮತದಾನದ ಪ್ರಾಬಲ್ಯದಿಂದಾಗಿದೆ. ಚುನಾವಣಾ ಅಧಿಕಾರಿಗಳ ಪ್ರಕಾರ, 2020ರ ಚುನಾವಣೆಯಲ್ಲಿ ನಡೆದಂತೆ ಫಲಿತಾಂಶ ಘೋಷಣೆಗೆ ವಾರಗಳು ತೆಗೆದುಕೊಳ್ಳಬಹುದು. ಕ್ಯಾಲಿಫೋರ್ನಿಯಾದ ಚುನಾವಣೆಗಳು ಹೆಚ್ಚಾಗಿ ಮೇಲ್-ಇನ್ ಮತದಾನದ ಮೇಲೆ ಅವಲಂಬಿತವಾಗಿದೆ, ಇದು ವ್ಯಕ್ತಿಗತ ಮತದಾನಕ್ಕೆ ಹೋಲಿಸಿದರೆ ಪ್ರಕ್ರಿಯೆಗೊಳಿಸಲು ಹೆಚ್ಚಿನ ಸಮಯ ಮತ್ತು ಪ್ರಯತ್ನದ ಅಗತ್ಯವಿರುತ್ತದೆ. ಪ್ರತಿಯೊಂದು ಮೇಲ್-ಇನ್ ಬ್ಯಾಲೆಟ್ ವೈಯಕ್ತಿಕ ಮೌಲ್ಯೀಕರಣ ಮತ್ತು ಪ್ರಕ್ರಿಯೆಗೆ ಒಳಗಾಗಬೇಕಾಗುತ್ತದೆ. ಈ ಪ್ರಕ್ರಿಯೆಯು ಮತದಾನ ಕೇಂದ್ರಗಳಲ್ಲಿ ಮತಪತ್ರಗಳನ್ನು ಸ್ಕ್ಯಾನ್ ಮಾಡುವುದಕ್ಕಿಂತ ಹೆಚ್ಚು ಸಮಯ ತೆಗೆದುಕೊಳ್ಳುತ್ತದೆ.

ಫಿಲಿಪ್ಪೀನ್ಸ್ ಅಧ್ಯಕ್ಷರಿಗೆ ಜೀವಬೆದರಿಕೆ ಫರ್ಡಿನಾಂಡ್ ಮಾರ್ಕೋಸ್‌ಗೆ ಬಿಗಿಭದ್ರತೆ

ಮನಿಲಾ,ನ.24: ಉಪಾಧ್ಯಕ್ಷೆ ಸಾರಾ ಡುಟರ್ಟ್ ಅವರಿಂದ ಅಧ್ಯಕ್ಷ ಫರ್ಡಿನಾಂಡ್ ಮಾರ್ಕೋಸ್ ಅವರಿಗೆ ಜೀವ ಬೆದರಿಕೆ ಕರೆಬಂದಿರುವ ಹಿನ್ನೆಲೆಯಲ್ಲಿ ಅಧ್ಯಕ್ಷರ ಭದ್ರತೆಯನ್ನು ಬಿಗಿಗೊಳಿಸಲಾಗಿದೆ ಎಂದು ಅಧ್ಯಕ್ಷ ಫರ್ಡಿನಾಂಡ್ ಮಾರ್ಕೋಸ್ ಕಚೇರಿ ಹೇಳಿಕೆ ನೀಡಿದೆ. ತನ್ನ ಹತ್ಯೆಗೆ ಪಿತೂರಿ ನಡೆದಿದ್ದು ಒಂದು ವೇಳೆ ಇದರಲ್ಲಿ ಅವರು(ಪಿತೂರಿ ಮಾಡಿದವರು) ಯಶಸ್ವಿಯಾದರೆ ಅಧ್ಯಕ್ಷರನ್ನು ಕೊಲ್ಲುವಂತೆ ತನ್ನ ಭದ್ರತಾ ತಂಡಕ್ಕೆ ಸೂಚಿಸಿರುವುದಾಗಿ ಡ್ಯುಟರ್ಟ್ ಸುದ್ದಿಗೋಷ್ಠಿಯಲ್ಲಿ ಆರೋಪಿಸಿದ್ದರು.

'ನನ್ನ ಭದ್ರತಾ ಸಿಬ್ಬಂದಿಯ ಜತೆ ಈಗಾಗಲೇ ಮಾತನಾಡಿದ್ದೇನೆ. ಒಂದು ವೇಳೆ ನನ್ನ ಹತ್ಯೆಯಾದರೆ ತಕ್ಷಣ ಫರ್ಡಿನಾಂಡೊ ಮಾರ್ಕೋಸ್, ಅವರ ಪತ್ನಿ ಲಿಝಾ ಅರನೆಟಾ ಮತ್ತು ಅಧ್ಯಕ್ಷರ ಸೋದರ ಸಂಬಂಧಿ ಮಾರ್ಟಿನ್ ರೊಮುಲ್ಕ್ಜರ್‌ರನ್ನು ಕೊಲ್ಲುವಂತೆ ತಿಳಿಸಿದ್ದೇನೆ. ಇದು ತಮಾಷೆಯಲ್ಲ' ಎಂದು ಡುಟರ್ಟ್ ಸುದ್ದಿಗೋಷ್ಠಿಯಲ್ಲಿ ಹೇಳಿದರು. ಸುದ್ದಿಗೋಷ್ಠಿಯ ಬಳಿಕ ಪ್ರತಿಕ್ರಿಯಿಸಿರುವ ಅಧ್ಯಕ್ಷರ ಭವನದ ಸಂವಹನಾ ಕಚೇರಿ 'ಈ ಸಕ್ರಿಯ ಬೆದರಿಕೆಯ ಬಗ್ಗೆ ತಕ್ಷಣ ಕ್ರಮ ಕೈಗೊಳ್ಳುವಂತೆ ಅಧ್ಯಕ್ಷರ ಭದ್ರತಾ ಕಮಾಂಡ್ ಸೂಚಿಸಲಾಗಿದೆ. ಅಧ್ಯಕ್ಷರ ಜೀವ ಬೆದರಿಕೆಯನ್ನು ಗಂಭೀರವಾಗಿ ಪರಿಗಣಿಸಲಾಗುವುದು. ಅದರಲ್ಲೂ ಈ ಪ್ರಕರಣದಲ್ಲಿ ಸಾರ್ವಜನಿಕವಾಗಿ, ಸ್ಪಷ್ಟವಾಗಿ ಬೆದರಿಕೆ ಒಡಲಾಗಿದೆ' ಎಂದಿದೆ.

ಅಧ್ಯಕ್ಷ ಮಾರ್ಕೋಸ್ ಮತ್ತು ಉಪಾಧ್ಯಕ್ಷೆ ಡುಟರ್ಟ್ ಕುಟುಂಬದ ನಡುವೆ ಇತ್ತೀಚಿನ ದಿನಗಳಲ್ಲಿ ಭಿನ್ನಾಭಿಪ್ರಾಯ



ಹೆಚ್ಚಿದೆ. ಡುಟರ್ಟ್ ವಿರುದ್ಧ ಸಂಸತ್ನಲ್ಲಿ ವಾಗ್ದಂಡನ ಕ್ರಮಕ್ಕೆ ಮಾರ್ಟಿನ್ ರೊಮುಲ್ಕ್ಜ್ ನಿರ್ಣಯ ಮಂಡಿಸಿದ್ದಾರೆ. ಡುಟರ್ಟ್ ಅವರ ತಂದೆ, ಮಾಜಿ ಅಧ್ಯಕ್ಷ ರೋಡ್ರಿಗೊ ಡುಟರ್ಟ್ ಜನವರಿಯಲ್ಲಿ ನಡೆದಿದ್ದ ಕಾರ್ಯಕ್ರಮವೊಂದರಲ್ಲಿ ಮಾರ್ಕೋಸ್ ಮಾದಕ ದ್ರವ್ಯ ವ್ಯಸನಿ ಎಂದು ಆರೋಪಿಸಿದಾಗ ಸಾರಾ ಡುಟರ್ಟ್ ವ್ಯಂಗ್ಯವಾಗಿ ನಕ್ಕಿದ್ದರು ಎಂದು ಲಿಝಾ ಅರನೆಟಾ ಅಸಮಾಧಾನ ವ್ಯಕ್ತಪಡಿಸಿದ್ದರು. ಮರುದಿನ ಸುದ್ದಿಗೋಷ್ಠಿ ನಡೆಸಿದ ಮಾರ್ಕೋಸ್ ಮಾಜಿ ಅಧ್ಯಕ್ಷರು ದೀರ್ಘಾವಧಿಯಿಂದ ಮಾದಕ ದ್ರವ್ಯ ವ್ಯಸನಿಯಾಗಿದ್ದರಿಂದ ಅನಾರೋಗ್ಯದಿಂದ ಬಳಲುತ್ತಿದ್ದಾರೆ' ಎಂದು ಹೇಳಿಕೆ ನೀಡಿದ್ದರು. ಜೂನ್‌ನಲ್ಲಿ ಶಿಕ್ಷಣ ಸಚಿವೆಯ ಸ್ಥಾನಕ್ಕೆ ಸಾರಾ ರಾಜೀನಾಮೆ ನೀಡಿದ್ದರು. ಅವರು ಅಧಿಕಾರದ ಸಂದರ್ಭದಲ್ಲಿ ದುಂದು ವೆಚ್ಚ ನಡೆಸಿದ್ದರು ಎಂಬ ಆರೋಪದ ಬಗ್ಗೆ ತನಿಖೆ ನಡೆಸುತ್ತಿದ್ದ ಸದನ ಸಮಿತಿಯ ಕಾರ್ಯದಲ್ಲಿ ಸಾರಾ ಅವರ ಭದ್ರತಾ ತಂಡದ ಮುಖ್ಯಸ್ಥ ಝುಲೈತಾ ಲೋಪನ್ನು.

ರಾಷ್ಟ್ರೀಯ ಚಿಹ್ನೆಗಳ ದುರುಪಯೋಗಕ್ಕೆ ಸೌದಿ ಸರ್ಕಾರ ಬ್ರೇಕ್

ಜೆಡ್ಡಾ,ನ.24: ಸೌದಿ ಅರೇಬಿಯಾ ಸರಕಾರ ಧಾರ್ಮಿಕ ಮತ್ತು ರಾಷ್ಟ್ರೀಯ ಚಿಹ್ನೆಗಳ ಬಳಕೆ ಕುರಿತು ಮಹತ್ವದ ನಿರ್ಧಾರ ಕೈಗೊಂಡಿದೆ. ಸೌದಿ ಅರೇಬಿಯಾವು ವೈಯಕ್ತಿಕ ಮತ್ತು ವಾಣಿಜ್ಯ ಬಳಕೆಗಾಗಿ ಧಾರ್ಮಿಕ ಮತ್ತು ರಾಷ್ಟ್ರೀಯ ಚಿಹ್ನೆಗಳನ್ನು ಬಳಸುವುದನ್ನು ನಿಷೇಧಿಸಿದೆ.

'ಕಿಂಗ್ಡಮ್ ಆಫ್ ಸೌದಿ ಅರೇಬಿಯಾ' (ಕೆಎಸ್ಎ) ಈ ಕ್ರಮವು ರಾಷ್ಟ್ರೀಯ ಚಿಹ್ನೆಗಳ ದುರುಪಯೋಗವನ್ನು ತಡೆಯುವ ಗುರಿಯನ್ನು ಹೊಂದಿದೆ ಎಂದು ವಾಣಿಜ್ಯ ಸಚಿವ ಡಾ. ಮಜಿದ್ ಅಲ್-ಕಸಾಬಿ ತಿಳಿಸಿದ್ದು, ಈ ನಿಯಮಗಳನ್ನು ಅನುಸರಿಸದಿರುವುದು ದಂಡ ಮತ್ತು ಕಾನೂನು ಕ್ರಮಕ್ಕೆ ಕಾರಣವಾಗಬಹುದು ಎಂದು ಎಚ್ಚರಿಸಿದ್ದಾರೆ.

ವಾಣಿಜ್ಯ ಸಚಿವ ಡಾ. ಮಜಿದ್ ಅಲ್ ಕಸಾಬಿ ಅವರು ಹೊರಡಿಸಿದ ನಿರ್ಧಾರವು ಈ ಲಾಂಛನಗಳ ಪಾವಿತ್ರ್ಯವನ್ನು ಕಾಪಾಡುವ ರಾಜಪ್ರಭುತ್ವದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಲಾಗಿದೆ. ಈ ಲಾಂಛನಗಳನ್ನು ಕಾಪಾಡುವುದು ಹಾಗೂ ರಕ್ಷಿಸುವುದು ನಮ್ಮೆಲ್ಲರ ಕರ್ತವ್ಯವಾಗಿದ್ದು, ದೇಶದಲ್ಲಿರುವವರು ನಿಯಮಗಳನ್ನು ಅನುಸರಿಸಬೇಕು ಎಂದು ತಿಳಿಸಿದ್ದಾರೆ.

ಅರೇಬಿಕ್ ಪತ್ರಿಕೆ ಒಕಾಮ್ ನ ವರದಿಯ ಪ್ರಕಾರ, ಮಜಿದ್ ಅಲ್-ಕಸಾಬಿ ನಿರ್ಧಾರದ ಬಗ್ಗೆ ಮಾಹಿತಿ ನೀಡುತ್ತಾ, ಧಾರ್ಮಿಕ ಮತ್ತು ರಾಷ್ಟ್ರೀಯ ಚಿಹ್ನೆಗಳ ದುರ್ಬಳಕೆಯ ಕೆಲವು ನಿರಂತರ ಉದಾಹರಣೆಗಳಿದ್ದು ಈ ಹಿನ್ನೆಲೆಯಲ್ಲಿ ನಿಯಮಗಳನ್ನು ಜಾರಿಗೊಳಿಸಬೇಕಾಯಿತು. ಇದು ದೇಶದ ಸುವ್ಯವಸ್ಥೆಯನ್ನು ಕಾವಾಡುವಲ್ಲಿ ಕೂಡ ಮಹತ್ತರ ಪಾತ್ರ ವಹಿಸುತ್ತದೆ ಎಂದು ತಿಳಿಸಿದೆ..

ಯಾವೆಲ್ಲಾ ಅಂಶಗಳ ಮೇಲೆ ನಿಷೇಧ

ಸೌದಿ ಅರೇಬಿಯಾದ ರಾಷ್ಟ್ರೀಯ ಧ್ವಜದ ಬಳಕೆಯನ್ನು ನಿಷೇಧಿಸುವ ಅಸ್ತಿತ್ವದಲ್ಲಿರುವ ಕ್ರಮಗಳ ಮೇಲೆ ನಿರ್ಬಂಧಗಳನ್ನು ಆಧರಿಸಿದೆ ಎಂದು ಸಚಿವಾಲಯ ಹೇಳಿದೆ. ಇದು ಇಸ್ಲಾಮಿಕ್ ನಂಬಿಕೆಯ ಘೋಷಣೆ ಮತ್ತು ಶಿಲುಬೆ, ಕತ್ತಿ ಮತ್ತು ತಾಳೆಮರಗಳ ಚಿಹ್ನೆಗಳನ್ನು ಒಳಗೊಂಡಿದೆ. ನಿಷೇಧವು ಸೌದಿ ನಾಯಕರ ಚಿತ್ರಗಳು ಮತ್ತು ಹೆಸರುಗಳಿಗೂ ಅನ್ವಯಿಸುತ್ತದೆ. ಮುದ್ರಿತ ವಸ್ತುಗಳು, ಸರಕುಗಳು, ಉಡುಗೊರೆಗಳು ಮತ್ತು ಪ್ರಬಾರದ ವಸ್ತುಗಳ ಮೇಲೆ ಅವುಗಳ ಬಳಕೆಯನ್ನು ಇದು ನಿಷೇಧಿಸುತ್ತದೆ.

ಈ ನಿರ್ಧಾರವು ಅಧಿಕೃತ ಗೆಜೆಟ್‌ನಲ್ಲಿ ಪ್ರಕಟವಾದ 90 ದಿನಗಳ ನಂತರ ಜಾರಿಗೆ ಬರಲಿದೆ ಎಂದು ವರದಿ ಹೇಳಿದೆ. ಇದು ವ್ಯಾವಾರಗಳಿಗೆ ಹೊಸ ನಿಯಮಗಳಿಗೆ ಹೊಂದಿಕೊಳ್ಳಲು ಮತ್ತು ಅದಕ್ಕೆ ಅನುಗುಣವಾಗಿ ತಮ್ಮ ನೀತಿಗಳನ್ನು ಬದಲಾಯಿಸಲು ಅನುವು ಮಾಡಿಕೊಡುತ್ತದೆ ಸೌದಿಯ ವಾಣಿಜ್ಯ ಸಚಿವಾಲಯವು ಈ ಹಿಂದ ಪ್ರಕಟಣೆಗಳು, ಸರಕುಗಳು ಮತ್ತು ಮಾಧ್ಯಮ ಬಿಡುಗಡೆಗಳು ಸೇರಿದಂತೆ ವಾಣಿಜ್ಯ ವಹಿವಾಟುಗಳಲ್ಲಿ ರಾಜ್ಯ ಧ್ವಜ, ರಾಜ್ಯ ಲಾಂಛನ ಮತ್ತು ನಾಯಕತ್ವ ಮತ್ತು ಅಧಿಕಾರಿಗಳ ಚಿತ್ರಗಳನ್ನು ಬಳಸುವುದನ್ನು ನಿಷೇಧಿಸಿದ್ದು.

ಪಾಕಿಸ್ತಾನದಲ್ಲಿ ಜನಾಂಗೀಯ ಹಿಂಸಾಚಾರಕ್ಕೆ 37 ಬಲಿ

ಪಾಕಿಸ್ತಾನದ ಖೈಬರ್ ಪತ್ತೊಂಕ್ಲಾ ಪ್ರಾಂತದಲ್ಲಿ ಬುಡಕಟ್ಟುಗಳ ನಡುವೆ ನಡೆದ ಘರ್ಷಣೆಯಲ್ಲಿ 37 ಮಂದಿ ಮೃತಪಟ್ಟಿದ್ದು 30ಕ್ಕೂ ಹೆಚ್ಚು ಜನರು ಗಾಯಗೊಂಡಿರುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ.

ವಾಯವ್ಯ ಪಾಕಿಸ್ತಾನದ ಖೈಬರ್ ಪಂಕ್ತಾದ ಪರಾಚಿನಾರ್ ನಗರದಲ್ಲಿ ಹಲವು ವಾಹನಗಳ ಮೇಲೆ ಗುಂಡಿನ ದಾಳಿ ನಡೆದಿದ್ದು 47 ಮಂದಿ ಸಾವನ್ನಪ್ಪಿದ್ದರು.

ಬಳಿಕ ಕುರ್ರಮ್ ಜಿಲ್ಲೆಯಲ್ಲಿ ಅಲಿಷ್ಮ ಮತ್ತು ಬಗಾನ್ ಬುಡಕಟ್ಟುಗಳ ನಡುವೆ ಜನಾಂಗೀಯ ಹಿಂಸೆ ಭುಗಿಲೆದ್ದಿದೆ.

ಘಟನೆಯಲ್ಲಿ ಹಲವಾರು ಮನೆಗಳು ಮತ್ತು ಅಂಗಡಿಗಳಿಗೆ ಬೆಂಕಿ ಹಚ್ಚಲಾಗಿದ್ದು ಸ್ಥಳೀಯರು ಸುರಕ್ಷಿತ ಪ್ರದೇಶಕ್ಕೆ ಪಲಾಯನ ಮಾಡಿದ್ದಾರೆ ಪರಿಸ್ಥಿತಿಯನ್ನು ನಿಯಂತ್ರಿಸಲು ಖೈಬರ್ ಪಖ್ಯಂಕ್ಕಾದ ಕಾನೂನು ಸಚಿವ, ಸರಕಾರದ ಮುಖ್ಯ ಕಾರ್ಯದರ್ಶಿ ಐಜಿಪಿ ಹಾಗೂ ಪೊಲೀಸರನ್ನು ಹೆಲಿಕಾಪ್ಟರ್ ಮೂಲಕ ಸ್ಥಳಕ್ಕೆ ರವಾನಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಉಪರಾಷ್ಟ್ರಪತಿ ಸೇವೆ: ಸ್ಮರಣೀಯ

ಕತಾರ್,ನ.24: ಇದೊಂದು ಅವಿಸ್ಮರಣೀಯ ಕ್ಷಣವೆಂದೇ ಭಾವಿಸುತ್ತೇನೆ, 13ನೇ ಉಪರಾಷ್ಟ್ರಪತಿಗಳಾಗಿ (2017 ರಿಂದ 2022 ರವರೆಗೆ) ಭಾರತಕ್ಕೆ ಸೇವೆಸಲ್ಲಿಸಿ ಭಾರತೀಯ ರಾಜಕಾರಣದಲ್ಲಿ ಅಜಾತಶತ್ರುವಾಗಿ ತಮ್ಮದೇ ಆದ ಛಾಪು ಹೊಂದಿರುವ ವೆಂಕಯ್ಯ ನಾಯ್ಡು ರವರನ್ನು ಭೇಟಿಯಾಗಿದ್ದು.

ವಿಶೇಷ ಕಾರ್ಯಕ್ರಮ ನಿಮಿತ್ತ ಗಲ್ಫ್ ದೇಶ ಕತಾರ್‌ಗೆ ಭೇಟಿ ನೀಡಿದ್ದ ವೆಂಕಯ್ಯ ನಾಯ್ಡು ಅವರನ್ನು ಪ್ರಸ್ತುತ ಭಾರತೀಯ ಸಾಂಸ್ಕೃತಿಕ ಕೇಂದ್ರ ಕತಾರ್ ನ ಉಪಾಧ್ಯಕ್ಷ ಸುಬ್ರಮಣ್ಯ ಹೆಬ್ಬಾಗಿಲು ಅವರು ಭೇಟಿ ಮಾಡಿ ಗೌರವ ಸಲ್ಲಿಸಿದರು.

ಇದೇ ಸಂದರ್ಭದಲ್ಲಿ ನಾಯ್ಡು ಕನ್ನಡಿಗರ ಕುಶಲೋಪರಿ ವಿಚಾರಿಸಿದ್ದು ವಿಶೇಷ. ಒಬ್ಬ ದೂರದೃಷ್ಟಿ ಹೊಂದಿರುವ ಭಾರತೀಯ ರಾಜಕಾರಣಿ, ಕೇಂದ್ರ ಸರ್ಕಾರದಲ್ಲಿ ಸಂಪುಟ ದರ್ಜೆಯ ಮಂತ್ರಿಗಳಾಗಿ ವಿವಿಧ ಇಲಾಖೆಗಳಲ್ಲಿ ಸೇವೆಸಲ್ಲಿಸಿರುವ ಇವರು ಅತೀ

ಸರಳ,ಸಜ್ಜನ ರಾಜಕಾರಣಿ. ಇದೇ ಸಂದರ್ಭದಲ್ಲಿ ಕನ್ನಡ ನಾಡಿನ ಮೇಲೆ ಅವರು ಹೊಂದಿರುವ ಅಪಾರ ಗೌರವವನ್ನು ಇಲ್ಲಿ ಸ್ಮರಿಸಲಾಯಿತು ಎಂದು ಸುಬ್ರಮಣ್ಯ ಹೆಬ್ಬಾಗಿಲು ತಿಳಿಸಿದ್ದಾರೆ.

ಕೆನರಾ ಬ್ಯಾಂಕ್‌ನ ಎಂಡಿ ಮತ್ತು ಸಿಇಒ ಕೆ ಸತ್ಯನಾರಾಯಣರಾಜು, ಮಾಜಿ ಕ್ರಿಕೆಟಿಗ ವೆಂಕಟೇಶ್ ಪ್ರಸಾದ್ ಮತ್ತು ಇತರರು ಭಾನುವಾರ ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಕೆನರಾ ಬ್ಯಾಂಕ್‌ನ ವಾರ್ಷಿಕ ಮ್ಯಾರಥಾನ್‌ನಲ್ಲಿ ಫ್ಲ್ಯಾಗ್‌ಆಫ್ ಮಾಡಿದರು.

ನಿಜ್ಜರ್ ಹತ್ಯೆಯಲ್ಲಿ ಮೋದಿ-ದೋವಲ್ ಕೈವಾಡ ಆರೋಪ: ಕೆನಡಾ ಅಧಿಕಾರಿಗಳೇ ತಪ್ಪಿತಸ್ಥರು-ಜಸ್ಟಿನ್ ಟ್ರೂಡೊ ದೂಷಣೆ

ಬ್ರಾಂಪ್ಟನ್,ನ.24: ಭಾರತ ಮತ್ತು ಕೆನಡಾ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ನಡುವೆ ಕೆನಡಾದ ಪ್ರಧಾನಿ ಜಸ್ಟಿನ್ ಟ್ರುಡೊಗೆ ಸಂಕಷ್ಟ ಕಡಿಮೆಯಾಗುತ್ತಿಲ್ಲ. ದಿನವೂ ಒಂದಲ್ಲ ಒಂದು ವಿಚಾರದಲ್ಲಿ ಟೀಕೆಗಳನ್ನು ಎದುರಿಸಬೇಕಾಗುತ್ತಿದೆ. ಈಗ ಒಂದು ಪ್ರಕರಣದಲ್ಲಿ, ಟ್ರೂಡೊ ಅಂತಹ ಪರಿಸ್ಥಿತಿಯನ್ನು ಎದುರಿಸಿದ್ದು ಅಲ್ಲದೆ ತಮ್ಮದೇ ಆದ ಗುಪ್ತಚರ ಸಂಸ್ಥೆ ಅಧಿಕಾರಿಗಳನ್ನು 'ಅಪರಾಧಿಗಳು' ಎಂದು ಕರೆಯುವಂತಾಗಿದೆ. ಭಾರತದ ಪ್ರಧಾನಿ ನರೇಂದ್ರ ಮೋದಿ ಮತ್ತು ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರ ಪ್ರಕರಣದಲ್ಲಿ ಸುಳ್ಳು ಮಾಹಿತಿಯನ್ನು ಹಂಚಿಕೊಂಡಿದ್ದಕ್ಕಾಗಿ ಟ್ರೂಡೊ ತಮ್ಮದೇ ಅಧಿಕಾರಿಗಳನ್ನು ಅಪರಾಧಿಗಳು ಎಂದು ಕರೆದಿದ್ದಾರೆ. ಕೆನಡಾದ ಪ್ರಮುಖ ಪತ್ರಿಕೆ 'ಗ್ಲೋಬ್ ಅಂಡ್ ಮೇಲ್' ವರದಿಯೊಂದನ್ನು ಪ್ರಕಟಿಸಿತ್ತು. ಖಲಿಸ್ತಾನಿ ಭಯೋತ್ಪಾದಕ ಹರ್ದೀಪ್ ಸಿಂಗ್ ನಿಜ್ಜರ್ ಹತ್ಯೆಯ ಬಗ್ಗೆ ಪ್ರಧಾನಿ ಮೋದಿಗೆ ಮೊದಲೇ ಮಾಹಿತಿ ಇ